VOLUME: 16 | 28 MARCH 2026 | ಶನಿವಾರ | RS: 2 | PAGE: 06 ISSUE: 60 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ರಾಧಿಕಾ ಈ ಹಿಂದೆ ತಮಿಳು ಮತ್ತು ತೆಲುಗು ಸಿನಿಮಾ ಸೇರಿದಂತೆ ದಕ್ಷಿಣ ಭಾರತದ ವಿವಿಧ ಚಿತ್ರರಂಗಗಳಲ್ಲಿ ಕೆಲಸ ಮಾಡಿದ್ದಾರೆ. ಕುಟ್ಟಿ ರಾಧಿಕಾ ಎಂದೇ ಜನಪ್ರಿಯರಾಗಿರುವ ಅವರು, ವಿವಿಧ ಭಾಷೆಗಳು ಮತ್ತು ಪ್ರಕಾರಗಳ ಚಿತ್ರಗಳಲ್ಲಿ ನಟಿಸಿದ್ದಾರೆ. ಇತ್ತೀಚಿನ ಬೆಳವಣಿಗೆಯೆಂದರೆ, ನಟಿ ಕನ್ನಡ ಸಿನಿಮಾವನ್ನು ಮೀರಿದ ಅವಕಾಶಗಳನ್ನು ಅನ್ವೇಷಿಸುತ್ತಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಪೆಟ್ರೋಲ್-ಡೀಸೆಲ್ ಮೇಲೆ ಅಬಕಾರಿ ಸುಂಕ ಇಳಿಕೆ

ನವದೆಹಲಿ: ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಕಡಿತಗೊಳಿಸಿದ್ದು, ಇದರಿಂದಾಗಿ ಪ್ರತಿ ಲೀಟರ್ ಪೆಟ್ರೋಲ್‌ಗೆ 3 ರೂಪಾಯಿ ಮತ್ತು ಡೀಸೆಲ್ ಸುಂಕ ಶೂನ್ಯಕ್ಕೆ ಇಳಿದಿದೆ. ಇರಾನ್ ವಿರುದ್ಧ ಅಮೆರಿಕ-ಇಸ್ರೇಲ್ ಯುದ್ಧ ಮತ್ತು ಅದರ ಪರಿಣಾಮವಾಗಿ ಟೆಹ್ರಾನ್ ಹಾರ್ಮುಜ್ ಜಲಸಂಧಿಯ ಮೇಲೆ ಹೇರಿದ ದಿಗ್ಬಂಧನದಿಂದ ಉಂಟಾದ ಜಾಗತಿಕ ಇಂಧನ ಬಿಕ್ಕಟ್ಟಿನಿಂದಾಗಿ ಬೆಲೆ ಏರಿಕೆಯಾಗುವ ಭೀತಿಯ ಮಧ್ಯೆ ಈ ಕಡಿತ ಮಾಡಲಾಗಿದೆ. ಪೆಟ್ರೋಲ್ ಲೀಟರ್‌ಗೆ 13 ರೂ.ನಿಂದ 3 ರೂ.ಗೆ ಇಳಿಸಲಾಗಿದೆ.

ಹಾರ್ಮುಜ್ ಜಲಸಂಧಿಯಲ್ಲಿನ ಉದ್ವಿಗ್ನತೆ ಮತ್ತು ಅಮೆರಿಕ-ಇರಾನ್ ಯುದ್ಧದ ಬೆದರಿಕೆಯಿಂದಾಗಿ ಜಾಗತಿಕ ಕಚ್ಚಾ ತೈಲ ಬೆಲೆಗಳು ಬ್ಯಾರೆಲ್‌ಗೆ 114 ಡಾಲರ್‌ಗಿಂತ ಹೆಚ್ಚಿದ್ದವು. ಡೀಸೆಲ್ ಮೇಲಿನ ಸುಂಕ 10 ರೂ.ನಿಂದ ಶೂನ್ಯಕ್ಕೆ ಇಳಿಕೆಯಾಗಿದೆ.

ಮಧ್ಯಪ್ರಾಚ್ಯದ ಯುದ್ಧದ ಮಧ್ಯೆ, ಸಾಮಾನ್ಯ ಜನರಿಗೆ ರಿಲೀಫ್ ನೀಡಲು ಸರ್ಕಾರ ಒಂದು ಪ್ರಮುಖ ಹೆಜ್ಜೆ ಇಟ್ಟಿದೆ. ಇಂದು ಶುಕ್ರವಾರ ಬೆಳಗ್ಗೆ, ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ 10 ರೂ. ನಷ್ಟು ಕಡಿಮೆ ಮಾಡಿದೆ. ಈ ಕ್ರಮದ ನಂತರ, ಪೆಟ್ರೋಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ 3 ರೂ.ಗೆ ಇಳಿಸಲಾಗಿದೆ ಮತ್ತು ಡೀಸೆಲ್ ಮೇಲೆ ಅದು ಈಗ ಶೂನ್ಯವಾಗಿರುತ್ತದೆ. ಪ್ರಸ್ತುತ, ಪೆಟ್ರೋಲ್ ಮೇಲೆ ಲೀಟರ್‌ಗೆ 13 ರೂ. ಮತ್ತು ಡೀಸೆಲ್ ಮೇಲೆ ಲೀಟರ್‌ಗೆ 10 ರೂ. ಅಬಕಾರಿ ಸುಂಕವಿತ್ತು.




ಕೇಂದ್ರ ಸರ್ಕಾರವು ಈ ಹಿಂದೆ ಮೇ 2022 ರಲ್ಲಿ ಅಬಕಾರಿ ಸುಂಕವನ್ನು ಕಡಿತಗೊಳಿಸಿತ್ತು. ಇದರ ನಂತರ, ಪೆಟ್ರೋಲ್ ಪ್ರತಿ ಲೀಟರ್‌ಗೆ 8 ರೂ. ಮತ್ತು ಡೀಸೆಲ್ ಪ್ರತಿ ಲೀಟರ್‌ಗೆ 6ರೂ.ನಷ್ಟು ಅಗ್ಗವಾಗಿತ್ತು. ಸರ್ಕಾರದ ಈ ಕ್ರಮವು ಸಾಮಾನ್ಯ ಜನರಿಗೆ ಎಷ್ಟು ಪರಿಹಾರವನ್ನು ನೀಡುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ.

ಇಸ್ರೇಲ್-ಇರಾನಿನ ಸಂಘರ್ಷದ ಮಧ್ಯೆ ಟೆಹ್ರಾನ್ ಭಾರತಕ್ಕೆ ಹಾರ್ಮುಜ್ ಜಲಸಂಧಿಯನ್ನು ತೆರೆದ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಹಾರ್ಮುಜ್ ಜಲಸಂಧಿಯ ಮೇಲೆ ಇರಾನ್‌ನ ದಿಗ್ಬಂಧನವು ಜಾಗತಿಕ ಪೂರೈಕೆ ಸರಪಳಿ ಬಿಕ್ಕಟ್ಟನ್ನು ಸೃಷ್ಟಿಸಿತ್ತು.

# ಎಲ್ಲ ರಾಜ್ಯದ ಸಿಎಂಗಳ ಜೊತೆ ಮೋದಿ ಮಾತುಕತೆ



ಪಶ್ಚಿಮ ಏಷ್ಯಾ ಯುದ್ಧದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳೊಂದಿಗೆ ಮೋದಿ ಸಭೆ

ನವದೆಹಲಿ: ಇರಾನ್ ಜೊತೆಗಿನ ಇಸ್ರೇಲ್ ಮತ್ತು ಅಮೆರಿಕದ ಸಂಘರ್ಷ ಮತ್ತು ಹಾರ್ಮುಜ್ ಜಲಸಂಧಿಯ ನಿರ್ಬಂಧದಿಂದ ಉಂಟಾದ ಜಾಗತಿಕ ಬಿಕ್ಕಟ್ಟಿನ ಸಂದರ್ಭದಲ್ಲಿ ಭಾರತದ ಇಂಧನ ಪೂರೈಕೆಯ ಕುರಿತಾದ ಸಿದ್ಧತೆಯನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ ಅವರು ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಇಂದು ವರ್ಚುವಲ್ ಆಗಿ ವಿಡಿಯೋ ಕಾನ್ಫರೆನ್ಸ್ ನಡೆಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಯುದ್ಧದ ಮಧ್ಯೆ ಅವರ ಸನ್ನದ್ಧತೆ ಮತ್ತು ಯೋಜನೆಗಳನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ ಪ್ರಸ್ತುತ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಮಾತುಕತೆ ನಡೆಸಿದ್ದಾರೆ.

ಈ ಸಭೆಯ ವಿವರಗಳನ್ನು ಇನ್ನೂ ಬಹಿರಂಗಪಡಿಸಲಾಗಿಲ್ಲ. ಫೆಬ್ರವರಿ 28ರಂದು ಅಮೆರಿಕ ಮತ್ತು ಇಸ್ರೇಲ್ ಇರಾನ್ ಮೇಲೆ ದಾಳಿ ಮಾಡಿದಾಗ ಪ್ರಾರಂಭವಾದ ಪಶ್ಚಿಮ ಏಷ್ಯಾ ಸಂಘರ್ಷದ ಕುರಿತು ಪ್ರಧಾನಿ ಮುಖ್ಯಮಂತ್ರಿಗಳೊಂದಿಗೆ ಸಭೆ ನಡೆಸಿದ್ದು ಇದೇ ಮೊದಲು. ಅಂದಿನಿಂದ ಇರಾನ್ ಇಸ್ರೇಲ್ ಮತ್ತು ಹಲವಾರು ಕೊಲ್ಲಿ ರಾಷ್ಟ್ರಗಳ ಮೇಲೆ ದಾಳಿ ಮಾಡುವ ಮೂಲಕ ಪ್ರತೀಕಾರ ತೀರಿಸಿಕೊಂಡಿದೆ.

ಇಂದಿನ ವಿಡಿಯೋ ಸಭೆಯಲ್ಲಿ ಬಹುತೇಕ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳು ಪಾಲ್ಗೊಂಡಿದ್ದರು. ಆದರೆ, ಮಾದರಿ ನೀತಿ ಸಂಹಿತೆಯಿಂದಾಗಿ ಮುಂಬರುವ ಚುನಾವಣೆಗಳಿರುವ ರಾಜ್ಯಗಳ ಮುಖ್ಯಮಂತ್ರಿಗಳು ಇಂದಿನ ಸಭೆಯಲ್ಲಿ ಭಾಗವಹಿಸಿಲ್ಲ.

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಬಿಕ್ಕಟ್ಟು ಭಾರತಕ್ಕೆ ದೀರ್ಘಕಾಲೀನ ಪರಿಣಾಮಗಳನ್ನು ಬೀರಬಹುದು ಎಂದು ನರೇಂದ್ರ ಮೋದಿ ಎಚ್ಚರಿಸಿದ ಕೆಲವು ದಿನಗಳ ನಂತರ ಈ ಸಭೆ ನಡೆದಿದೆ. 6 ವರ್ಷಗಳ ಹಿಂದಿನ ಸಾಂಕ್ರಾಮಿಕ ರೋಗವನ್ನು ಸಭೆಯಲ್ಲಿ ಉಲ್ಲೇಖಿಸಿದ ಪ್ರಧಾನಿ ಮೋದಿ, ಕೇಂದ್ರ ಮತ್ತು ರಾಜ್ಯಗಳು ಆ ಅವಧಿಯಲ್ಲಿ ಮಾಡಿದಂತೆ ಒಟ್ಟಾಗಿ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ ಎಂದು ಮೂಲಗಳು ತಿಳಿಸಿವೆ.

# 'ಅಡುಗೆ ಅನಿಲ ಹಂಚಿಕೆಯಲ್ಲಿ ದಕ್ಷಿಣ ಭಾರತಕ್ಕೆ ಮೋಸ'

ಬೆಂಗಳೂರು: "ಚುನಾವಣೆ ಮುಗಿದ ತಕ್ಷಣ ಮತ್ತೆ ಕೇಂದ್ರ ಸರ್ಕಾರ ಪೆಟ್ರೋಲ್, ಡಿಸೇಲ್ ಬೆಲೆ ಹೆಚ್ಚಳ ಮಾಡಲಿದೆ. ಈ ರೀತಿ ಹಿಂದೆಯೂ ಮಾಡಿದ್ದಾರೆ. ಇದೆಲ್ಲವೂ ಚುನಾವಣೆ ಗಿಮಿಕ್" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಕೆಪಿಸಿಸಿ ಕಚೇರಿಯಲ್ಲಿ ಶುಕ್ರವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಹಾಗೂ ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಕೇಂದ್ರ ಸರ್ಕಾರ ದಿನಕ್ಕೆ 1 ಸಾವಿರ ಕೋಟಿ ಹೆಚ್ಚುವರಿ ತೆರಿಗೆಯನ್ನು ಸಂಗ್ರಹ ಮಾಡುತ್ತಿದೆ. ಇದು ಯಾರಿಗೆ ತಲುಪುತ್ತಿದೆ. ಈ ಹಿಂದೆ ಇಂಧನಗಳ ಬೆಲೆ ಹೆಚ್ಚಿಸಿದಾಗ 100 ನಾಟ್ ಔಟ್ ಎಂದು ಹೋರಾಟ ಮಾಡಿದ್ದೆವು. ಈಗ ಅವರಿಗೆ ಬೇಕಾದಂತಹ ಕಂಪೆನಿಗಳಿಗೆ ಅನುಕೂಲವಾಗಲು ಟ್ರಯಲ್ ರನ್ ಮಾಡುತ್ತಿದ್ದಾರೆ" ಎಂದರು.

"ಅಂತರರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾ ತೈಲ ಬೆಲೆ ಏರಿಕೆಯಾಗಿದೆ. ನಮ್ಮ ರಾಜ್ಯದ ಗ್ರಾಹಕರಿಗೆ ಅನಿಲ ಸಿಲಿಂಡರ್ ಅನ್ನು ಸರಿಯಾದ ರೀತಿಯಲ್ಲಿ ನೀಡಲು ಕೇಂದ್ರಕ್ಕೆ ಆಗುತ್ತಿಲ್ಲ"ಎಂದರು.

"ಹೊರ್ಮುಜ್ ದಾಟಿ ಎರಡು ಹಡಗುಗಳು ದೇಶಕ್ಕೆ ಬಂದವು. ಅದರಲ್ಲಿ ಒಂದನ್ನು ದಕ್ಷಿಣಕ್ಕೆ ಅಂದರೆ ಕರ್ನಾಟಕ, ತಮಿಳುನಾಡಿಗೆ ಕಳುಹಿಸಬಹುದಿತ್ತಲ್ಲವೇ? ಗುಜರಾತಿಗೆ ಏಕೆ ಹೋದವು. ಈಗ ಕೇರಳ, ತಮಿಳುನಾಡಿನಲ್ಲಿ ಚುನಾವಣೆಗಳಿವೆ.




ದಕ್ಷಿಣದ ರಾಜ್ಯಗಳಲ್ಲಿ ಅವರ ಪ್ರಭಾವ ಇಲ್ಲ ಎನ್ನುವ ಕಾರಣಕ್ಕೆ ದಕ್ಷಿಣ ಭಾರತವನ್ನ ಕೆಟ್ಟ ದೃಷ್ಟಿಯಿಂದ ನೋಡುತ್ತಿದ್ದಾರೆ" ಎಂದರು. "ಈ ಹಿಂದೆ ಎಲ್ಲಾ ಪೆಟ್ರೋಲ್ ಬಂಕ್ ಗಳಲ್ಲಿ ಮುಸಲ್ಮಾನ ಹೆಣ್ಣುಮಗಳು ಗ್ಯಾಸ್ ನೀಡಿದ್ದಕ್ಕೆ ಧನ್ಯವಾದ ಹೇಳುತ್ತಿರುವ ಹೋರ್ಡಿಂಗ್ ಇರುತ್ತಿತ್ತು. ಈಗ ಏಕೆ ಅದನ್ನೆಲ್ಲಾ ತೆಗೆದು ಹಾಕಿದ್ದಾರೆ. ಕೇಂದ್ರ ಸರ್ಕಾರ ಪ್ರತಿದಿನ ಗ್ರಾಹಕರ ಪಿಕ್ ಪಾಕೆಟ್ ಮಾಡುತ್ತಿದೆ"ಎಂದರು.

"2014, 26 ಮೇ ತಿಂಗಳಿಂದ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಾಗುತ್ತಾ ಹೋಯಿತು. ಪೆಟ್ರೋಲ್ 71, ಡೀಜೆಲ್ ಅನ್ನು 56 ರೂಪಾಯಿಗೆ ನೀಡಲಾಗುತ್ತಿತ್ತು. ಈಗ 103 ರೂಪಾಯಿ ಆಗಿದೆ. ಕಚ್ಚಾ ತೈಲಬೆಲೆ ಕಡಿಮೆ ಇದ್ದರೂ ನಮ್ಮಲ್ಲಿ ಬೆಲೆ ಹೆಚ್ಚಳಕ್ಕೆ ಏನು ಕಾರಣ" ಎಂದು ಪ್ರಶ್ನಿಸಿದರು.

ಕೇಂದ್ರ ಸರ್ಕಾರ ಇಂಧನ ತೈಲದ ಮೇಲಿನ ವಿಶೇಷ ಹೆಚ್ಚುವರಿ ಅಬಕಾರಿ ಸುಂಕ' ಇಳಿಕೆ ಬಗ್ಗೆ ಕೇಳಿದಾಗ, "ಭಾರತ ಸರ್ಕಾರ ನಮ್ಮನ್ನ ಕೊಲೆ ಮಾಡುತ್ತಿದೆ.

ಚುನಾವಣೆಗಾಗಿ ತೈಲ ಬೆಲೆ ಕಡಿಮೆ ಮಾಡಿದ್ದಾರೆ. ನಯಾರ ಕಂಪನಿಯವರು ಇಂಧನ ಬೆಲೆಯನ್ನು ಹೆಚ್ಚಳ ಮಾಡಿದ್ದಾರೆ" ಎಂದು ಹರಿಹಾಯ್ದರು. ರಾಜ್ಯ ಸರ್ಕಾರ ತೈಲ ಬೆಲೆ ಕಡಿಮೆ ಮಾಡಲಿದೆಯೇ ಎಂದು ಕೇಳಿದಾಗ, "ಆನಂತರ ಇದರ ಬಗ್ಗೆ ಮಾತನಾಡುತ್ತೇವೆ" ಎಂದರು.

# ಎರಡೂ ಕಡೆ ಕಾಂಗ್ರೆಸ್ ಗೆಲ್ಲಲಿದೆ: ಸಿಎಂ ವಿಶ್ವಾಸ



ಬೆಂಗಳೂರು: ದಾವಣಗೆರೆ ಉಪಚುನಾವಣೆಗೆ ಸ್ವತಂತ್ರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ಸಾದಿಕ್ ಪೈಲ್ವಾನ್ ತಾವು ಕಣದಿಂದ ಹಿಂದೆ ಸರಿದಿರುವುದಾಗಿಘೋಷಿಸಿದ್ದಾರೆ. ಹೀಗಾಗಿ ದಾವಣಗೆರೆ ಮತ್ತು ಬಾಗಲಕೋಟೆ ಎರಡೂ ಕಡೆ ಕಾಂಗ್ರೆಸ್ ಗೆಲ್ಲಲಿದೆ ಎಂಬ ವಿಶ್ವಾಸವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಕ್ತಪಡಿಸಿದರು.

ಅವರು ಕ್ವೀನ್ಸ್ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಮಾಧ್ಯಮಗೋಷ್ಠಿ ನೆಡೆಸಿ ಮಾತನಾಡಿದರು.

ಸಾದಿಕ್ ಪೈಲ್ವಾನ್ ಅವರು ನನಗೆ ಬಹಳ ವರ್ಷಗಳಿಂದ ಪರಿಚಯದವರಾಗಿದ್ದಾರೆ. ಮೈಸೂರಿನ ಕುಸ್ತಿ ಅಖಾಡಗಳಲ್ಲಿ ಅವರು ಪಾಲ್ಗೊಂಡಾಗ ಭೇಟಿಯಾಗುತ್ತಿದ್ದೆ ಎಂದು ತಿಳಿಸಿದ ಮುಖ್ಯಮಂತ್ರಿಗಳು ಅಭ್ಯರ್ಥಿಯಾಗಬೇಕೆಂದು ಬಯಸುವುದು ತಪ್ಪೇನಿಲ್ಲ ಎಂದರು. ನಿನ್ನೆ 11 ಜನ ನಾಮಪತ್ರ ಹಿಂಪಡೆದಿದ್ದಾರೆ. ಪಕ್ಷದ ಕೋರಿಕೆ ಮೇರೆಗೆ ಸಾದಿಕ್ ಅವರು ಕಣದಿಂದ ಹಿಂದೆ ಸರಿದಿರುವುದರಿಂದ ಅವರಿಗೆ ಮುಖ್ಯಮಂತ್ರಿಗಳು ಧನ್ಯವಾದ ಹೇಳಿದರು.

ಶಾಸಕ ರಿಜ್ವಾನ್ ಅರ್ಷದ್, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್ ಅವರು ದಾವಣಗೆರೆಗೆ ಭೇಟಿ ನೀಡಿದ್ದರು. ಅವರು ತಲುಪುವುದು ತಡವಾದ್ದರಿಂದ ನಾಮ ಪತ್ರ ಸಲ್ಲಿಸುವುದನ್ನು ತಡೆಯಲು ಸಾಧ್ಯವಾಗಲಿಲ್ಲ. ವಿಧಾನಪರಿಷತ್ ನಲ್ಲಿ ಉತ್ತರ ನೀಡಬೇಕಿದ್ದರಿಂದ ನಾನು ಖುದ್ದು ಭೇಟಿ ನೀಡಲಾಗಿಲ್ಲ ಎಂದರು. ಸಾದಿಕ್ ಪೈಲ್ವಾನ್ ಅವರು ಕಾಂಗ್ರೆಸ್ ನಲ್ಲಿ ಸುಮಾರು 40 ವರ್ಷಗಳಿಂದ ಇದ್ದು, ಪಕ್ಷದ ಕಟ್ಟಾಳು ದಾವಣಗೆರೆಯಲ್ಲಿ 70 ಸಾವಿರ ಮುಸ್ಲಿಂ ಮತದಾರರಿದ್ದು, ಟಿಕೆಟ್ ಆಕಾಂಕ್ಷಿಗಳಾಗಿದ್ದರು. ಹೈಕಮಾಂಡ್ ಇದನ್ನು ಪರಿಶೀಲಿಸಿ, ಮೃತರಾದವರ ಕುಟುಂಬದವರಿಗೆ ಟಿಕೆಟ್ ನೀಡುವ ಪದ್ಧತಿಯಂತೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರ ಪುತ್ರ ಸಮರ್ಥ್ ಅವರಿಗೆ ಟಿಕೆಟ್ ನೀಡಲಾಗಿದೆ ಎಂದರು.



ಶ್ರೀರಾಮನವಮಿ ಹಿನ್ನೆಲೆ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ಬ್ರಹ್ಮ ಕರಾರ್ಚಿತ ಮೂಲ ರಾಮದೇವರು ಹಾಗೂ ಇತರ ಸಂಸ್ಥಾನ ಮೂರ್ತಿಗಳಿಗೆ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥ ಸ್ವಾಮಿ ಮಹಾ ಅಭಿಷೇಕವನ್ನು ನೆರವೇರಿಸಿದರು. ಅಭಿಷೇಕದ ನಂತರ ಮೂಲರಾಮ ದೇವರು, ದಿಗ್ವಿಜಯ ರಾಮದೇವರು ಮತ್ತು ಜಯರಾಮದೇವರುಗಳಿಗೆ ಗಂಧ ಲೇಪನವನ್ನು ಅರ್ಪಿಸಿದರು ಬಳಿಕ ಸಂಸ್ಥಾನ ಪೂಜೆ ನೆರವೇರಿಸಲಾಯಿತು.

# ಋತುಚಕ್ರ ಕಡ್ಡಾಯ ರಜೆ ಪ್ರಶ್ನಿಸಿ ಮಹಿಳೆಯರಿಂದಲೇ ಹೈಕೋರ್ಟ್‌ಗೆ ಅರ್ಜಿ

ಬೆಂಗಳೂರು: ರಾಜ್ಯದಲ್ಲಿ ವಿವಿಧ ಕಾರ್ಮಿಕ ಕಾಯ್ದೆಗಳಡಿ ನೋಂದಣಿಯಾಗಿರುವ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಋತುಚಕ್ರದ ಸಮಯದಲ್ಲಿ ಮಾಸಿಕ ಒಂದು ದಿನದ ವೇತನಸಹಿತ ರಜೆ ನೀಡುವ ಸಂಬಂಧ ರಾಜ್ಯ ಸರ್ಕಾರ ಹೊರಡಿಸಿರುವ ಅಧಿಸೂಚನೆಯನ್ನು ಪ್ರಶ್ನಿಸಿ ಮಹಿಳೆಯರೇ ಹೈಕೋರ್ಟ್ ಕದ ತಟ್ಟಿದ್ದಾರೆ.

ರಾಜ್ಯ ಕಾರ್ಮಿಕ ಇಲಾಖೆಯು 2025ರ ನ.20ರಂದು ಹೊರಡಿಸಿರುವ ಅಧಿಸೂಚನೆ ಪ್ರಶ್ನಿಸಿ ರಾಜ್ಯದ ವಿವಿಧ ಔದ್ಯೋಗಿಕ ಕ್ಷೇತ್ರದಲ್ಲಿ ಉದ್ಯೋಗದಲ್ಲಿರುವವರು, ಮತ್ತಿತರರು ಅರ್ಜಿ ಸಲ್ಲಿಸಿದ್ದಾರೆ. ಈ ಅರ್ಜಿಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯನ್ನು ಪ್ರತಿವಾದಿಯನ್ನಾಗಿಸಿದ್ದು, ಇನ್ನಷ್ಟೇ ವಿಚಾರಣೆಗೆ ಬರಬೇಕಿದೆ.

ಋತುಚಕ್ರದ ಸಮಯದಲ್ಲಿ ಮಾಸಿಕ ಒಂದು ದಿನದ ವೇತನಸಹಿತ ರಜೆ ನೀಡುವ ಸಂಬಂಧ ರಾಜ್ಯ ಕಾರ್ಮಿಕ ಇಲಾಖೆ ಹೊರಡಿಸಿರುವ ಅಧಿಸೂಚನೆ ಮೇಲ್ನೋಟಕ್ಕೆ ಉತ್ತಮವಾಗಿ ಕಂಡರೂ, ನೈಜವಾಗಿ ಸಂವಿಧಾನದ ಪರಿಚ್ಛೇದ 14ರ ಅಡಿಯ ಸಮಾನತೆಯ ಮೂಲಭೂತ ಹಕ್ಕುಗಳಿಗೆ ವಿರುದ್ಧವಾಗಿದೆ. ಲಿಂಗ ತಾರತಮ್ಯಕ್ಕೆ ಎಡೆಮಾಡಿಕೊಡುತ್ತದೆ.

# ಜಿಂದಾಲ್‌ನಲ್ಲಿ 3 ಕರಡಿಗಳ ಸೆರೆ

ಬಳ್ಳಾರಿ: ಜಿಲ್ಲೆಯ ಅರಣ್ಯ ಇಲಾಖೆ ಅಧಿಕಾರಿಗಳು ಜಿಂದಾಲ್‌ನಲ್ಲಿದ್ದ ಮೂರು ಕರಡಿಗಳನ್ನು ಏಕಕಾಲಕ್ಕೆ ಸೆರೆಹಿಡಿದಿದ್ದಾರೆ.

ಬಳ್ಳಾರಿ ಜಿಲ್ಲೆಯ ತೋರಣಗಲ್ ಬಳಿಯ ಜಿಂದಾಲ್‌ನ ವಿದ್ಯಾನಗರದ ಟೌನ್‌ಶಿಪ್‌ನಲ್ಲಿ ಕಳೆದ 10 ತಿಂಗಳಿಂದ ಒಂದು ಕರಡಿ ಹಾಗೂ ಎರಡು ಮರಿಗಳು ಬೀಡು ಬಿಟ್ಟಿದ್ದವು. ಪ್ರತೀ ದಿನ ಕರಡಿಗಳನ್ನ ಕಂಡು ಜಿಂದಾಲ್ ಕಾರ್ಮಿಕರು, ನೌಕರರು ಹಾಗೂ ನಿವಾಸಿಗಳು ಆತಂಕಕ್ಕೆ ಒಳಗಾಗಿದ್ದರು.

ಹೀಗಾಗಿ ವಿಶೇಷ ಕಾರ್ಯಾಚರಣೆ ಮೂಲಕ ಮೂರು ಕರಡಿಗಳನ್ನ ಏಕಕಾಲದಲ್ಲೇ ಅರಣ್ಯ ಇಲಾಖೆ ಅಧಿಕಾರಿಗಳು ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಮೊಬೈಲ್ ಆಪ್ ಮೂಲಕ ಬೋನ್ ಲಾಕ್ ಮಾಡಬಹುದು. ಈ ಹೊಸ ತಂತ್ರವನ್ನು ಬಳಸಿ ಅರಣ್ಯ ಅಧಿಕಾರಿಗಳು ಮೂರು ಕರಡಿಗಳನ್ನು ಸೆರೆಹಿಡಿದಿದ್ದಾರೆ. ಬಳಿಕ ಕರಡಿಗಳನ್ನ ರೇಡಿಯೋ-ಕಾಲರ್ ಅಳವಡಿಸಿ, ಕರಡಿ ಧಾಮಕ್ಕೆ ಬಿಡಲಾಯಿತು.

# ಜಿಬಿಎ ಬಜೆಟ್: ಗುಂಡಿಮುಕ್ತ, ಆರೋಗ್ಯದ ಬಲವರ್ಧನೆಗೆ ಒತ್ತು

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಬರುವ ಐದು ಹೊಸ ಪಾಲಿಕೆಗಳಲ್ಲಿ ಒಂದಾಗಿರುವ ಬೆಂಗಳೂರು ಕೇಂದ್ರ ಮಹಾನಗರ ಪಾಲಿಕೆಯ ಚೊಚ್ಚಲ ಬಜೆಟ್ ಮಂಡನೆಯಾಗಿದೆ. 2026-27ನೇ ಸಾಲಿನ ಬಜೆಟ್‌ನಲ್ಲಿ ರೂ.3,427 ಕೋಟಿ ರೂ.ಗಳ ಅಂದಾಜು ವೆಚ್ಚದೊಂದಿಗೆ ರಸ್ತೆಗಳನ್ನು ಗುಂಡಿಮುಕ್ತಗೊಳಿಸುವುದು ಮತ್ತು ಸಾರ್ವಜನಿಕ ಆರೋಗ್ಯದ ಬಲವರ್ಧನೆಗೆ ಒತ್ತು ನೀಡಿದೆ.

ಬೆಂಗಳೂರು ಕೇಂದ್ರ ಮಹಾನಗರ ಪಾಲಿಕೆ ರಚನೆಯಾದ ನಂತರ ಮಂಡಿಸಿದ ಮೊದಲ ಬಜೆಟ್ ಇದಾಗಿದೆ. ಸೆಪ್ಟೆಂಬರ್ 2025 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬದಲಿಗೆ ಬೃಹತ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಬೆಂಗಳೂರನ್ನು ಕೇಂದ್ರ, ಪೂರ್ವ, ಪಶ್ಚಿಮ, ಉತ್ತರ ಮತ್ತು ದಕ್ಷಿಣ ಎಂದು ಐದು ಮಹಾನಗರ ಪಾಲಿಕೆಗಳಾಗಿ ವಿಂಗಡಿಸಲಾಗಿದೆ.

2026-27 ರ ಹಣಕಾಸು ವರ್ಷಕ್ಕೆ ಕೇಂದ್ರ ಮಹಾನಗರ ಪಾಲಿಕೆ ಆಯುಕ್ತ ಪಿ. ರಾಜೇಂದ್ರ ಚೋಳನ್ ಬಜೆಟ್ ಮಂಡಿಸಿದರು. ಬಜೆಟ್ ಅನ್ನು ನಿಜವಾಗಿಯೂ ನಾಗರಿಕ ಮತ್ತು ಮಾನವ-ಕೇಂದ್ರಿತ" ಎಂದು ಕರೆದಿದ್ದು, ಗೋಲ್ಡನ್ ಅವರ್ ನಲ್ಲಿ ಉಚಿತ ಜೀವ ರಕ್ಷಣೆಗಾಗಿ ಮೊದಲ ಪ್ರತಿಕ್ರಿಯೆ ಘಟಕ ಯೋಜನೆಯಡಿ ಬೈಕ್ ಆಂಬ್ಯುಲೆನ್ಸ್‌ಗಳನ್ನು ನಿಯೋಜಿಸುವುದಾಗಿ ಹೇಳಿದೆ. ಬಡವರ ಮನೆ ಬಾಗಿಲಿಗೆ ಕಾರ್ಪೊರೇಟ್ ಮಾದರಿಯ ವೈದ್ಯಕೀಯ ಸೇವೆಗಳನ್ನು ತಲುಪಿಸಲು 19 ಕೋಟಿ ರೂ. ವೆಚ್ಚದಲ್ಲಿ 22 ಹೈಟೆಕ್ 'ಸ್ಮಾರ್ಟ್ ವರ್ಚುವಲ್ ಕ್ಲಿನಿಕ್'ಗಳನ್ನು ಸ್ಥಾಪಿಸುವುದಾಗಿ ಘೋಷಿಸಲಾಗಿದೆ.

ಹಿರಿಯರ ವಾಡಿ' ಆರಂಭ: ಅಲ್ಲದೇ, ವಿಶೇಷ ಚೇತನ ಮಕ್ಕಳ ಡೇ-ಕೇರ್ ಸೆಂಟರ್ 'ವಾತ್ಸಲ್ಯ ಮನೆ' ಮತ್ತು ಆರೈಕೆದಾರರಿಲ್ಲದ ವೃದ್ಧರಿಗೆ ವಸತಿ ಕಲ್ಪಿಸುವ 'ಹಿರಿಯರ ವಾಡಿ' ಪ್ರಾರಂಭಿಸಲು ಬಜೆಟ್ ಪ್ರಸ್ತಾಪಿಸಿದೆ. ಅಂದಾಜು 3,427 ಕೋಟಿ ಆದಾಯ ಮತ್ತು 3,425 ಕೋಟಿ ರೂ.ವೆಚ್ಚದ ಬಜೆಟ್ ಆಗಿದ್ದು, 1.38 ಕೋಟಿ ರೂ. ಹೆಚ್ಚುವರಿ ಹೊರೆಯಾಗಲಿದೆ. ಆರೋಗ್ಯವಂತ ಬೆಂಗಳೂರು ಯೋಜನೆಯಡಿ, ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು 40 ಕೋಟಿ ರೂ. ಮೀಸಲಿರಿಸಲಾಗಿದೆ. ಶತಮಾನದಷ್ಟು ಹಳೆಯದಾದ ರಸೆಲ್ ಮಾರುಕಟ್ಟೆಯ ಪುನಶ್ಚೇತನಕ್ಕೆ 70 ಕೋಟಿ ರೂ. ಇತರೆ ಮಾರುಕಟ್ಟೆಗಳ ಅಭಿವೃದ್ಧಿಗೆ ಹೆಚ್ಚುವರಿಯಾಗಿ 20 ಕೋಟಿ ರೂ. ಮೀಸಲಿರಿಸಲಾಗಿದೆ.




ಎಲ್‌ಇಡಿ ಲೈಟ್‌ಗಳ ಬಳಕೆಯ ಮೂಲಕ ವಿದ್ಯುತ್ ಬಿಲ್‌ಗಳಲ್ಲಿ ಶೇ. 60 ರಷ್ಟು ಕಡಿತವನ್ನು ಯೋಜಿಸಿದೆ. ಕೇಂದ್ರ ಬೆಂಗಳೂರನ್ನು ಸುರಕ್ಷಿತ, ಹೆಚ್ಚು ಸುಸ್ಥಿರ ನಗರವಾಗಿ ಪರಿವರ್ತಿಸಲು ನೀಲಿ-ಹಸಿರು ಕಾರಿಡಾರ್‌ಗಳ ರಚನೆಯನ್ನು ಪ್ರಸ್ತಾಪಿಸಿದೆ. ಜಾಗತಿಕ ಮಟ್ಟದ ರಸ್ತೆಗಳು ಮತ್ತು ಸಾರ್ವಜನಿಕ ಸ್ಥಳಗಳ ವಿನ್ಯಾಸಕ್ಕಾಗಿ ಅರ್ಬನ್ ಡಿಸೈನ್ ಸೆಲ್ ಅನ್ನು ಸ್ಥಾಪಿಸಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಿಬೀದಿ ಆಹಾರ ಮಾರಾಟಗಾರರಿಗೆ ಆಹಾರ ಸುರಕ್ಷತೆಯಲ್ಲಿ ತರಬೇತಿ ನೀಡಲು ಮತ್ತು ಪ್ರಮಾಣೀಕರಿಸಲು 25 ಲಕ್ಷ ರೂ. ಬಜೆಟ್‌ನೊಂದಿಗೆ ಶುದ್ಧ ಆಹಾರದ ಕಿರುಮಳಿಗೆ ಪ್ರಾಯೋಗಿಕ ಯೋಜನೆಯನ್ನು ಘೋಷಿಸಲಾಗಿದೆ.

ಪಾಲಿಕೆಯು 2025-26ರಲ್ಲಿ 900 ಕೋಟಿ ರೂ. ತೆರಿಗೆಯನ್ನು ಸಂಗ್ರಹಿಸಿದ್ದು, 2026-27ರಲ್ಲಿ 1,150 ಕೋಟಿ ರೂ. ಆದಾಯದ ಗುರಿಯನ್ನು ಹೊಂದಿದೆ. ತನ್ನ 438 ಆಸ್ತಿಗಳಿಂದ 58 ಕೋಟಿ ರೂ. ಬಾಡಿಗೆ ಆದಾಯವನ್ನು ನಿರೀಕ್ಷಿಸುತ್ತದೆ. ಇದಲ್ಲದೆ, 112 ಮಾರುಕಟ್ಟೆಗಳಾದ್ಯಂತ 4,772 ಅಂಗಡಿಗಳಿಂದ 25 ಕೋಟಿ ರೂ. ಬಾಡಿಗೆ ಆದಾಯವನ್ನು ನಿರೀಕ್ಷಿಸಲಾಗಿದೆ.

ಲೋಕೋಪಯೋಗಿ ಕಾಮಗಾರಿಗೆ 1,760 ಕೋಟಿ ಮೀಸಲಿಟ್ಟಿದ್ದು, 217.50 ಕೋಟಿ ವೆಚ್ಚದಲ್ಲಿ 145 ಕಿ.ಮೀ ಉದ್ದದ ಆರ್ಟಿರಿಯಲ್ ಮತ್ತು ಸಬ್ ಆರ್ಟಿರಿಯಲ್ ರಸ್ತೆಗಳಿಗೆ ಡಾಂಬರೀಕರಣ ಮಾಡಲು ಬಜೆಟ್ ನಲ್ಲಿ ಅವಕಾಶ ಕಲ್ಪಿಸಲಾಗಿದೆ. 200 ಕೋಟಿ ವೆಚ್ಚದಲ್ಲಿ 115 ಕಿ.ಮೀ ವಾರ್ಡ್ ರಸ್ತೆಗಳ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳಲಿದ್ದು, ಅವುಗಳನ್ನು "ಗುಂಡಿ ಮುಕ್ತ" ಮಾಡುವತ್ತ ಗಮನ ಹರಿಸಲಿದೆ. ಇದಲ್ಲದೆ ಪ್ರತಿ ವಾರ್ಡ್‌ನ ಸಮಗ್ರ ಅಭಿವೃದ್ಧಿಗೆ 141.75 ಕೋಟಿ ರೂ., ಪ್ರತಿ ವಾರ್ಡ್‌ಗೆ 2.25 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ ಎಂದು ಬಜೆಟ್‌ನಲ್ಲಿ ತಿಳಿಸಲಾಗಿದೆ. 10 ಹೊಸ ಸಮುದಾಯ ಭವನಗಳ ನಿರ್ಮಾಣ, ವಿಶ್ವಬ್ಯಾಂಕ್ ನೆರವಿನೊಂದಿಗೆ ಮಳೆನೀರು ಚರಂಡಿಗಳ ಮೇಲ್ದರ್ಜೆಗೇರಿಸುವುದು, 15 ಕೋಟಿ ರೂ. ವೆಚ್ಚದಲ್ಲಿ ಪ್ರಮುಖ ರಸ್ತೆಗಳ ವಿದ್ಯುದೀಕರಣ, ಮತ್ತು ಫ್ಲೈಓವರ್‌ಗಳ ಅಡಿಯಲ್ಲಿರುವ ಜಾಗಗಳನ್ನು ಮೈಕ್ರೋ ಪಾರ್ಕ್‌ಗಳು ಮತ್ತು ಕಲಾತ್ಮಕ ಕೇಂದ್ರಗಳಾಗಿ ಪರಿವರ್ತಿಸುವುದು ಇತರ ಕೆಲಸಗಳಾಗಿವೆ. 35.70 ಕೋಟಿ ರೂ. ವೆಚ್ಚದಲ್ಲಿ 500 ವೈಯಕ್ತಿಕ ಮನೆಗಳ ನಿರ್ಮಾಣವನ್ನೂ ಕೈಗೆತ್ತಿಕೊಳ್ಳಲಿದೆ.

ನೈರ್ಮಲ್ಯ ಕಾರ್ಮಿಕರ ಕಲ್ಯಾಣಕ್ಕಾಗಿ ಪ್ರತಿ ವಾರ್ಡ್‌ನಲ್ಲಿ ಸುಸಜ್ಜಿತ ಮಸ್ಟರಿಂಗ್ ಕೇಂದ್ರಗಳು ಮತ್ತು ವಿಶ್ರಾಂತಿ ಸೌಲಭ್ಯಗಳೊಂದಿಗೆ ಸುವಿಧಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು. 2 ಕೋಟಿ ವೆಚ್ಚದಲ್ಲಿ ಬೀದಿ ನಾಯಿಗಳಿಗೆ ವೈಜ್ಞಾನಿಕ ಆಶ್ರಯ ಮತ್ತು ರಕ್ಷಣಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಸಾಕುಪ್ರಾಣಿಗಳಿಗೆ ಉಚಿತ ಚಿಕಿತ್ಸೆ, ಜನನ ನಿಯಂತ್ರಣ ಶಸ್ತ್ರಚಿಕಿತ್ಸೆಗಳು ಮತ್ತು ಲಸಿಕೆ ಅಭಿಯಾನಗಳನ್ನು ಸಹ ನಡೆಸಲಾಗುವುದು ಎಂದು ಬಜೆಟ್ ನಲ್ಲಿ ತಿಳಿಸಲಾಗಿದೆ. ಬಜೆಟ್‌ನಲ್ಲಿ 215ಕ್ಕೂ ಹೆಚ್ಚು ಉದ್ಯಾನವನಗಳ ಸಮಗ್ರ ಅಭಿವೃದ್ಧಿಗೆ 15 ಕೋಟಿ ರೂ. ಪುಟಾಣಿ ಪಾರ್ಕ್ (ಮಕ್ಕಳ ಉದ್ಯಾನ) ನಿರ್ಮಿಸಲಾಗುವುದು, ಮರಗಳ ಆರೈಕೆ ಮತ್ತು ನಿರ್ವಹಣೆಗೆ 19.38 ಕೋಟಿ ರೂ. ಮೀಸಲಿಡಲಾಗಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
28/03/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಟಿಸಿಎಸ್ ವರ್ಲ್ಡ್ 10 ಕೆ ಟೂರ್ನಿಯ 18ನೇ ಆವೃತ್ತಿಯಲ್ಲಿ ಗುಲ್ವೀರ್ ಸಿಂಗ್

ಬೆಂಗಳೂರು

10,000 ಮೀ ಮತ್ತು 5,000 ಮೀ ರಾಷ್ಟ್ರೀಯ ದಾಖಲೆ ಹೊಂದಿರುವ ಗುಲ್ವೀರ್ ಸಿಂಗ್ ಅವರು ಏಪ್ರಿಲ್ 26 ರ ಭಾನುವಾರ ನಡೆಯಲಿರುವ ಟಿಸಿಎಸ್ ವರ್ಲ್ಡ್ 10 ಕೆ ಬೆಂಗಳೂರಿನ 18 ನೇ ಆವೃತ್ತಿಯಲ್ಲಿ ಭಾರತದ ಎಲೈಟ್ ವಿಭಾಗವನ್ನು ಮುನ್ನಡೆಸಲಿದ್ದಾರೆ.



ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್, ಈ ಸ್ಪರ್ಧೆಯು ಪ್ರಪಂಚದಾದ್ಯಂತದ ಕೆಲವು ಅತ್ಯುತ್ತಮ ದೂರದ ಓಟಗಾರರನ್ನು ಆಕರ್ಷಿಸುತ್ತಲೇ ಇದೆ ಮತ್ತು ಭಾರತೀಯ ಕ್ರೀಡಾಪಟುಗಳಿಗೆ ತವರು ನೆಲದಲ್ಲಿ ಎಲೈಟ್ ಅಂತಾರಾಷ್ಟ್ರೀಯ ಸ್ಪರ್ಧೆಯ ವಿರುದ್ಧ ತಮ್ಮನ್ನು ತಾವು ಪರೀಕ್ಷಿಸಿಕೊಳ್ಳುವ ಅವಕಾಶವನ್ನು ಒದಗಿಸುತ್ತದೆ.

ಈ ತಿಂಗಳ ಆರಂಭದಲ್ಲಿ ನ್ಯೂಯಾರ್ಕ್ ಸಿಟಿ ಹಾಫ್ ಮ್ಯಾರಥಾನ್ ನಲ್ಲಿ ಮೂರನೇ ಸ್ಥಾನ ಪಡೆದ ಗುಲ್ವೀರ್ ಸಿಂಗ್ ರೆಡ್-ಹಾಟ್ ಫಾರ್ಮ್ ನಲ್ಲಿ ಓಟಕ್ಕೆ ಇಳಿದಿದ್ದಾರೆ. ಅಲ್ಲಿ ಅವರು 59:42 ಕ್ಕೆ ಗುರಿ ತಲುಪಿದರು. ಇದು ಯಾವುದೇ ಭಾರತೀಯ ಹಾಫ್ ಮ್ಯಾರಥಾನ್ ಓಟಗಾರನಿಗೆ ಅತ್ಯುತ್ತಮ ಸಮಯವಾಗಿದೆ. 10,000 ಮೀ (27:00.22) ಮತ್ತು 5000 ಮೀ. (12:59.77) ಎರಡರಲ್ಲೂ ರಾಷ್ಟ್ರೀಯ ದಾಖಲೆ ಹೊಂದಿರುವ ಗುಲ್ವೀರ್ 2025 ರ ಋತುವಿನಲ್ಲಿ ಅತ್ಯುತ್ತಮ ಪ್ರದರ್ಶನವನ್ನು ನೀಡಿದರು.

ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್ ಷಿಪ್ ನಲ್ಲಿ ಎರಡೂ ಸ್ಪರ್ಧೆಗಳನ್ನು ಗೆದ್ದಿದ್ದಾರೆ. ಅವರು 2025 ರ ಟಾಟಾ ಸ್ಟೀಲ್ ವರ್ಲ್ಡ್ 25 ಕೆ ಕೋಲ್ಕತ್ತಾ ಸ್ಪರ್ಧೆಯನ್ನು 1:12:06 ದಾಖಲೆ ಸಮಯದಲ್ಲಿ ಪೂರ್ಣಗೊಳಿಸಿದ್ದಾರೆ.

"ಟಿಸಿಎಸ್ ವರ್ಲ್ಡ್ 10 ಕೆ ಬೆಂಗಳೂರು ದೇಶದ ಅತ್ಯಂತ ಸ್ಪರ್ಧಾತ್ಮಕ ರೋಡ್ ರೇಸ್ ಗಳಲ್ಲಿ ಒಂದಾಗಿದೆ ಮತ್ತು ಈ ವರ್ಷ ಸಾಲುಗಟ್ಟಿ ನಿಲ್ಲಲು ನಾನು ಉತ್ಸುಕನಾಗಿದ್ದೇನೆ. ಬೆಂಗಳೂರಿನ ರಸ್ತೆಗಳಲ್ಲಿ ಮತ್ತೊಮ್ಮೆ ನನ್ನನ್ನು ಪರೀಕ್ಷಿಸಲು ಇದೊಂದು ಉತ್ತಮ ಅವಕಾಶ' ಎಂದು ಗುಲ್ವೀರ್ ಸಿಂಗ್ ಹೇಳಿದ್ದಾರೆ.

ತಿಂಗಳ ಆರಂಭದಲ್ಲಿ, ಸಂಘಟಕರು ಓಟದ 18 ನೇ ಆವೃತ್ತಿಗಾಗಿ ಪ್ರಬಲ ಅಂತಾರರಾಷ್ಟ್ರೀಯ ಎಲೈಟ್ ಪಟ್ಟಿಯನ್ನು ಘೋಷಿಸಿದರು, ಇದರಲ್ಲಿ ಉಗಾಂಡಾದ ಹಾರ್ಬರ್ಟ್ ಕಿಬೆಟ್, ಕೀನ್ಯಾದ ವಿನ್ಸೆಂಟ್ ಲ್ಯಾಂಗಾಟ್, ಇಥಿಯೋಪಿಯಾದ ಗೆಮೆಚು ಡಿಡಾ ಮತ್ತು ಎರಿಟ್ರಿಯಾದ ಸ್ಯಾಮ್ಯುಯೆಲ್ ಹ್ಯಾಬ್ಟೆ ಸೇರಿದ್ದಾರೆ.

# ಹೊಸ ಅಭಿಯಾನ ಆರಂಭಿಸಿದ ಓಲಾ

ಬೆಂಗಳೂರು

ಓಲಾ ಎಲೆಕ್ಟ್ರಿಕ್ ತನ್ನ #ಎಂಡ್ಐಸಿಇಏಜ್ ಅಭಿಯಾನವನ್ನು ಆರಂಭಿಸುವುದಾಗಿ ಘೋಷಿಸಿದೆ. ವರ್ಗದ ಅತ್ಯುತ್ತಮ ಉತ್ಪನ್ನಗಳು, ಆಕರ್ಷಕ ಬೆಲೆ ನಿಗದಿ ಮತ್ತು ಖಚಿತ ಮಾಲೀಕತ್ವದ ಅನುಭವವನ್ನು ಒಟ್ಟುಗೂಡಿಸುವ ಮೂಲಕ ಭಾರತದಲ್ಲಿ ವಿದ್ಯುತ್ ವಾಹನಗಳ ಬಳಕೆಯನ್ನು ವೇಗಗೊಳಿಸುವುದು ಇದರ ಉದ್ದೇಶವಾಗಿದೆ.




ಅಭಿಯಾನದ ಭಾಗವಾಗಿ, ಕಂಪನಿಯ ಜನರೇಷನ್ 3 ಎಸ್1 ಎಕ್ಸ್ (2 ಕಿಲೋವಾಟ್ ಅವರ್) ಮತ್ತು ರೋಡ್‌ಸ್ಟರ್ ಎಕ್ಸ್ (2.5 ಕಿಲೋವಾಟ್ ಅವರ್) ಮಾದರಿಗಳನ್ನು ಕೇವಲ ರೂ.49,999ಕ್ಕೆ ನೀಡಲಾಗುತ್ತಿದ್ದು, ಜೊತೆಗೆ ಪೋರ್ಟ್‌ಫೋಲಿಯೊದಾದ್ಯಂತ ರೂ.50,000 ವರೆಗೆ ವಿಶೇಷ ಪ್ರಯೋಜನಗಳನ್ನು ಘೋಷಿಸಲಾಗಿದೆ. ಈ ಆಫರ್ ಮಾರ್ಚ್ 31, 2026ರವರೆಗೆ ಮಾತ್ರ ಮಾನ್ಯವಾಗಿರುತ್ತದೆ. ಇಂಧನ ಬೆಲೆಗಳ ಏರಿಕೆಯನ್ನು ಗಮನದಲ್ಲಿಟ್ಟುಕೊಂಡು, ಓಲಾ ಎಲೆಕ್ಟ್ರಿಕ್ ಗ್ರಾಹಕರಿಗೆ ವಿದ್ಯುತ್ ವಾಹನಗಳನ್ನು ಹೆಚ್ಚು ಆಕರ್ಷಕ ಆಯ್ಕೆಯನ್ನಾಗಿ ಮಾಡುತ್ತಿದೆ. ಸೇವಾ ಟ್ರಸ್ಟ್ ಗ್ಯಾರಂಟಿ: ಈಗಾಗಲೇ 80% ಕ್ಕಿಂತ ಹೆಚ್ಚು ಅದೇ ದಿನ ಸೇವಾ ಪರಿಹಾರ ನೀಡುತ್ತಿರುವ ಕಂಪನಿ, ಸೇವೆಯಲ್ಲಿ ವಿಳಂಬವಾದರೆ ಉಚಿತ ಓಲಾ ಕ್ಯಾಬ್ ವೋಚರ್‌ಗಳನ್ನು ನೀಡುವ ಭರವಸೆ ನೀಡಿದೆ. ಮರುಖರೀದಿ ಗ್ಯಾರಂಟಿ: 60% ವರೆಗೆ ಖಚಿತ ಮರುಖರೀದಿ ಮೌಲ್ಯವನ್ನು ನೀಡುವುದರಿಂದ ಗ್ರಾಹಕರಿಗೆ ಭವಿಷ್ಯದಲ್ಲಿ ಸುಲಭ ಅಪ್‌ಗ್ರೇಡ್ ಅವಕಾಶ. ಈ ಕುರಿತು ಭವಿಸ್ ಅಗರ್‌ವಾಲ್‌ಅವರು ಹೇಳುವಂತೆ, ತೈಲ ಬೆಲೆಗಳ ಏರಿಕೆಯಿಂದ ಇಂಧನ ಭದ್ರತೆ ಮತ್ತಷ್ಟು ಮಹತ್ವ ಪಡೆದಿದ್ದು, ವಿದ್ಯುತ್ ವಾಹನಗಳತ್ತ ವೇಗವಾಗಿ ಸಾಗಬೇಕಾದ ಅಗತ್ಯತೆಯನ್ನು ಇದು ಒತ್ತಿಹೇಳುತ್ತದೆ. #ಎಂಡ್ಐಸಿಇಏಜ್ ಮೂಲಕ ಆಕ್ರಮಣಕಾರಿ ಬೆಲೆ, ಸೇವಾ ಭರವಸೆ ಮತ್ತು ಮರುಖರೀದಿ ಗ್ಯಾರಂಟಿ ಮೂಲಕ ಪ್ರತಿಯೊಬ್ಬ ಭಾರತೀಯನೂ ವಿಶ್ವಾಸದಿಂದ ವಿದ್ಯುತ್‌ಗೆ ಬದಲಾಯಿಸಲು ಸಹಾಯ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

# ಸ್ನಾತಕ ಪದವಿ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಸಮೀಪ

ಬೆಂಗಳೂರು

ಸಿಂಬಯೋಸಿಸ್ ಇಂಟರ್ನ್ಯಾಷನಲ್ (ಡೀಮ್ಡ್ ಯೂನಿವರ್ಸಿಟಿ) ತನ್ನ ಎಸ್.ಇ.ಟಿ. 2026 (ಸಿಂಬಯೋಸಿಸ್ ಪ್ರವೇಶ ಪರೀಕ್ಷೆ) ಮತ್ತು ಎಸ್.ಐ.ಟಿ.ಇ.ಇ.ಇ. 2026 (ಸಿಂಬಯೋಸಿಸ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಎಂಜಿನಿಯರಿಂಗ್ ಪ್ರವೇಶ ಪರೀಕ್ಷೆ)ಗಳ ನೋಂದಣಿಯನ್ನು ಶೀಘ್ರದಲ್ಲೇ ಮುಕ್ತಾಯಗೊಳಿಸಲಿದ್ದು, ಪೂರ್ಣಕಾಲಿಕ ಸ್ನಾತಕ ಪದವಿ ಕಾರ್ಯಕ್ರಮಗಳಿಗೆ ಪ್ರವೇಶ ಪಡೆಯಲು ಆಸಕ್ತ ವಿದ್ಯಾರ್ಥಿಗಳು ಏಪ್ರಿಲ್ 15, 2026ರವರೆಗೆ ಅರ್ಜಿ ಸಲ್ಲಿಸಬಹುದು. ಈ ಅಂತಿಮ ದಿನಾಂಕವನ್ನು ಯಾವುದೇ ಪರಿಸ್ಥಿತಿಯಲ್ಲೂ ವಿಸ್ತರಿಸಲಾಗುವುದಿಲ್ಲ ಎಂದು ವಿಶ್ವವಿದ್ಯಾಲಯ ಸ್ಪಷ್ಟಪಡಿಸಿದೆ.

ಎಸ್.ಇ.ಟಿ. ಮತ್ತು ಎಸ್.ಐ.ಟಿ.ಇ.ಇ.ಇ. ಎರಡೂ ಪರೀಕ್ಷೆಗಳು ಕಂಪ್ಯೂಟರ್ ಆಧಾರಿತ ಪರೀಕ್ಷೆ (ಸಿಬಿಟಿ) ಆಗಿದ್ದು, ಸಿಂಬಯೋಸಿಸ್ ಶಿಕ್ಷಣ ಸಂಸ್ಥೆಗಳ ವಿವಿಧ ಸ್ನಾತಕ ಪದವಿ ಕೋರ್ಸ್‌ಗಳಿಗೆ ಪ್ರವೇಶದ ಪ್ರಮುಖ ದ್ವಾರಗಳಾಗಿವೆ. ಬಿಬಿಎ, ಬಿಸಿಎ, ಬಿಎ, ಬಿ.ಎಸ್ಸಿ. ಮತ್ತು ಬಿ.ಟೆಕ್ ಸೇರಿದಂತೆ ಹಲವು ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅವಕಾಶವಿದೆ.




ಅಭ್ಯರ್ಥಿಗಳಿಗೆ ಎರಡು ಬಾರಿ ಪರೀಕ್ಷೆಗೆ ಹಾಜರಾಗುವ ಅವಕಾಶವಿದ್ದು, ಎರಡರಲ್ಲಿ ಪಡೆದ ಹೆಚ್ಚಿನ ಅಂಕವನ್ನು ಪರ್ಸೆಂಟೈಲ್ ಲೆಕ್ಕಾಚಾರಕ್ಕೆ ಪರಿಗಣಿಸಲಾಗುತ್ತದೆ.

ಎಸ್.ಇ.ಟಿ. 2026 ಮೂಲಕ ಮ್ಯಾನೇಜ್ಮೆಂಟ್, ಸಮೂಹ ಸಂವಹನ, ಕೃತಕ ಬುದ್ಧಿಮತ್ತೆ, ಅರ್ಥಶಾಸ್ತ್ರ, ಅಪ್ಲೈಡ್ ಸ್ಟಾಟಿಸ್ಟಿಕ್ಸ್ ಮತ್ತು ಡೇಟಾ ಸೈನ್ಸ್, ಮಾಹಿತಿ ತಂತ್ರಜ್ಞಾನ, ಸ್ಪೋರ್ಟ್ ಮತ್ತು ವ್ಯಾಯಾಮ ವಿಜ್ಞಾನ, ಕಂಪ್ಯೂಟರ್ ಅಪ್ಲಿಕೇಷನ್ಸ್, ಲಿಬರಲ್ ಆರ್ಟ್ಸ್ ಸೇರಿದಂತೆ ಹಲವು ವಿಷಯಗಳಲ್ಲಿ 10ಕ್ಕೂ ಹೆಚ್ಚು ಪ್ರತಿಷ್ಠಿತ ಸಿಂಬಯೋಸಿಸ್ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಬಹುದು. ಈ ಕೋರ್ಸ್‌ಗಳನ್ನು ಪುಣೆ, ನೊಯ್ಡಾ, ನಾಗ್ಪುರ, ಬೆಂಗಳೂರು ಮತ್ತು ಹೈದರಾಬಾದ್ ಕ್ಯಾಂಪಸ್‌ಗಳಲ್ಲಿ ನೀಡಲಾಗುತ್ತಿದೆ.

# ಯೋಗದಾ ಸತ್ಸಂಗ ಕ್ರಿಯಾ ಯೋಗ ಪಾಠಗಳ ಕನ್ನಡ ಆವೃತ್ತಿಯ ಬಿಡುಗಡೆ



ಬೆಂಗಳೂರು

ಸೊಸೈಟಿ ಆಫ್ ಇಂಡಿಯಾ, 1917ರಲ್ಲಿ ಮಹಾನ್ ಯೋಗಿ ಪರಮಹಂಸ ಯೋಗಾನಂದರು (ವಿಶ್ವವಿಖ್ಯಾತ ಶ್ರೇಷ್ಠ ಕೃತಿ 'ಯೋಗಿಯ ಆತ್ಮಕಥೆ'ಯ ಕರ್ತೃ ಹಾಗೂ ಪಾಶ್ಚಾತ್ಯ ದೇಶಗಳಲ್ಲಿ 'ಯೋಗದ ಪಿತಾಮಹ' ಎಂದು ಪ್ರಸಿದ್ಧರಾದ) ಸ್ಥಾಪಿಸಿದ ಸಂಸ್ಥೆಯು ಇಂದು ಯೋಗದಾ ಸತ್ಸಂಗ ಕ್ರಿಯಾ ಯೋಗ ಪಾಠಗಳನ್ನು ಕನ್ನಡದಲ್ಲಿ ಬಿಡುಗಡೆ ಮಾಡಲಿದೆ. ಗೃಹದಲ್ಲೇ ಅಧ್ಯಯನ ಮಾಡಬಹುದಾದ ಈ ಪಾಠಗಳು, ಇಂಗ್ಲಿಷ್, ಹಿಂದಿ, ತೆಲುಗು ಮತ್ತು ತಮಿಳಿನಲ್ಲಿ ಈಗಾಗಲೇ ಲಭ್ಯವಿದ್ದು, ಕ್ರಿಯಾ ಯೋಗ ಧ್ಯಾನದ ವೈಜ್ಞಾನಿಕ ವಿಧಾನಗಳನ್ನು ಹಂತ ಹಂತವಾಗಿ ಕಲಿಯಲು ಸಹಾಯ ಮಾಡುತ್ತವೆ. ಕನ್ನಡ ಆವೃತ್ತಿಯ ಬಿಡುಗಡೆಯ ವಿಶೇಷ ಕಾರ್ಯಕ್ರಮವು ಬೆಂಗಳೂರಿನ ದೊಮ್ಮಲೂರು ನಲ್ಲಿ ಇರುವ ಯೋಗದಾ ಸತ್ಸಂಗ ಧ್ಯಾನ ಕೇಂದ್ರದಲ್ಲಿ ಮಾರ್ಚ್ 29, ಭಾನುವಾರ ಬೆಳಗ್ಗೆ 11:00 12:30 ರ ವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 8317429087; 8296335455 ಹಾಗೂ ನೋಂದಣಿ: https://yssofindia.org/lessons-

# ಡಿಜಿಟಲ್ ಸಂಪತ್ತು ನಿರ್ವಹಣೆಯಲ್ಲಿ ಫಂಡ್ಸ್‌ಇಂಡಿಯಾ ಮುನ್ನಡೆ

ಬೆಂಗಳೂರು

ಫಂಡ್ಸ್‌ಇಂಡಿಯಾ ಸಂಸ್ಥೆಯು ತನ್ನ ನಿರ್ವಹಣೆಯಲ್ಲಿರುವ ಒಟ್ಟು ಆಸ್ತಿ ಮೌಲ್ಯದಲ್ಲಿ 25,000 ಕೋಟಿ ರೂಪಾಯಿಗಳ ಗಡಿಯನ್ನು ದಾಟಿದೆ. ಕೇವಲ ಒಂದು ತ್ರೈಮಾಸಿಕದ ಅವಧಿಯಲ್ಲಿ ಸಂಸ್ಥೆಯ ಆಸ್ತಿ ಮೌಲ್ಯವು 20,000 ಕೋಟಿ ರೂ.ಗಳಿಂದ 25,000 ಕೋಟಿ ರೂ.ಗಳಿಗೆ ಏರಿಕೆಯಾಗುವ ಮೂಲಕ ಶೇ. 25 ರಷ್ಟು ಬೆಳವಣಿಗೆ ದಾಖಲಿಸಿದೆ. ಭಾರತದ ಸಂಪತ್ತು ನಿರ್ವಹಣಾ ವ್ಯವಸ್ಥೆಯಲ್ಲಿ ನಡೆಯುತ್ತಿರುವ ರಚನಾತ್ಮಕ ಬದಲಾವಣೆಗಳ ನಡುವೆ, ಈ ಬೆಳವಣಿಗೆಯು ಕಂಪನಿಯ ಪಾಲಿಗೆ ಒಂದು ನಿರ್ಣಾಯಕ ಹಂತವನ್ನು ಸೂಚಿಸುತ್ತದೆ. ಫಂಡ್ಸ್‌ಇಂಡಿಯಾದ ಪ್ರಸ್ತುತ 25,000 ಕೋಟಿ ರೂ.ಗಳ ಎಯುಎಂ, ವಾರ್ಷಿಕ ಆಧಾರದ ಮೇಲೆ ಶೇ. 58 ರಷ್ಟು ಬೆಳವಣಿಗೆಯನ್ನು ಮತ್ತು ಕಳೆದ ಮೂರು ವರ್ಷಗಳಲ್ಲಿ ಶೇ. 38 ರಷ್ಟು ಸಿಎಜಿಆರ್ ಬೆಳವಣಿಗೆಯನ್ನು ಪ್ರತಿನಿಧಿಸುತ್ತದೆ. ಕಳೆದ 12 ತಿಂಗಳುಗಳಲ್ಲಿ ಈ ವೇದಿಕೆಯು 2,100 ಕೋಟಿ ರೂ.ಗಳ ನಿವ್ವಳ ಒಳಹರಿವನ್ನು ಕಂಡಿದ್ದು, ಕಳೆದ 24 ತಿಂಗಳುಗಳಲ್ಲಿ ಒಟ್ಟು 2,900 ಕೋಟಿ ರೂ.ಗಳ ಹೂಡಿಕೆಯನ್ನು ಪಡೆದುಕೊಂಡಿದೆ. ಸಂಸ್ಥೆಯ ಒಟ್ಟು ಆಸ್ತಿಯಲ್ಲಿ ಶೇ. 77 ರಷ್ಟು ಪಾಲು ಸಣ್ಣ ಹೂಡಿಕೆದಾರರದ್ದಾಗಿದ್ದರೆ, ಉಳಿದ ಶೇ. 23 ರಷ್ಟು ಪಾಲು ಶ್ರೀಮಂತ ಮತ್ತು ಅತಿ-ಶ್ರೀಮಂತ ಹೂಡಿಕೆದಾರರದ್ದಾಗಿದೆ. ಇದು ಸಂಸ್ಥೆಯ ಆಸ್ತಿ ಮೂಲದ ಸಮತೋಲನ ಮತ್ತು ದೃಢತೆಯನ್ನು ಪ್ರತಿಬಿಂಬಿಸುತ್ತದೆ. ಸತತವಾದ ಸಣ್ಣ ಹೂಡಿಕೆದಾರರ ಭಾಗವಹಿಸುವಿಕೆ, ಕಂಪನಿಯ ಐಎಫ್ಎ ಪಾಲುದಾರರ ವ್ಯವಸ್ಥೆಯೊಂದಿಗೆ ಬಲವಾದ ಒಡನಾಟ ಮತ್ತು ಶ್ರೀಮಂತ ಹಾಗೂ ಖಾಸಗಿ ಸಂಪತ್ತು ನಿರ್ವಹಣಾ ವಿಭಾಗಗಳಲ್ಲಿ ಹೆಚ್ಚುತ್ತಿರುವ ಆಕರ್ಷಣೆಯಿಂದಾಗಿ ಈ ಎಯುಎಂ ಬೆಳವಣಿಗೆಯು ಸಾಧ್ಯವಾಗಿದೆ. ಗಮನಾರ್ಹವೆಂದರೆ, ಈ ವಿಸ್ತರಣೆಯು ಕೇವಲ ಅಲ್ಪಾವಧಿಯ ಮಾರುಕಟ್ಟೆಯ ಏರಿಳಿತವನ್ನು ಅವಲಂಬಿಸಿಲ್ಲ; ಬದಲಾಗಿ ಇದು ಸ್ಥಿರವಾದ ಹಣದ ಹರಿವು, ವ್ಯವಸ್ಥಿತ ಹೂಡಿಕೆ ಹಂಚಿಕೆ ಮತ್ತು ವಿವಿಧ ಹೂಡಿಕೆದಾರರ ಗುಂಪುಗಳ ವೈವಿಧ್ಯಮಯ ಭಾಗವಹಿಸುವಿಕೆಯಿಂದ ಕೂಡಿದೆ.

# ಏ.15 ರಿಂದ 'ಬೇಸಿಗೆ ಶಿಬಿರ'

ತುಮಕೂರು

ಜಿಲ್ಲಾ ಬಾಲಭವನ ಸಮಿತಿ ವತಿಯಿಂದ 2026-27ನೇ ಸಾಲಿನಲ್ಲಿ 5 ರಿಂದ 16ರ ವಯೋಮಾನದ ಮಕ್ಕಳಿಗಾಗಿ ಏಪ್ರಿಲ್ 15 ರಿಂದ 29ರವರೆಗೆ ಪ್ರತಿ ದಿನ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ 15 ದಿನಗಳ "ಬೇಸಿಗೆ ಶಿಬಿರ"ವನ್ನು ಆಯೋಜಿಸಲಾಗಿದೆ.

ಆಸಕ್ತ ಪಾಲಕರು ಏಪ್ರಿಲ್ 9ರೊಳಗೆ ಜಿಲ್ಲಾ ಬಾಲಭವನ ಕಚೇರಿ, ಎಂ.ಜಿ. ರಸ್ತೆ, ತುಮಕೂರು ಇಲ್ಲಿ ಕಚೇರಿ ವೇಳೆಯಲ್ಲಿ ತಮ್ಮ ಮಕ್ಕಳ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಶಿಬಿರದಲ್ಲಿ 60 ಮಕ್ಕಳು ಮಾತ್ರ ಭಾಗವಹಿಸಲು ಅವಕಾಶವಿರುವುದರಿಂದ ಮೊದಲು ನೋಂದಾಯಿಸಿಕೊಂಡವರಿಗೆ ಮಾತ್ರ ಆದ್ಯತೆ ನೀಡಲಾಗುವುದಲ್ಲದೇ, ಅಗತ್ಯ ಸಂಖ್ಯೆ ಮೀರಿ ನೋಂದಾಯಿಸಿಕೊಳ್ಳುವುದಿಲ್ಲ.

ಸರ್ಕಾರಿ ಶಾಲಾ ಮಕ್ಕಳು, ಗ್ರಾಮೀಣ/ಹೋಬಳಿ ಮಟ್ಟದ ಮತ್ತು ಸೌಲಭ್ಯ ವಂಚಿತ ಮಕ್ಕಳಿಗೆ, ಸರ್ಕಾರಿ ಸುಧಾರಣಾ ಸಂಸ್ಥೆಗಳ ಬಾಲಕ/ಬಾಲಕಿಯರ ಬಾಲ ಮಂದಿರದ ಮಕ್ಕಳಿಗೆ ಹಾಗೂ ವಿಕಲಚೇತನ ಮಕ್ಕಳಿಗೆ ಬೇಸಿಗೆ ಶಿಬಿರದಲ್ಲಿ ವಿಶೇಷ ಆದ್ಯತೆ ನೀಡಲಾಗಿದೆ.

ಹೆಚ್ಚಿನ ವಿವರಗಳಿಗೆ ಸಂಚಾರಿ ದೂರವಾಣಿ ಸಂಖ್ಯೆ 9901890079ನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

# ಉತ್ಪಾದನಾ ನೆಲೆ ವಿಸ್ತರಣೆ

ಬೆಂಗಳೂರು

ಬೆಂಗಳೂರು ಮೂಲದ ಪ್ರಸಿದ್ಧ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ತಯಾರಿಕಾ ಸಂಸ್ಥೆ ಅಲ್ಟ್ರಾ ವಯೋಲೇಟ್ ಆಟೋಮೋಟಿವ್, ಕರ್ನಾಟಕದಲ್ಲಿ ತನ್ನ ಉತ್ಪಾದನಾ ನೆಲೆಯನ್ನು ವಿಸ್ತರಿಸಲು ಮುಂದಾಗಿದ್ದು, ಐದು ವರ್ಷಗಳ ಬೃಹತ್ ಹೂಡಿಕೆ ಯೋಜನೆಯನ್ನು ಘೋಷಿಸಿದೆ.

ಈ ನಿಟ್ಟಿನಲ್ಲಿ ನಗರದಲ್ಲಿ ನಡೆದ 'ಇನ್ವೆಸ್ಟ್ ಕರ್ನಾಟಕ' ಜಾಗತಿಕ ಹೂಡಿಕೆದಾರರ ಸಮಾವೇಶದ ಸಂದರ್ಭದಲ್ಲಿ, ಅಲ್ಟ್ರಾ ವಯೋಲೇಟ್ ಆಟೋಮೋಟಿವ್ ಸಂಸ್ಥೆಯು ಕರ್ನಾಟಕ ಸರ್ಕಾರದೊಂದಿಗೆ ಮಹತ್ವದ ತಿಳುವಳಿಕಾ ಪತ್ರಕ್ಕೆ ಸಹಿ ಹಾಕಿತು. ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರಾದ ಎಂ. ಬಿ. ಪಾಟೀಲ್ ಅವರ ಸಮ್ಮುಖದಲ್ಲಿ ಈ ಒಪ್ಪಂದವನ್ನು ಅಧಿಕೃತಗೊಳಿಸಲಾಯಿತು.



ಕಂಪನಿಯ ಹಂತ ಹಂತದ ಅಭಿವೃದ್ಧಿ ಯೋಜನೆಯಡಿಯಲ್ಲಿ ಪ್ರಸ್ತುತ ಇರುವ ಉತ್ಪಾದನಾ ಘಟಕದ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ, ರಾಜ್ಯದಲ್ಲಿ ಹೊಸ ಉತ್ಪಾದನಾ ಘಟಕವನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿದೆ. ಈ ಕಾರ್ಯತಂತ್ರದ ವಿಸ್ತರಣೆಯ ಮೂಲಕ ಸಂಸ್ಥೆಯು ಕರ್ನಾಟಕದಲ್ಲಿ ದೀರ್ಘಕಾಲೀನ ಬೆಳವಣಿಗೆ ಸಾಧಿಸುವ ಗುರಿಯನ್ನು ಹೊಂದಿದ್ದು, ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ವಿದ್ಯುತ್ ಸಾರಿಗೆ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರಲು ದೃಷ್ಟಿ ಹೊಂದಿದೆ. ಈ ಕುರಿತು ಮಾತನಾಡಿದ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಸಹ-ಸ್ಥಾಪಕರಾದ "ವಿಶ್ವಕ್ಕಾಗಿ ಭಾರತದಲ್ಲಿ ಉತ್ಪನ್ನ ತಯಾರಿಸುವ ನಮ್ಮ ಆಶಯಕ್ಕೆ ಕರ್ನಾಟಕವೇ ಕೇಂದ್ರವಾಗಿದೆ. ಉತ್ಪಾದನಾ ಸಾಮರ್ಥ್ಯ ವಿಸ್ತರಣೆಯ ಈ ಯೋಜನೆ, ರಾಜ್ಯದ ವಿದ್ಯುತ್ ವಾಹನ ಪರಿಸರ ವ್ಯವಸ್ಥೆ, ಪ್ರತಿಭಾ ಸಂಪನ್ಮೂಲ ಹಾಗೂ ಸರ್ಕಾರದ ಬೆಂಬಲದ ಮೇಲೆ ನಮ್ಮ ವಿಶ್ವಾಸವನ್ನು ತೋರಿಸುತ್ತದೆ. ಉತ್ತಮ ಮೂಲಸೌಕರ್ಯ, ಸಕ್ರಿಯ ಆಡಳಿತ ಮತ್ತು ದೀರ್ಘಕಾಲೀನ ಪ್ರೋತ್ಸಾಹಗಳು ನಮ್ಮ ಮುಂದಿನ ಬೆಳವಣಿಗೆಗೆ ಬಲವಾದ ಅಡಿಪಾಯವಾಗಿದೆ," ಎಂದು ತಿಳಿಸಿದ್ದಾರೆ.

# ಏ. 1ಕ್ಕೆ ಜನಗಣತಿ ಕಾರ್ಯಕ್ಕೆ ಚಾಲನೆ: ಜಿಲ್ಲಾಧಿಕಾರಿ ಜಿ.ಪ್ರಭು

ಚಿಕ್ಕಬಳ್ಳಾಪುರ

2026-27ನೇ ಸಾಲಿನ ಮೊಟ್ಟಮೊದಲ ಡಿಜಿಟಲ್ ಜನಗಣತಿಗೆ ಏಪ್ರಿಲ್ 1 ರಂದು ಜಿಲ್ಲೆಯಲ್ಲಿ ಚಾಲನೆಯಾಗಲಿದ್ದು, ಸಾರ್ವಜನಿಕರು ಬಂದು ಈ ಜನಗಣತಿ ಕಾರ್ಯಕ್ಕೆ ಸಹಕಾರ ನೀಡುವ ಮೂಲಕ ಜಿಲ್ಲಾಡಳಿತದೊಂದಿಗೆ ಕೈಜೋಡಿಸಬೇಕೆಂದು ಜಿಲ್ಲಾಧಿಕಾರಿ ಜಿ.ಪ್ರಭು ಅವರು ಮನವಿ ಮಾಡಿದರು.

ಭಾರತ ಜನಗಣತಿ 2027ಕ್ಕೆ ಸಂಬಂಧಿಸಿದಂತೆ ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

2026-27ನೇ ಸಾಲಿನ ಜನಗಣತಿ ಕಾರ್ಯವು ಏಪ್ರಿಲ್ 1 ರಿಂದ ಆರಂಭವಾಗಿ ಮೇ 15 ರವರೆಗೆ ನಡೆಯಲಿದೆ. ಜನಗಣತಿ ಕಾರ್ಯಕ್ಕೆ 2533 ಜನಗಣತಿದಾರರನ್ನು 422 ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ. 150 ರಿಂದ 200 ಮನೆಗಳನ್ನು ಒಳಗೊಳ್ಳುವಂತೆ ಒಟ್ಟು ಜಿಲ್ಲೆಯಲ್ಲಿ 3121 ಬ್ಲಾಕ್ ಗಳನ್ನು ಮಾಡಲಾಗಿದೆ. ಒಂದು ಬ್ಲಾಕ್ ನಲ್ಲಿ 700 ರಿಂದ 800 ಜನರು ಇರಲಿದ್ದಾರೆ. ಜನಗಣತಿಗಾಗಿ ಒಟ್ಟು ಜಿಲ್ಲೆಯಲ್ಲಿ 16 ಚಾರ್ಜ್ ಗಳನ್ನು ಮಾಡಿ 16 ಅಧಿಕಾರಿಗಳನ್ನು ನೇಮಿಸಲಾಗಿದೆ. ಜನಗಣತಿಗೆ ನಿಯೋಜನೆ ಆಗಿರುವ ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ತರಬೇತಿಯನ್ನು ನೀಡಲು ವ್ಯವಸ್ಥೆ ಮಾಡಲಾಗಿದೆ. ಶಿಕ್ಷಕರು, ಉಪನ್ಯಾಸಕರನ್ನು ಜನಗಣತಿ ಕಾರ್ಯಕ್ಕೆ ಹಾಗೂ ಮೇಲ್ವಿಚಾರಣೆ ಕಾರ್ಯಕ್ಕೆ ನಿಯೋಜಿಸಲಾಗುವುದು ಎಂದು ತಿಳಿಸಿದರು.ಜನಗಣತಿಗೆ ನಿಯೋಜನೆ ಆಗಿರುವ ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ತರಬೇತಿಯನ್ನು ನೀಡಲು ವ್ಯವಸ್ಥೆ ಮಾಡಲಾಗಿದೆ. ಶಿಕ್ಷಕರು, ಉಪನ್ಯಾಸಕರನ್ನು ಜನಗಣತಿ ಕಾರ್ಯಕ್ಕೆ ಹಾಗೂ ಮೇಲ್ವಿಚಾರಣೆ ಕಾರ್ಯಕ್ಕೆ ನಿಯೋಜಿಸಲಾಗುವುದು ಎಂದು ತಿಳಿಸಿದರು.

ಜನಗಣತಿಗೆ 2027ಕ್ಕೆ ಸಂಬಂಧಿಸಿದಂತೆ ಚಿಕ್ಕಬಳ್ಳಾಪುರ ಜಿಲ್ಲೆಗೆ 2ಮಾಸ್ಟರ್ ತರಬೇತುದಾರರನ್ನು ಜನಗಣತಿ ನಿರ್ದೇಶನಾಲಯದಿಂದ ನೇಮಕ ಮಾಡಲಾಗಿರುತ್ತದೆ ಹಾಗೂ ಜಿಲ್ಲೆಯಲ್ಲಿ 50 Field Trainer ಗಳನ್ನು ನೇಮಕ ಮಾಡಲಾಗಿರುತ್ತದೆ. ಸದರಿಯವರುಗಳಿಗೆ ಜನಗಣತಿ ನಿರ್ದೇಶನಾಲಯ ಅಧಿಕಾರಿಗಳಿಂದ ತರಬೇತಿಯನ್ನು ಮಾ. 17ರಿಂದ 20 ರವರೆಗೆ ನೀಡಲಾಗಿರುತ್ತದೆ.

ಸ್ವಯಂ ಗಣತಿಯಲ್ಲಿ ಸಾರ್ವಜನಿಕರು ನೇರವಾಗಿ ಜನಗಣತಿ ನಿರ್ದೇಶನಾಲಯದ ಸ್ವ ಗಣತಿ ಪೋರ್ಟಲ್ (https://se.census.gov.in) ಮುಖಾಂತರ ತಮ್ಮ ಮೊಬೈಲ್ ಸಂಸ್ಯೆಯನ್ನು ಬಳಸಿ ಲಾಗಿನ್ ಆಗಿ ತಮ್ಮ ಹಾಗೂ ಕುಟುಂಬದ ಮಾಹಿತಿಯನ್ನು ದೋಚರಹಿತವಾಗಿ ನಮೂದಿಸಬಹುದಾಗಿರುತ್ತದೆ. ಮಾಹಿತಿಯನ್ನು ಭರ್ತಿ ಮಾಡಿ ಸಲ್ಲಿಸಿದ ನಂತರ ಉಲ್ಲೇಖ ಐಡಿ (SE ID) ಸೃಜನಿಯಾಗಲಿದ್ದು, ಸದರಿ ಉಲ್ಲೇಖ ಐಡಿ (SE ID) ಯನ್ನು ಗಣತಿದಾರರು ಕ್ಷೇತ್ರ ಮಾಹಿತಿಗಳ ಸಂಗ್ರಹಣೆಗೆ ಏ. 16 ರಿಂದ ಮೇ 15 ರವರೆಗೆ ಭೇಟಿ ನೀಡಲಿದ್ದು, ಸದರಿ ಗಣತಿದಾರು ಭೇಟಿ ನೀಡಿದ ಸಂದರ್ಭದಲ್ಲಿ ಉಲ್ಲೇಖ ಐಡಿ ಯನ್ನು ಮುಂದಿನ ಪ್ರಕ್ರಿಯೆಗೆ ಗಣತಿದಾರಿಗೆ ನೀಡುವುದು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್.ಭಾಸ್ಕರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸಹಾಯಕ ನಿರ್ದೇಶಕ ಎಂ.ಜುಂಜಣ್ಣ ಇದ್ದರು.

# ಎಲ್ಲಾ ಕಲಾ ಪ್ರಕಾರಗಳಿಗೆ ರಂಗ ಭೂಮಿ ಅಡಿಪಾಯ : ಆರ್. ಚಂದ್ರಯ್ಯ

ರಾಮನಗರ

ರಂಗಭೂಮಿ ಎಲ್ಲಾ ಕಲಾ ಪ್ರಕಾರಗಳಿಗೆ ಅಡಿಪಾಯವಿದ್ದಂತೆ. ನಟ ಸಾರ್ವಭೌಮ ಡಾ. ರಾಜಕುಮಾರ್ ಸೇರಿದಂತೆ ದೇಶದ ಮೇರು ನಟರು ರಂಗಭೂಮಿ ಹಿನ್ನೆಲೆಯವರು ಎಂಬುದು ವಿಶೇಷ ಎಂದು ಆರ್. ಚಂದ್ರಯ್ಯ ಅಭಿಪ್ರಾಯಪಟ್ಟರು.

ಅವರು ಮಾ. 27ರ ಶುಕ್ರವಾರ ನಗರದ ಯೂನಿವರ್ಸಲ್ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಕುಂಬಾಪುರ ಕಾಲೊನಿಯ ಜನಮುಖಿ ಟ್ರಸ್ಟ್ ಹಾಗೂ ನಮ್ಮವರು ಬಳಗದ ಸಹಯೋಗದಲ್ಲಿ ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ರಂಗ ಗಾಯನ, ರಂಗ ಗೌರವ ಹಾಗೂ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಈಗಿನ ಆಧುನಿಕ ಮನರಂಜನಾ ಮಾಧ್ಯಮಗಳಿಗೂ ಮುಂಚೆ ಜನರ ಮನರಂಜನೆಗಾಗಿ ಇದ್ದದ್ದು ರಂಗಭೂಮಿಯ ಮಾತ್ರ. ಈಗ ಸಿನಿಮಾ, ಕಿರುತೆರೆ ಸೇರಿದಂತೆ ಹಲವು ರೀತಿಯ ಮಾಧ್ಯಮಗಳು ಇದ್ದರೂ, ರಂಗಭೂಮಿ ತನ್ನದೇ ಆದ ಮಹತ್ವ ಉಳಿಸಿಕೊಂಡು ಬಂದಿದೆ ಎಂದು ಹೇಳಿದರು.

ಬೆಂಗಳೂರು ದಕ್ಷಿಣ ಜಿಲ್ಲೆಯು ರಂಗಭೂಮಿ ಚಟುವಟಿಕೆಗೆ ಹೆಸರುವಾಸಿಯಾಗಿದೆ. ಇಲ್ಲಿರುವ ಕಲಾವಿದರು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ತನ್ನದೇ ಆದ ಛಾಪು ಮೂಡಿಸಿದ್ದಾರೆ. ವೃತ್ತಿ ರಂಗಭೂಮಿ ಮತ್ತು ಹವ್ಯಾಸಿ ರಂಗಭೂಮಿಯಲ್ಲಿ ಹಲವರು ತೊಡಗಿಸಿಕೊಂಡಿದ್ದಾರೆ. ಇಂದಿಗೂ ಈ ಭಾಗದ ಹಳ್ಳಿಗಳಲ್ಲಿ ಪೌರಾಣಿಕ ನಾಟಕಗಳನ್ನು ಸ್ಥಳೀಯರೇ ಆಯೋಜಿಸಿ ನಟಿಸುವುದು ಗಮನಾರ್ಹ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ. ಸತೀಶ್ ಮಾತನಾಡಿ, ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ನಿರ್ಮಾಣಕ್ಕೆ ರಂಗಭೂಮಿ ಸೇರಿದಂತೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಬೇಕು. ಆ ನಿಟ್ಟಿನಲ್ಲಿ ಶಾಲಾ- ಕಾಲೇಜು ಹಂತದಲ್ಲೇ ಮಕ್ಕಳಿಗೆ ರಂಗಭೂಮಿ ಚಟುವಟಿಕೆಗಳನ್ನು ನೀಡುವ ಕೆಲಸವಾಗಬೇಕು. ಇದರಿಂದ ನಮ್ಮ ನೆಲದ ಜಾನಪದ ಕಲೆಗಳನ್ನು ಉಳಿಸಿದಂತಾಗುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಯೂನಿವರ್ಸಲ್ ಸಮೂಹ ಶಿಕ್ಷಣ ಸಂಸ್ಥೆಯ ಎ.ಜೆ. ಸುರೇಶ್ ಮಾತನಾಡಿ, ರಂಗಭೂಮಿ ಎಲ್ಲಾ ಮನರಂಜನಾ ಕಲೆಗಳ ತಾಯಿಯಾಗಿದೆ. ನಾಟಕಗಳು ನಮ್ಮನ್ನು ಬೇರೆಯದ್ದೇ ಲೋಕಕ್ಕೆ ಕರೆದೊಯ್ಯುತ್ತವೆ. ಪೌರಾಣಿಕ, ಸಾಮಾಜಿಕ ಸೇರಿದಂತೆ ವಿವಿಧ ರೀತಿಯ ನಾಟಕಗಳು ಜನರನ್ನು ಹಿಡಿದಿಟ್ಟುಕೊಂಡು, ಅವರಲ್ಲಿ ಸಾಮಾಜಿಕ ಪ್ರಜ್ಞೆಯನ್ನು ಬೆಳೆಸುತ್ತದೆ ಎಂದು ಅಭಿಪ್ರಾಯಪಟ್ಟರು.

ನಾಟಕ ಅಕಾಡೆಮಿ ಸದಸ್ಯರಾ ಬಾಬು ಅವರು ಜಿಲ್ಲೆಯ ಉತ್ತಮ ಸಾಂಸ್ಕೃತಿಕ ಸಂಘಟಕರು. ನೀನಾಸಂ ಸೇರಿದಂತೆ ವಿವಿಧ ನಾಟಕ ತಂಡಗಳನ್ನು ಜಿಲ್ಲೆಗೆ ಕರೆಯಿಸಿ ನಾಟಕ ಪ್ರದರ್ಶನ ಆಯೋಜಿಸುತ್ತಾ ಬಂದಿದ್ದಾರೆ. ನಮಗೂ ಅದರ ಅಭಿರುಚಿ ಹತ್ತಿಸಿದ್ದಾರೆ. ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದ ದೃಷ್ಟಿಯಿಂದ ನಮ್ಮ ಸಂಸ್ಥೆಯಲ್ಲೂ ರಂಗಭೂಮಿ ಚಟುವಟಿಕೆಗಳಿಗೆ ವಿಶೇಷ ಒತ್ತು ನೀಡಲಾಗುವುದು ಎಂದರು.

ರಂಗ ಗೌರವ ಸ್ವೀಕರಿಸಿದ ಹಿರಿಯ ಕಲಾವಿದರಾದ ವಿಜಯ ಕುಮಾರ್ ಅವರು ಮಾತನಾಡಿ, ರಾಮನಗರವು ಸಾಂಸ್ಕೃತಿಕವಾಗಿ ಶ್ರೀಮಂತವಾಗಿದ್ದರೂ ಇಲ್ಲಿ ಕಲಾ ಪ್ರದರ್ಶನ ಚಟುವಟಿಕೆಗಳಿಗೆ ಒಂದು ಕಲಾ ಭವನ ಇಲ್ಲ. ಈ ಬಗ್ಗೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಗಮನಹರಿಸಿ, ಭವನ ನಿರ್ಮಾಣಕ್ಕೆ ಶ್ರಮಿಸಬೇಕು ಎಂದರು. ವೈ.ಎಸ್. ಸಿದ್ದರಾಮೇಗೌಡ, ಪುಟ್ಟರಾಜು, ರಕ್ಷಾ ಸಿಂಗ್, ವಿಜಯಕುಮಾರ್ ಹಾಗೂ ಲಕ್ಷ್ಮೀ ಕುಮಾರ್ ಅವರಿಗೆ ರಂಗ ಗೌರವ ಸಲ್ಲಿಸಲಾಯಿತು. ಗೌರವಕ್ಕೆ ಪಾತ್ರರಾದ ಕಲಾವಿದರೂ ಸೇರಿದಂತೆ ಮಹಿಳಾ ಕಲಾವಿದರಾದ ಸುಶೀಲಾ, ಉಮಾ ಜಯದೇವ್ ಅವರು ಪೌರಾಣಿಕ ನಾಟಕದ ಸಂಭಾಷಣೆಗಳನ್ನು ಹೇಳುವ ಮೂಲಕ ಗಮನ ಸೆಳೆದರು. ನಾಟಕ ಅಕಾಡೆಮಿ ಸದಸ್ಯ ಹಾಗೂ ಜನಮುಖಿ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಕುಂಬಾಪುರ ಬಾಬು ವಿ. ಅವರು ಅತಿಥಿಗಳನ್ನು ಸ್ವಾಗತಿಸಿದರು. ನಮ್ಮವರು ಬಳಗದ ಪದ್ಮರೇಖಾ ಅವರು ನಿರೂಪಣೆ ಮಾಡಿದರು. ಯೂನಿವರ್ಸಲ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಚೇತನ್ ಕುಮಾರ್, ನಮ್ಮವರು ಬಳಗದ ಡಾ. ಅಂಕನಹಳ್ಳಿ ಪಾರ್ಥ, ಡಾ. ಎಚ್.ಡಿ. ಉಮಾಶಂಕರ್ ಇದ್ದರು. ಶ್ರೀನಿವಾಸ್ ಅವರ ತಂಡ ರಂಗಗೀತೆಗಳನ್ನು ಪ್ರಸ್ತುತಪಡಿಸಿತು.

# ಪಿಂಚಣಿ ಅದಾಲತ್ ಆರಂಭ



ಬಂಗಾರಪೇಟೆ

ಸರ್ಕಾರದ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು ಮತ್ತು ಪಿಂಚಣಿ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಉದ್ದೇಶದಿಂದ ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ 'ಪಿಂಚಣಿ ಅದಾಲತ್' ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ತಿಳಿಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಪಿಂಚಣಿ ಅದಾಲತ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. "ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಪಿಂಚಣಿ ಸೌಲಭ್ಯಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಪ್ರಾಮಾಣಿಕ ಪ್ರಯತ್ನ ನಡೆಯುತ್ತಿದೆ. 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ಅಂಗವಿಕಲರು ಹಾಗೂ ವಿಧವೆಯರು ಗೌರವಯುತ ಜೀವನ ನಡೆಸಲು ಈ ಯೋಜನೆಗಳು ಸಹಕಾರಿಯಾಗಿವೆ," ಎಂದರು.

ಹೆಚ್ಚಿದ ಪಿಂಚಣಿ ಮೊತ್ತ: ಹಿಂದಿನ ದಿನಗಳಲ್ಲಿ ಕೇವಲ 40 ರೂಪಾಯಿಗಳಿದ್ದ ಪಿಂಚಣಿ ಮೊತ್ತವನ್ನು ಇಂದು ಗಣನೀಯವಾಗಿ ಹೆಚ್ಚಿಸಲಾಗಿದೆ. ಪ್ರಸ್ತುತ ವಿವಿಧ ವರ್ಗಗಳಿಗೆ ಸಿಗುತ್ತಿರುವ ಪಿಂಚಣಿ ವಿವರಗಳನ್ನು ಶಾಸಕರು ಈ ಕೆಳಗಿನಂತೆ ಹಂಚಿಕೊಂಡರು.

ಸಂಧ್ಯಾ ಸುರಕ್ಷಾ ಯೋಜನೆ (65 ವರ್ಷ ಮೇಲ್ಪಟ್ಟವರಿಗೆ): 1,200 ರೂ.

ನಿರ್ಗತಿಕ ವೃದ್ಧಾಪ್ಯ ವೇತನ (60 ವರ್ಷ ಮೇಲ್ಪಟ್ಟವರಿಗೆ): 600 ರೂ.

ಅಂಗವಿಕಲರ ವೇತನ: 1,400 ರೂ.

ವಿಧವಾ ವೇತನ: 800 ರೂ.

ಸ್ವಾವಲಂಬಿ ಜೀವನಕ್ಕೆ ಆಸರೆ: "ವಯಸ್ಸಾದ ಮೇಲೆ ಅಥವಾ ಸಂಕಷ್ಟದ ಸಮಯದಲ್ಲಿ ಇನ್ನೊಬ್ಬರ ಮೇಲೆ ಅವಲಂಬಿತರಾಗದೆ ಬದುಕಲು ಕಂದಾಯ ಇಲಾಖೆಯ ಮೂಲಕ ಈ ವೇತನಗಳನ್ನು ವಿತರಿಸಲಾಗುತ್ತಿದೆ. ಅರ್ಹರು ಈ ಅದಾಲತ್‌ಗಳ ಸದುಪಯೋಗ ಪಡೆದುಕೊಳ್ಳಬೇಕು," ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶಿರಸ್ತೇದಾರ್ ಹೊಸರಾಯಪ್ಪ, ಪ್ರಭಾಕರ್, ಕಂದಾಯ ನಿರೀಕ್ಷಕ (RI) ಅಜಯ್, ಗ್ರಾಮ ಆಡಳಿತಾಧಿಕಾರಿ (VA) ಚೇತನ್ ಹಾಗೂ ಕಂದಾಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಪ್ರದೀಪ್ ಕುಮಾರ್‌ಗೆ ಪಿಹೆಚ್‌ಡಿ ಪ್ರದಾನ

ದೊಡ್ಡಬಳ್ಳಾಪುರ

ತಾಲ್ಲೂಕಿನ ಪತ್ರಕರ್ತ ಪ್ರದೀಪ್ ಕುಮಾರ್ ಆರ್. ಅವರು ಗ್ರಾಮೀಣಾಭಿವೃದ್ಧಿ ಮತ್ತು ಮಲ್ಟಿ ಮೀಡಿಯಾ ವಿಷಯದಲ್ಲಿ ಮಂಡಿಸಿದ ಮಹಾಪ್ರಬಂಧಕ್ಕೆ ಅಮೆರಿಕದ ಬೋಸ್ಟನ್ ಇಂಪೀರಿಯಲ್ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ.

ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳನ್ನು ಮುನ್ನಡೆಸುವಲ್ಲಿ, ಯುವಕರನ್ನು ಸಬಲೀಕರಣಗೊಳಿಸುವಲ್ಲಿ ಹಾಗೂ ಸುಸ್ಥಿರ ಭಾರತದ ಬೆಳವಣಿಗೆಯನ್ನು ಉತ್ತೇಜಿಸುವಲ್ಲಿ ಪ್ರದೀಪ್ ಕುಮಾರ್ ಅವರು ನಡೆಸಿದ ಅವಿರತ ಪ್ರಯತ್ನಗಳನ್ನು ಗುರುತಿಸಿ ಈ ಪ್ರತಿಷ್ಠಿತ ಪದವಿಯನ್ನು ನೀಡಲಾಗಿದೆ.

ಮುಂದಿನ ತಿಂಗಳು ಏಪ್ರಿಲ್ 4ರಂದು ಗೋವಾದಲ್ಲಿ ನಡೆಯಲಿರುವ ವಿಶ್ವವಿದ್ಯಾಲಯದ ಭವ್ಯ ಘಟಿಕೋತ್ಸವ ಸಮಾರಂಭದಲ್ಲಿ ಈ ಡಾಕ್ಟರೇಟ್ ಪದವಿಯನ್ನು ಅಧಿಕೃತವಾಗಿ ಪ್ರದಾನ ಮಾಡಲಾಗುವುದು ಎಂದು ತಿಳಿದುಬಂದಿದೆ.

ಅಂತರರಾಷ್ಟ್ರೀಯ ಮಟ್ಟದ ಗೌರವಕ್ಕೆ ಪಾತ್ರರಾದ ಡಾ. ಪ್ರದೀಪ್ ಕುಮಾರ್ ಆರ್. ಅವರಿಗೆ ದೊಡ್ಡಬಳ್ಳಾಪುರದ ಶಾಸಕ ಧೀರಜ್ ಮುನಿರಾಜ್, ಆರ್ಥಿಕ ತಜ್ಞ ಡಾ. ಎಂ.ಆರ್. ರಂಗನಾಥ, ಅವಧೂತ ಸ್ವಯಂ ಪೂರ್ಣಾನಂದ ಸ್ವಾಮೀಜಿ, ಗ್ಲೋಬಲ್ ಗ್ರೀನ್ ಎನರ್ಜಿ ಪ್ರೈವೇಟ್ ಲಿಮಿಟೆಡ್‌ನ ನಿರ್ದೇಶಕ ಡಾ. ಪ್ರವೀಣ್ ನಾಯಕ್ ಶುಭ ಹಾರೈಸಿದ್ದಾರೆ.

ಅಲ್ಲದೆ, ಸಿಎಂಎನ್‌ಐಟಿ ಪ್ರಾಂಶುಪಾಲ ಡಾ. ಕುಮಾರ್, ಸನಾತನ ಸೇವಾ ಸಂಘದ ರಾಜ್ಯಾಧ್ಯಕ್ಷ ನಾರಾಯಣ, ನಿವೃತ್ತ ಮುಖ್ಯ ಪಶುವೈದ್ಯಾಧಿಕಾರಿ ಡಾ. ವಿಶ್ವ ನಟೇಶ್, ಕುಮುಟಾದ ಪುರೋಹಿತ ಗುರುದಾಸ್ ಭಟ್ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಸೇರಿದಂತೆ ಹಲವಾರು ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

# ವಿವಿಧ ಕಾಮಗಾರಿಗಳಿಗೆ ಶಾಸಕ ಸುರೇಶ್‌ಗೌಡ ಶಂಕುಸ್ಥಾಪನೆ



ತುಮಕೂರು

ತಾಲ್ಲೂಕಿನ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಶಾಸಕ ಬಿ. ಸುರೇಶ್‌ಗೌಡ ಅವರು ಒಟ್ಟು 4.94 ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಗುರುವಾರ ಚಾಲನೆ ನೀಡಿದರು.

ಕ್ಷೇತ್ರದ ಗೂಳೂರು, ಗೂಳಹರವೆ, ಹೆತ್ತೇನಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಕಂಬತ್ತನಹಳ್ಳಿ ಹಾಗೂ ರಂಗಯ್ಯನಪಾಳ್ಯ ಗ್ರಾಮಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಳ್ಳಲಾಗುತ್ತಿರುವ ಸುಮಾರು 2.60 ಕೋಟಿ ರೂ. ವೆಚ್ಚದ ಸಿ.ಸಿ. ರಸ್ತೆ ಹಾಗೂ ಚರಂಡಿ ಕಾಮಗಾರಿಗಳಿಗೆ ಶಾಸಕರು ಭೂಮಿಪೂಜೆ ನೆರವೇರಿಸಿದರು.

ಕುಡಿಯುವ ನೀರಿಗೆ ಆದ್ಯತೆ: ಇದೇ ಸಂದರ್ಭದಲ್ಲಿ ಗೂಳೂರು ಗ್ರಾಮದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಜಲ ಜೀವನ್ ಮಿಷನ್ ಯೋಜನೆಯಡಿ ಸುಮಾರು 2 ಕೋಟಿ 34 ಲಕ್ಷ ರೂ.ಗಳ ಅನುದಾನದ ಕಾಮಗಾರಿಯ ಶಂಕುಸ್ಥಾಪನೆಯನ್ನು ನೆರವೇರಿಸಲಾಯಿತು. ಮನೆ ಮನೆಗೆ ಶುದ್ಧ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ಈ ಯೋಜನೆ ಸಹಕಾರಿಯಾಗಲಿದೆ ಎಂದು ಶಾಸಕರು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಗೂಳೂರು ಶಿವಕುಮಾರ್, ಗೂಳೂರು ಹಾಗೂ ಹೆತ್ತೇನಹಳ್ಳಿ ಗ್ರಾಮ ಪಂಚಾಯ್ತಿಯ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಮುಖಂಡರುಗಳಾದ ಸಿದ್ದೇಗೌಡ, ದೊಡ್ಡಸಾರಂಗಿ ಶಂಕರಣ್ಣ, ಮಾಜಿ ಎಪಿಎಂಸಿ ನಿರ್ದೇಶಕ ಸುಭಾಷ್, ಚಂದ್ರಣ್ಣ, ಬಸವರಾಜ್, ಕುಮಾರ್, ಸಿದ್ದರಾಜು, ಕೃಷ್ಣಮೂರ್ತಿ, ವೆಂಕಟೇಶ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ಮುಖಂಡರಾದ ಚಿಕ್ಕರಂಗಯ್ಯ, ಲೋಕೇಶ್, ರೇಣುಕಮ್ಮ ಶೇಖರ್, ತಿಮ್ಮಪ್ಪ, ರವೀಶ್ ಸೋಮಶೇಖರ್, ಹನುಮಂತರಾಯಪ್ಪ ಮತ್ತಿತರರು ಕಾಮಗಾರಿಗಳಿಗೆ ಸಾಕ್ಷಿಯಾದರು.

# ಸೀತಾರಾಮ ಕಲ್ಯಾಣೋತ್ಸವ ಸಂಭ್ರಮ

ಕೋಲಾರ

ನಗರದ ಪಿಸಿ ಬಡಾವಣೆಯ ಅಂಚೆ ಕಚೇರಿ ಮುಂಭಾಗದಲ್ಲಿರುವ ಶ್ರೀ ಕೋದಂಡರಾಮಸ್ವಾಮಿ ದೇವಾಲಯದ 44ನೇ ವರ್ಷದ ರಾಮೋತ್ಸವದ ಅಂಗವಾಗಿ ಗುರುವಾರ ಸೀತಾರಾಮರ ಕಲ್ಯಾಣೋತ್ಸವವು ಅತ್ಯಂತ ವೈಭವದಿಂದ ಜರುಗಿತು. ಈ ಪುಣ್ಯ ಕಾರ್ಯಕ್ಕೆ ಸಾವಿರಾರು ಭಕ್ತಾದಿಗಳು ಸಾಕ್ಷಿಯಾದರು.

ಹಿರಿಯ ವಕೀಲ ನಾರಾಯಣರಾವ್ ದಂಪತಿಗಳು ಕಲ್ಯಾಣೋತ್ಸವದ ವಿಧಿವಿಧಾನಗಳನ್ನು ನಡೆಸಿಕೊಟ್ಟರು. ಸಂಜೆ ಶ್ರೀ ಕೋದಂಡರಾಮಸ್ವಾಮಿಯ ಉತ್ಸವವು ವಿಜೃಂಭಣೆಯಿಂದ ನಡೆಯಿತು. ಪ್ರಧಾನ ಆಗಮಿಕರಾದ ಶಿವಶ್ರೀ ವಿದ್ವಾನ್, ಪ್ರಧಾನ ಅರ್ಚಕ ಡಾ. ಕೆ.ಎಸ್. ಮಂಜುನಾಥ ದೀಕ್ಷಿತ್ ಹಾಗೂ ಮೃತ್ಯುಂಜಯ ಶಂಕರ ದೀಕ್ಷಿತ್ (ಬುಜ್ಜಿ) ಅವರ ನೇತೃತ್ವದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಸಾಂಗವಾಗಿ ನೆರವೇರಿದವು.

ಮುಂದಿನ ಕಾರ್ಯಕ್ರಮಗಳ ವಿವರ:

ರಾಮೋತ್ಸವದ ಅಂಗವಾಗಿ ದೇವಾಲಯದಲ್ಲಿ ಮುಂದಿನ ಐದು ದಿನಗಳ ಕಾಲ ಸರಣಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಇದೇ 27 (ಶುಕ್ರವಾರ) ಶ್ರೀರಾಮನವಮಿ ನಿಮಿತ್ತ ವಿಶೇಷ ಪೂಜೆ ಹಾಗೂ ಗರುಡವಾಹನೋತ್ಸವ ಜರುಗಲಿದೆ. ಸಂಜೆ ಮುದ್ರ ನೃತ್ಯ ಕಲಾನಿಕೇತನದ ಮಕ್ಕಳಿಂದ ಭರತನಾಟ್ಯ ಪ್ರದರ್ಶನ ಇರಲಿದೆ.

ಇದೇ 28 ಶ್ರೀ ಕೋದಂಡರಾಮಸ್ವಾಮಿ ಪಟ್ಟಾಭಿಷೇಕ ಮಹೋತ್ಸವ ಹಾಗೂ ಭಜನಾ ಕಾರ್ಯಕ್ರಮ.

ಇದೇ 29 ಶೇಷಶಯನ ಉತ್ಸವ, ವಿಶೇಷ ಅಭಿಷೇಕ ಮತ್ತು ಪೂಜೆಗಳು.

ಇದೇ 30 ವಸಂತೋತ್ಸವ ಹಾಗೂ ಸಂಜೆ ಸಿಂಹವಾಹನೋತ್ಸವ ನಡೆಯಲಿದ್ದು, ಜಯನಾಟ್ಯ ಕಲಾ ಅಕಾಡೆಮಿ ಮಕ್ಕಳಿಂದ ಭರತನಾಟ್ಯ ಕಾರ್ಯಕ್ರಮ ಆಯೋಜಿಸಲಾಗಿದೆ.

ಇದೇ 31 ರಾಮೋತ್ಸವದ ಸಮಾರೋಪದ ಅಂಗವಾಗಿ ಕೋದಂಡರಾಮಸ್ವಾಮಿಯ ಪಲ್ಲಕ್ಕಿ ಉತ್ಸವ ಮತ್ತು ಶೋಭಾಯಾತ್ರೆ ಅದ್ಧೂರಿಯಾಗಿ ನಡೆಯಲಿದೆ.

ಉತ್ಸವದ ಹಿನ್ನೆಲೆಯಲ್ಲಿ ಇಡೀ ದೇವಾಲಯ ಹಾಗೂ ಸುತ್ತಮುತ್ತಲ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದ್ದು, ಭಕ್ತರ ಆಗಮನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.



# ಪದವಿಗಿಂತ ಜನರ ಪ್ರೀತಿಯೇ ದೊಡ್ಡದು: ಮೋಹನ್ ಕೃಷ್ಣ

ಬೇತಮಂಗಲ

"ಭವಿಷ್ಯದಲ್ಲಿ ನಾನು ಶಾಸಕನಾಗುತ್ತೇನೆಯೋ ಇಲ್ಲವೋ ಎಂಬುದು ಮುಖ್ಯವಲ್ಲ, ಆದರೆ ಕೆಜಿಎಫ್ ಕ್ಷೇತ್ರದ ಜನರ ಹೃದಯ ಗೆದ್ದಿರುವುದು ನನಗೆ ಎಲ್ಲಕ್ಕಿಂತ ದೊಡ್ಡ ತೃಪ್ತಿ ನೀಡಿದೆ" ಎಂದು ಆರ್.ಕೆ. ಫೌಂಡೇಶನ್ ಅಧ್ಯಕ್ಷ ವಿ. ಮೋಹನ್ ಕೃಷ್ಣ ಅಭಿಪ್ರಾಯಪಟ್ಟರು.



ತಾಲ್ಲೂಕಿನ ಸುಂದರಪಾಳ್ಯ ಗ್ರಾಮದಲ್ಲಿ ಪಾಲುಪಟಲಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಆರ್.ಕೆ. ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ ಭವ್ಯ ರಸಮಂಜರಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ರಾಜಕೀಯ ಅಧಿಕಾರಕ್ಕಿಂತ ಜನರ ಸೇವೆಯೇ ತಮಗೆ ಮುಖ್ಯವಾಗಿದ್ದು, ಕ್ಷೇತ್ರದ ಮೂಲೆ ಮೂಲೆಯಲ್ಲೂ ಜನರು ತೋರುತ್ತಿರುವ ವಿಶ್ವಾಸವು ಯಾವುದೇ ಪದವಿಗಿಂತ ಮಿಗಿಲಾದುದು ಎಂದು ಅವರು ಹೇಳಿದರು.

ಸ್ಥಳೀಯ ಅಭ್ಯರ್ಥಿ ಪರ ಬ್ಯಾಟಿಂಗ್: ಇದೇ ಸಂದರ್ಭದಲ್ಲಿ ವಿರೋಧಿಗಳಿಗೆ ಪರೋಕ್ಷವಾಗಿ ಎಚ್ಚರಿಕೆ ನೀಡಿದ ಅವರು, "ಹೊರಗಿನಿಂದ ಬಂದು ರಾಜಕೀಯ ಮಾಡುವವರಿಗಿಂತ, ಸ್ಥಳೀಯವಾಗಿ ಜನರೊಂದಿಗೆ ಬೆರೆತಿರುವ ತಮಗೆ ಕ್ಷೇತ್ರದ ನಾಡಿಮಿಡಿತ ಚೆನ್ನಾಗಿ ತಿಳಿದಿದೆ. ಕೆಜಿಎಫ್ ಲೋಕಲ್ ಕುದುರೆಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ," ಎಂದು ಟಾಂಗ್ ನೀಡಿದರು. ಚುನಾವಣೆ ಬಂದಾಗ ಮಾತ್ರ ಕಾಣಿಸಿಕೊಳ್ಳುವ ವ್ಯಕ್ತಿ ನಾನಲ್ಲ. ಅಧಿಕಾರ ಇರಲಿ ಅಥವಾ ಇಲ್ಲದಿರಲಿ, ಜನರ ಕಷ್ಟಸುಖಗಳಿಗೆ ಸ್ಪಂದಿಸುವುದನ್ನು ನಾನು ಎಂದಿಗೂ ನಿಲ್ಲಿಸುವುದಿಲ್ಲ. ಅಧಿಕಾರ ಎಂಬುದು ಕೇವಲ ಒಂದು ಮಾಧ್ಯಮವಷ್ಟೇ, ಆದರೆ ಜನರ ಪ್ರೀತಿ ಶಾಶ್ವತವಾದುದು ಎಂದು ಮೋಹನ್ ಕೃಷ್ಣ ಅವರು ತಮ್ಮ ನಿಲುವನ್ನು ಸ್ಪಷ್ಟಪಡಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಗ್ರಾ.ಪಂ. ಅಧ್ಯಕ್ಷ ಗಂಗಿರೆಡ್ಡಿ, ಮಾಜಿ ಸದಸ್ಯ ಬಾಬು ರೆಡ್ಡಿ, ಗುತ್ತಿಗೆದಾರ ಕೃಷ್ಣಪ್ಪ, ಯುವ ಮುಖಂಡರಾದ ಅಮರೇಶ್ ರೆಡ್ಡಿ, ಸುನೀಲ್ ಶೆಟ್ಟಿ, ಭವನ್ ಕುಮಾರ್, ಸುರೇಶ್ ನಾಯ್ಡು, ಚಂದ್ರಣ್ಣ, ಭೂಪಲ್ ರೆಡ್ಡಿ, ವೆಂಕಟ್ರಮ್ ರೆಡ್ಡಿ, ಚನ್ನಾಮೂರ್ತಿ, ಶಿವ, ಡಾ. ನಾಗೇಶ್ ವಿಜಿ, ತೇಜು, ವರುಣ್, ಹರೀಶ್ ಸೇರಿದಂತೆ ಸಾವಿರಾರು ಸಾರ್ವಜನಿಕರು ಉಪಸ್ಥಿತರಿದ್ದರು.

# ಕುಮಾರಸ್ವಾಮಿ ಮತ್ತೆ ಸಿಎಂ ಆಗಲು ಪಕ್ಷ ಸಂಘಟನೆ ಮುಖ್ಯ: ಹೆಚ್. ನಿಂಗಪ್ಪ

ತುಮಕೂರು

"ಹೆಚ್.ಡಿ. ಕುಮಾರಸ್ವಾಮಿಯವರು ಮತ್ತೊಮ್ಮೆ ರಾಜ್ಯದ ಮುಖ್ಯಮಂತ್ರಿಯಾಗಬೇಕು ಎಂಬುದು ಪ್ರತಿಯೊಬ್ಬ ಕಾರ್ಯಕರ್ತನ ಆಸೆಯಾಗಿದೆ. ಈ ಕನಸು ನನಸಾಗಲು ಪಕ್ಷವನ್ನು ತಳಮಟ್ಟದಿಂದ ಸದೃಢವಾಗಿ ಸಂಘಟಿಸುವುದು ಅನಿವಾರ್ಯ" ಎಂದು ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್. ನಿಂಗಪ್ಪ ತಿಳಿಸಿದರು.



ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಬುಧವಾರ ಆಯೋಜಿಸಲಾಗಿದ್ದ ನಗರ ಕಾರ್ಯಕರ್ತರ ಸಭೆ ಹಾಗೂ ಮಾಜಿ ಸಚಿವ ದಿ. ಲಕ್ಷ್ಮೀನರಸಿಂಹಯ್ಯನವರ ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಮುಂದಿನ ಚುನಾವಣೆಗಳಲ್ಲಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದ್ದರೂ, ಜೆಡಿಎಸ್ ತನ್ನದೇ ಆದ ಪ್ರಬಲ ಅಸ್ತಿತ್ವವನ್ನು ಉಳಿಸಿಕೊಳ್ಳಲು ಕಾರ್ಯಕರ್ತರು ಶ್ರಮಿಸಬೇಕು ಎಂದು ಮನವಿ ಮಾಡಿದರು.

2028ರ ಗುರಿ – ಸ್ಥಳೀಯ ಸಂಸ್ಥೆಗಳೇ ಮೆಟ್ಟಿಲು: "ಹೆಚ್.ಡಿ. ದೇವೇಗೌಡರ ನೇತೃತ್ವ ಹಾಗೂ ಕುಮಾರಸ್ವಾಮಿಯವರ ಮಾರ್ಗದರ್ಶನದಲ್ಲಿ ತುಮಕೂರು ಜಿಲ್ಲೆ ಜೆಡಿಎಸ್‌ನ ಭದ್ರಕೋಟೆಯಾಗಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ನಾವು ಮೇಲುಗೈ ಸಾಧಿಸಿದರೆ, 2028ರ ವಿಧಾನಸಭಾ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆದ್ದು ಕುಮಾರಣ್ಣ ಅವರನ್ನು ಮತ್ತೆ ಮುಖ್ಯಮಂತ್ರಿ ಮಾಡಬಹುದು," ಎಂದು ನಿಂಗಪ್ಪ ಆಶಯ ವ್ಯಕ್ತಪಡಿಸಿದರು.

ನಗರಸಭೆ ಮಾಜಿ ಅಧ್ಯಕ್ಷ ಟಿ.ಹೆಚ್. ಜಯರಾಮ್ ಮಾತನಾಡಿ, "ಪ್ರಸ್ತುತ ತುಮಕೂರು ನಗರಪಾಲಿಕೆಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಸಣ್ಣ ಕೆಲಸಗಳಿಗೂ ಸಾರ್ವಜನಿಕರನ್ನು ಸತಾಯಿಸಲಾಗುತ್ತಿದೆ. ಜನರು ಪಾಲಿಕೆ ಚುನಾವಣೆಗಾಗಿ ಕಾಯುತ್ತಿದ್ದು, ಮೈತ್ರಿ ಅಭ್ಯರ್ಥಿಗಳ ಗೆಲುವಿನೊಂದಿಗೆ ಭ್ರಷ್ಟಾಚಾರ ಮುಕ್ತ ಆಡಳಿತ ನೀಡಲಾಗುವುದು," ಎಂದರು. ಈ ಹಿಂದೆ ಹೆಚ್. ನಿಂಗಪ್ಪ ಅಧ್ಯಕ್ಷರಾಗಿದ್ದಾಗ ಜಿಲ್ಲೆಯ 11 ಕ್ಷೇತ್ರಗಳ ಪೈಕಿ 9ರಲ್ಲಿ ಜೆಡಿಎಸ್ ಜಯಭೇರಿ ಬಾರಿಸಿದ್ದನ್ನು ಅವರು ಸ್ಮರಿಸಿದರು. ಕಾರ್ಯಕ್ರಮದಲ್ಲಿ ನಗರಸಭೆ ಮಾಜಿ ಉಪಾಧ್ಯಕ್ಷ ಶ್ರೀನಿವಾಸ್‌ಪ್ರಸಾದ್, ಮುಖಂಡರಾದ ಎಸ್. ಪುಟ್ಟೀರಪ್ಪ, ಟಿ.ಸಿ. ಪ್ರಭಾಕರ್, ಟಿ.ಆರ್. ನಾಗರಾಜು ಮತ್ತಿತರರು ಮಾತನಾಡಿ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಪಕ್ಷವನ್ನು ಬಲಪಡಿಸುವ ಭರವಸೆ ನೀಡಿದರು.

ಸಭೆಯಲ್ಲಿ ಪ್ರಮುಖ ಮುಖಂಡರಾದ ಗಂಗಣ್ಣ, ಸೋಲಾರ್ ಕೃಷ್ಣಮೂರ್ತಿ, ಮಧುಗೌಡ, ಕುಸುಮಾ ಜಗನ್ನಾಥ್, ಲೀಲಾವತಿ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಪುರಸಭೆ ಷರತ್ತು ಉಲ್ಲಂಘಿಸಿದರೆ ಕಟ್ಟುನಿಟ್ಟಿನ ಕ್ರಮ: ವಿ. ನಾಗರಾಜು

ಶ್ರೀನಿವಾಸಪುರ

ಪಟ್ಟಣದ ಪುರಸಭೆ ಕಚೇರಿಯಲ್ಲಿ ಗುರುವಾರ ವಿವಿಧ ಬಾಬ್ತುಗಳ 2026– 27ನೇ ಸಾಲಿನ ಬಹಿರಂಗ ಹರಾಜು ಪ್ರಕ್ರಿಯೆ ಜರುಗಿತು. ಒಟ್ಟು 23.66 ಲಕ್ಷ ರೂಪಾಯಿಗಳಿಗೆ ವಿವಿಧ ಶುಲ್ಕ ವಸೂಲಾತಿ ಹಕ್ಕುಗಳ ಹರಾಜು ನಡೆದಿದೆ ಎಂದು ಪುರಸಭೆ ಮುಖ್ಯಾಧಿಕಾರಿ ವಿ. ನಾಗರಾಜು ಮಾಹಿತಿ ನೀಡಿದರು.

ಹರಾಜು ಪ್ರಕ್ರಿಯೆಗೆ ಚಾಲನೆ ನೀಡಿ ಮಾತನಾಡಿದ ಅವರು, "ದಿನವಹಿ ಮಾರುಕಟ್ಟೆ, ವಾರದ ಸಂತೆ, ಕಸಾಯಿಖಾನೆ, ಬಸ್ ನಿಲ್ದಾಣದ ಪ್ರವೇಶ ಶುಲ್ಕ ಹಾಗೂ ಮುಸಾಫೀರ್‌ಖಾನ ವಾಣಿಜ್ಯ ಸಂಕೀರ್ಣದ ನೆಲಮಹಡಿಯ ವಾಹನ ನಿಲ್ದಾಣದ ಶುಲ್ಕ ಸೇರಿದಂತೆ ಒಟ್ಟು 23 ಲಕ್ಷದ 66 ಸಾವಿರ ರೂಪಾಯಿಗಳಿಗೆ ಹರಾಜು ನಡೆದಿದೆ," ಎಂದು ತಿಳಿಸಿದರು. ಪುರಸಭೆಯ ಮಳಿಗೆಗಳ ಬಾಡಿಗೆದಾರರು ನಿಗದಿಪಡಿಸಿದ ದಿನಾಂಕದಂದು ಬಾಡಿಗೆಯನ್ನು ಕಡ್ಡಾಯವಾಗಿ ಪಾವತಿಸಬೇಕು. ಪುರಸಭೆಯ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಅಥವಾ ಬಾಡಿಗೆ ಪಾವತಿಸಲು ವಿಳಂಬ ಮಾಡಿದಲ್ಲಿ, ಯಾವುದೇ ಮುನ್ಸೂಚನೆ ನೀಡದೆ ಮಳಿಗೆಗಳ ಭಾವಣಿಯನ್ನು ಪುರಸಭೆ ಸಿಬ್ಬಂದಿ ಮೂಲಕ ತೆರವುಗೊಳಿಸಲಾಗುವುದು ಎಂದು ಮುಖ್ಯಾಧಿಕಾರಿಗಳು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು. ಕಾರ್ಯಕ್ರಮದಲ್ಲಿ ಕಂದಾಯ ನಿರೀಕ್ಷಕ ಎನ್. ಶಂಕರ್, ಹಿರಿಯ ಆರೋಗ್ಯ ನಿರೀಕ್ಷಕ ವಿಜಯ್‌ಕುಮಾರ್, ಕಿರಿಯ ಆರೋಗ್ಯ ನಿರೀಕ್ಷಕ ಟಿ.ವಿ. ಸುರೇಶ್ ಇದ್ದರು.

# ಕೋಲಾರದಲಿ ಭರ್ಜರಿ ಶ್ರೀರಾಮೋತ್ಸವ

ಕೋಲಾರ

ನಗರದಲ್ಲಿ ಶ್ರೀರಾಮ ನವಮಿ ಅಂಗವಾಗಿ ಶ್ರೀರಾಮ ಸೇನೆಯ ವತಿಯಿಂದ ಗಾಂಧಿವನದಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿರುವ 'ಶ್ರೀರಾಮೋತ್ಸವ' ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು, ಇಡೀ ನಗರವು ಕೇಸರಿ ಧ್ವಜ ಹಾಗೂ ವಿದ್ಯುತ್ ದೀಪಾಲಂಕಾರಗಳಿಂದ ಕಂಗೊಳಿಸುತ್ತಿದೆ.

ಕಳೆದ 8 ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಾ ಬರುತ್ತಿರುವ ಈ ಕಾರ್ಯಕ್ರಮವು ಈ ಬಾರಿ 'ನಾವೆಲ್ಲಾ ಹಿಂದೂ, ನಾವೆಲ್ಲಾ ಒಂದು' ಎಂಬ ಘೋಷವಾಕ್ಯದೊಂದಿಗೆ ಜರುಗುತ್ತಿದೆ. ಗಾಂಧಿವನದಲ್ಲಿ ನಿರ್ಮಿಸಲಾಗಿರುವ ದೇವಾಲಯ ಮಾದರಿಯ ಭವ್ಯ ವೇದಿಕೆ ಹಾಗೂ ಬೃಹತ್ ನಂದಿ ವಿಗ್ರಹ ಭಕ್ತರ ಆಕರ್ಷಣೆಯ ಕೇಂದ್ರವಾಗಿದೆ.

ಕಾರ್ಯಕ್ರಮದ ಕೊನೆಯ ದಿನವಾದ ಇದೇ 27ರಂದು ಬೆಳಗ್ಗೆ 9 ಗಂಟೆಗೆ ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ನಡೆಯಲಿದೆ. ಅಂದು ಸಂಜೆ 4 ಗಂಟೆಗೆ ನಗರದ ಪ್ರಮುಖ ರಸ್ತೆಗಳಲ್ಲಿ ಶ್ರೀರಾಮನ ಬೃಹತ್ ಶೋಭಾಯಾತ್ರೆ ಜರುಗಲಿದೆ. ಈ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಶ್ರೀರಾಮ ಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಹಾಗೂ ವಿಜಯಪುರ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಭಾಗವಹಿಸಲಿದ್ದಾರೆ ಎಂದು ಆಯೋಜಕರು ತಿಳಿಸಿದ್ದಾರೆ.



ನಾಗಲಾಪುರ ವೀರಧರ್ಮ ಸಿಂಹಾಸನ ಮಠದ ಪೀಠಾಧಿಪತಿಗಳಾದ ಶ್ರೀ ಷ.ಬ್ರ. ತೇಜೇಶಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ. ಶೋಭಾಯಾತ್ರೆಗೆ ಶ್ರೀರಾಮ ಸೇನೆಯ ದಕ್ಷಿಣ ಪ್ರಾಂತದ ಪದಾಧಿಕಾರಿಗಳಾದ ಬಾಬಣ್ಣ, ಸುಂದ್ರೇಶ್ ನಾರ್ಗಲ್ ಹಾಗೂ ನಾಗಾರ್ಜುನ್ ಗೌಡ ಚಾಲನೆ ನೀಡಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶ್ರೀರಾಮ ಸೇನೆಯ ಜಿಲ್ಲಾಧ್ಯಕ್ಷ ರಮೇಶ್ ರಾಜ್, "ಯುವ ಜನತೆಯಲ್ಲಿ ಸಂಸ್ಕಾರ ಹಾಗೂ ಭಕ್ತಿಯನ್ನು ಜಾಗೃತಗೊಳಿಸುವುದು ನಮ್ಮ ಸಂಘಟನೆಯ ಮೂಲ ಉದ್ದೇಶ. ಕಳೆದ ಎರಡು ಬಾರಿ ಪ್ರಮೋದ್ ಮುತಾಲಿಕ್ ಅವರಿಗೆ ಕೋಲಾರ ಪ್ರವೇಶಕ್ಕೆ ಜಿಲ್ಲಾಡಳಿತ ಅಡ್ಡಿಪಡಿಸಿತ್ತು. ಈ ಬಾರಿ ಜಿಲ್ಲಾಡಳಿತವು ಅನುಮತಿ ನೀಡದಿದ್ದಲ್ಲಿ, ನಮ್ಮ ಪ್ರಜಾಪ್ರಭುತ್ವದ ಹಕ್ಕನ್ನು ಚಲಾಯಿಸಲು ನಾವು ನ್ಯಾಯಾಲಯದ ಮೊರೆ ಹೋಗುತ್ತೇವೆ," ಎಂದು ತಿಳಿಸಿದರು.

ಕಾರ್ಯಕ್ರಮದ ಯಶಸ್ಸಿಗಾಗಿ ವಿಭಾಗೀಯ ಅಧ್ಯಕ್ಷ ರಮೇಶ್ ರಾಜ್, ಜಿಲ್ಲಾ ಅಧ್ಯಕ್ಷ ವೆಂಕಟಸ್ವಾಮಿ ಚಿನ್ನಪಿ, ಉಪಾಧ್ಯಕ್ಷ ರಾಮ್ ಮಹೇಶ್, ಶಬರೀಶ್ ಶೆಟ್ಟಿ ಸೇರಿದಂತೆ ನೂರಾರು ಕಾರ್ಯಕರ್ತರು ಶ್ರಮಿಸುತ್ತಿದ್ದಾರೆ. ಈಗಾಗಲೇ ಎಲ್.ಆರ್. ಡ್ಯಾನ್ಸ್ ಸ್ಟುಡಿಯೋ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಆರಂಭವಾಗಿದ್ದು, ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ.

# ವೃತ್ತಿ ಶಿಕ್ಷಣ ವಸ್ತು ಪ್ರದರ್ಶನ ಮತ್ತು ಕೆರಿಯರ್ ಮೇಳಕ್ಕೆ ಚಾಲನೆ

ಕೋಲಾರ

ಎಸ್ಸೆಸ್ಸೆಲ್ಸಿ ಮುಗಿದ ನಂತರ ನಿಮ್ಮ ಶೈಕ್ಷಣಿಕ ಭವಿಷ್ಯದ ಜತೆಗೆ ಬದುಕು ಕಟ್ಟಿಕೊಳ್ಳುವ ಕೌಶಲ್ಯಾಧಾರಿತ ಜಿಟಿಟಿಸಿ, ಐಟಿಐ, ಡಿಪ್ಲೋಮೋ, ಅರೆ ವೈದ್ಯಕೀಯ ಕೋರ್ಸ್‌ಗಳ ಕಲಿಕೆ ಮೂಲಕ ಬದುಕು ಕಟ್ಟಿಕೊಳ್ಳಲು ಮುಂದಾಗಿ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಪ್ರಾಂಶುಪಾಲ ಹಾಗೂ ಶಾಲಾ ಶಿಕ್ಷಣ ಇಲಾಖೆ ಅಭಿವೃದ್ದಿ ಉಪನಿರ್ದೇಶಕ ಕೃಷ್ಣಮೂರ್ತಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಗುರುವಾರ ನಗರದ ಟಿ. ಚನ್ನಯ್ಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಪಂ, ಕೋಲಾರ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಟಯಟ್, ಜಿಲ್ಲಾ ವೃತ್ತಿಪರ ಮತ್ತು ವೃತ್ತಿ ಮಾರ್ಗದರ್ಶನ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವೃತ್ತಿಶಿಕ್ಷಣ ವಸ್ತುಪ್ರದರ್ಶನ ಮತ್ತು ಕೆರಿಯರ್ ಮೇಳ– 2026ಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ಎಸ್ಸೆಸ್ಸೆಲ್ಸಿ ಮುಗಿದ ನಂತರ ಮುಂದೇನು ಎಂಬ ಪ್ರಶ್ನೆ ಕಾಡುವುದು ಸಹಜ, ವೈದ್ಯಕೀಯ, ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಮಾತ್ರ ಪ್ರಾಧಾನ್ಯತೆಯಲ್ಲ ಮತ್ತು ಅದು ಕಲಿಕಾ ಸಾಧನೆಯಲ್ಲಿನ ಎಲ್ಲಾ ಹಂತದ ವಿದ್ಯಾರ್ಥಿಗಳಿಗೂ ಎಟುಕುವುದು ಇಲ್ಲ ಎಂಬುದು ಸತ್ಯವಾಗಿದ್ದು, ವಿದ್ಯಾರ್ಥಿಗಳು ಕೌಶಲ್ಯಾಭಿವೃದ್ಧಿ ಶಿಕ್ಷಣದ ಜತೆಗೆ ಬದುಕು ಕಟ್ಟಿಕೊಳ್ಳುವ ಕಡೆ ಆಲೋಚಿಸುವುದು ಸೂಕ್ತ ಎಂದರು.

ಎಸ್ಸೆಸ್ಸೆಲ್ಸಿ ಈ ಬಾರಿ ಶೇ.95 ಫಲಿತಾಂಶ: ಈ ಬಾರಿ ಎಸ್ಸೆಸ್ಸೆಲ್ಸಿ ಶೇ.95ಕ್ಕೂ ಹೆಚ್ಚಿನ ಫಲಿತಾಂಶದ ನಿರೀಕ್ಷೆ ಇದೆ ಎಂದ ಅವರು,ಎಸ್ಸೆಸ್ಸೆಲ್ಸಿ ನಂತರ ಮುಂದೇನು ಎಂಬುದರ ಕುರಿತು ಇರುವ ಗೊಂದಲ ನಿವಾರಣೆಗೆ ಇಂತಹ ವಸ್ತುಪ್ರದರ್ಶನಗಳು ಮತ್ತು ಕೆರಿಯರ್ ಮೇಳಗಳು ಸಹಕಾರಿಯಾಗಿವೆ ಎಂದರು.



ವಿದ್ಯಾರ್ಥಿಗಳು ವೃತ್ತಿ ಕೌಶಲ್ಯದ ಜತೆಗೆ ಇಂಗ್ಲೀಷ್ ಸಂವಹನ ಕೌಶಲ್ಯ ಪಡೆದರೆ ಅತಿ ಶೀಘ್ರ ನಿಮ್ಮ ಬದುಕಿಗೆ ದಾರಿ ಸಿಗಲಿದೆ, ನೀವು ಆರ್ಥಿಕವಾಗಿ ಸಬಲಗೊಳ್ಳಬಹುದು ಎಂದು ಕಿವಿಮಾತು ಹೇಳಿದರು.

ಟಾಟಾ ಉದ್ಯೋಗ್ ಉದ್ಯೋಗಕ್ಕೆ ಸಹಕಾರಿ: ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ. ಶ್ರೀನಿವಾಸ್ ಮಾತನಾಡಿ, ರಾಜ್ಯ ಸರ್ಕಾರ ಜಿಲ್ಲೆಯ ಹಲವು ಐಟಿಐಗಳಲ್ಲಿ 'ಟಾಟಾ ಉದ್ಯೋಗ್' ಯೋಜನೆ ಜಾರಿಗೆ ತಂದಿದ್ದು, ಇದರಡಿ ಪ್ರಸ್ತುತ ಉದ್ಯೋಗಕ್ಕೆ ಅಗತ್ಯವಿರುವ ಕೌಶಲ್ಯಗಳನ್ನು ಪಡೆಯಲು ಅಗತ್ಯವಾದ ಕೋರ್ಸುಗಳನ್ನು ಆರಂಭಿಸಲಾಗಿದೆ ಎಂದರು.

ಪ್ರತಿ ಜಿಲ್ಲೆಯಲ್ಲೂ ಇರುವ ಜಿಟಿಡಿಸಿ ಆಶ್ರಯದಲ್ಲಿ 3 ವರ್ಷದ ಡಿಪ್ಲೋಮೋ ಕೋರ್ಸುಗಳನ್ನು ವ್ಯಾಸಂಗ ಮಾಡಿದರೆ ಶೇ.100 ರಷ್ಟು ಉದ್ಯೋಗ ಖಾತರಿ ಇದೆ ಎಂದು ತಿಳಿಸಿದರು. ಎಸ್ಸೆಸ್ಸೆಲ್ಸಿ ನಂತರ ಶೀಘ್ರದಲ್ಲಿಯೇ ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಏನು ಮಾಡಬೇಕು ಎಂದು ಯೋಚಿಸುವ ಯುವಕ/ಯುವತಿಯರಿಗೆ ಅತಿ ಕಡಿಮೆ ಅವಧಿಯಲ್ಲಿ ಹಾಗೂ ಕಡಿಮೆ ಖರ್ಚಿನಲ್ಲಿ ತಾಂತ್ರಿಕ ಕೌಶಲ್ಯಗಳನ್ನು ಗಳಿಸಿಕೊಂಡು ಉದ್ಯೋಗಸ್ಥರಾಗಲು ಕೈಗಾರಿಕಾ ತರಬೇತಿ ಸಂಸ್ಥೆಗಳು ಹಾಗೂ ಜಿ.ಟಿ.ಟಿ.ಸಿ ಸಂಸ್ಥೆಗಳಲ್ಲಿ ಭೋದಿಸಲಾಗುತ್ತಿರುವ ಕೋರ್ಸ್‌ಗಳು ದಾರಿದೀಪವಾಗಿದೆ ಎಂದು ತಿಳಿಸಿದರು.

ಕೋಲಾರ, ವೇಮಗಲ್, ನರಸಾಪುರ, ಮಾಲೂರು ಕೈಗಾರಿಕಾ ವಲಯಗಳಲ್ಲಿ ಇಂದು ಅನೇಕ ದೊಡ್ಡ ದೊಡ್ಡ ಉದ್ಯಮಗಳು ತಲೆಯೆತ್ತಿವೆ. ಮುಂದಿನ ದಿನಗಳಲ್ಲಿ ಕೆಜಿಎಫ್, ಮುಳಬಾಗಿಲುಗಳಲ್ಲೂ ಕೈಗಾರಿಕೆಗಳ ಬರುತ್ತಿವೆ, ಅಲ್ಲಿ ಇಂಜಿನಿಯರಿಂಗ್ ಕೋರ್ಸ್ ಮಾಡಿದವರಿಗಿಂತಲೂ ಡಿಪ್ಲೋಮೋ, ಐಟಿಐ, ಜಿಟಿಡಿಸಿ ಕೋರ್ಸು ಮುಗಿಸಿದ ವಿದ್ಯಾರ್ಥಿಗಳಿಗೆರ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಇಂದು ಸಾವಿರಾರು ಮಂದಿ ತಮ್ಮ ಬದುಕು ರೂಪಿಸಿಕೊಂಡಿದ್ದಾರೆ ಎಂದರು.

ಕೌಶಲ್ಯ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಜಿಲ್ಲೆಯಲ್ಲಿ ಸಾಕಷ್ಟು ಉದ್ಯೋಗಾವಕಾಶಗಳು ಲಭ್ಯವಿದ್ದು, ಕೈಗಾರಿಕಾ ತರಬೇತಿ ಸಂಸ್ಥೆ ಹಾಗೂ ಜಿ.ಟಿ.ಟಿ.ಸಿ ಸಂಸ್ಥೆಗಳಿಗೆ ದಾಖಲಾಗಲು ಎಸ್ಸೆಸ್ಸೆಲ್ಸಿ ಉತ್ತೀರ್ಣ ಹಾಗೂ ದ್ವಿತೀಯ ಪಿ.ಯು.ಸಿ. ಅನುತ್ತೀರ್ಣರಾದ ಅಭ್ಯರ್ಥಿಗಳು ತಮಗೆ ಹತ್ತಿರವಾದ ಜಿ.ಟಿ.ಟಿ.ಸಿ. ಕೇಂದ್ರ ಹಾಗೂ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ದಾಖಲಾತಿಗಾಗಿ ಸಂಪರ್ಕಿಸಲು ಕಿವಿಮಾತು ಹೇಳಿದರು. ಕೆರಿಯರ್ ಗೈಡೆನ್ಸ್‌ನ ಡಾ. ಶ್ರೀನಿವಾಸ್ ಉಪನ್ಯಾಸ ನೀಡಿ, ಕೋಲಾರ ಜಿಲ್ಲೆಯಲ್ಲಿ 7 ಸರ್ಕಾರಿ ಐ.ಟಿ.ಐಗಳು, 6 ಅನುದಾನಿತ ಸೇರಿ 37 ಐ.ಟಿ.ಐ ಗಳು ಹಾಗೂ ಜಿಲ್ಲಾ ಕೇಂದ್ರದಲ್ಲಿ ಜಿ.ಟಿ.ಟಿ.ಸಿ ತರಬೇತಿ ಸಂಸ್ಥೆಯಿದ್ದು ಹಲವಾರು ವೃತ್ತಿ ಕೌಶಲ್ಯಗಳನ್ನು ಬೋಧಿಸಲಾಗುತ್ತಿದೆ ಮತ್ತು ತರಬೇತಿ ಮುಗಿದ ನಂತರ ಎಲ್ಲಾ ಅಭ್ಯರ್ಥಿಗಳಿಗೂ ಉದ್ಯೋಗ ಅವಕಾಶ ಲಭ್ಯವಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಬಹುಕೌಶಲ್ಯವನ್ನು ಹೊಂದಿದ್ದರೆ ಮುಂದಿನ ದಿನಗಳಲ್ಲಿ ಉದ್ಯೋಗಾವಕಾಶ ಲಭಿಸುವುದು ಸುಲಭವೆಂದು ತಿಳಿಸಿದ ಅವರು, ಎಸ್ಸೆಸ್ಸೆಲ್ಸಿ ಪರೀಕ್ಷೆ ಫಲಿತಾಂಶ ಪ್ರಕಟವಾದ ನಂತರ ತಾವು ಗಳಿಸಿದ ಅಂಕ ಹಾಗೂ ತಮ್ಮ ಆಸಕ್ತಿಗೆ ಅನುಗುಣವಾಗಿ ವಿವಿಧ ಕೋರ್ಸ್‌ಗಳನ್ನು ಆಯ್ಕೆಮಾಡಿಕೊಳ್ಳಲು ಸೂಚಿಸಿದರು.

ಕೋಲಾರ ಜಿಲ್ಲೆಯ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ 2 ವರ್ಷ ಅವಧಿಯ ಕೋರ್ಸ್‌ಗಳಾದ ಎಲೆಕ್ಟ್ರಿಷಿಯನ್, ಎಲೆಕ್ಟ್ರಾನಿಕ್ ಮೆಕಾನಿಕ್, ಫಿಟ್ಟರ್ ಮೆಶಿನಿಷ್ಟ್, ಮೆಕಾನಿಕ್ ಮೋಟಾರ್ ವೆಹಿಕಲ್, ಟರ್ನರ್, ಟೂಲ್ & ಡೈ ಮೆಕಿಂಗ್ ಮುಂತಾದ ಕೋರ್ಸ್‌ಗಳು ಹಾಗೂ ಎಸ್.ಎಸ್.ಎಲ್.ಸಿ ಅನುತ್ತೀರ್ಣರಾದ ಅಭ್ಯರ್ಥಿಗಳಿಗೂ ಸಹ 1ವರ್ಷದ ಕೋರ್ಸ್‌ಗಳಾದ ವೆಲ್ಡರ್ ಹಾಗೂ ವುಡ್ ವರ್ಕ್ ಟಿಕ್ನಿಷಿಯನ್ ಕೋರ್ಸ್‌ಗಳ ಲಭ್ಯವಿದೆ ಎಂದು ತಿಳಿಸಿದರು. ಡಯಟ್ ಉಪನ್ಯಾಸಕರಾದ ಡಾ.ನಾರಾಯಣಸ್ವಾಮಿ, ಬಾಲಾಜಿ ಜಂಟಿಯಾಗಿ ನಿರೂಪಿಸಿದ ಕಾರ್ಯಕ್ರಮದಲ್ಲಿ ಪಿಯು ಉಪನಿರ್ದೇಶಕ ರಾಜಶೇಖರ್ ಪಟ್ಟಣ ಶೆಟ್ಟಿ, ಶಿಕ್ಷಣಾಧಿಕಾರಿ ಡಾ.ಎಸ್. ಆರ್.ವೀಣಾ,ಡಿವೈಪಿಸಿಗಳಾದ ರಾಜೇಶ್ವರಿ, ನಹೀದ್ ಫಾತಿಮಾ, ಜಿಲ್ಲಾ ಗ್ರಂಥಾಲಯಾಧಿಕಾರಿ ಗಣೇಶ್, ಐಟಿಐ ಗಳ ಪ್ರಾಂಶುಪಾಲರಾದಗೋಪಾಲ್,ವೆಂಕಟೇಶ್, ಕಾಲೇಜು ಪ್ರಾಂಶುಪಾಲ ಸುಬ್ರಮಣಿ,ಡಯಟ್ ಉಪ ಪ್ರಾಂಶುಪಾಲ ನಂಜುಂಡಯ್ಯ, ಹಿರಿಯ ಉಪನ್ಯಾಸಕ ನಾಗರಾಜ್, ಬಿಆರ್‌ಪಿ ರಶ್ಮಿ ಮತ್ತಿತರರು ಉಪಸ್ಥಿತರಿದ್ದು,ಸಿಆರ್‌ಪಿ ಸುರೇಶ್ ನಾಡಗೀತೆ ನಡೆಸಿಕೊಟ್ಟರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
28/03/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಆಲಮಟ್ಟಿ-ವಂಡಾಲ್ ವಿಭಾಗಕ್ಕೆ ಚಾಲನೆ

ಗದಗ

ನೈಋತ್ಯ ರೈಲ್ವೆ ವ್ಯಾಪ್ತಿಯ ಗದಗ–ಹೋಟಗಿ ಡಬ್ಲಿಂಗ್ ಯೋಜನೆಯ ಪ್ರಮುಖ ಹಂತವಾಗಿ ಆಲಮಟ್ಟಿ–ವಂಡಾಲ್ ನಡುವಿನ 9.60 ಕಿ.ಮೀ. ಬ್ರಾಡ್ ಗೇಜ್ ಡಬಲ್ ಲೈನ್ ಕಾಮಗಾರಿ ಯಶಸ್ವಿಯಾಗಿ ಪೂರ್ಣಗೊಂಡಿದೆ. ಈ ವಿಭಾಗವನ್ನು 25.03.2026ರಂದು ಸಾರ್ವಜನಿಕ ಪ್ರಯಾಣಿಕರ ಸಂಚಾರಕ್ಕೆ ಅಧಿಕೃತವಾಗಿ ತೆರೆಯಲಾಗಿದೆ.

ಈ ಹೊಸ ರೈಲು ಮಾರ್ಗದಲ್ಲಿ ಪರ್ವತಿಕಟ್ಟಿ ಹಳ್ಳದ ಮೇಲೆ ಪ್ರಮುಖ ಓಪನ್ ವೆಬ್ ಗರ್ಡರ್ ಸೇತುವೆ ನಿರ್ಮಾಣಗೊಂಡಿದ್ದು, ಪ್ರತಿ 45.72 ಮೀಟರ್ ಉದ್ದದ 9 ಸ್ಪ್ಯಾನ್‌ಗಳನ್ನು ಒಳಗೊಂಡಿದೆ. ಜೊತೆಗೆ ಒಂದು ಸಣ್ಣ ಸೇತುವೆ, ಒಂದು ರಸ್ತೆ ಮೇಲ್ಸೇತುವೆ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ನಿರ್ಮಿಸಲಾಗಿದೆ.

ಮಾರ್ಗದಲ್ಲಿ 60 ಕೆ.ಜಿ. ತೂಕದ



ರೈಲು ಹಳಿಗಳನ್ನು ಸ್ಲೀಪರ್‌ಗಳ ಮೇಲೆ ಸಮರ್ಪಕ ಬ್ಯಾಲಸ್ಟ್ ಕುಶನ್‌ನೊಂದಿಗೆ ಅಳವಡಿಸಲಾಗಿದೆ. ಈ ಹಳಿಯನ್ನು ಗರಿಷ್ಠ 110 ಕಿ.ಮೀ./ಗಂ ವೇಗದಲ್ಲಿ ರೈಲು ಸಂಚಾರಕ್ಕೆ ಅನುಕೂಲವಾಗುವಂತೆ ವಿನ್ಯಾಸಗೊಳಿಸಲಾಗಿದೆ. ಅಗತ್ಯ ಸಿಗ್ನಲಿಂಗ್ ವ್ಯವಸ್ಥೆ, ನಿಲ್ದಾಣ ಸೌಲಭ್ಯಗಳು ಹಾಗೂ ಸುರಕ್ಷತಾ ವ್ಯವಸ್ಥೆಗಳನ್ನೂ ಕಲ್ಪಿಸಲಾಗಿದೆ.

ಆಲಮಟ್ಟಿ–ವಂಡಾಲ್ ವಿಭಾಗವು ಈ ಯೋಜನೆಯ ಪ್ರಮುಖ ಬಾಕಿ ಭಾಗವಾಗಿದ್ದು, ಇದರ ಪೂರ್ಣಗೊಳಿಸುವಿಕೆಯಿಂದ ಗದಗ–ಹೋಟಗಿ ಡಬ್ಲಿಂಗ್ ಯೋಜನೆ ಸಂಪೂರ್ಣವಾಗಿ ನೆರವೇರಿದೆ. ಇದರ ಫಲವಾಗಿ ರೈಲು ಮಾರ್ಗ ಸಾಮರ್ಥ್ಯ ಹೆಚ್ಚಳ, ರೈಲುಗಳ ವಿಳಂಬ ಕಡಿತ, ಸಮಯಪಾಲನೆ ಸುಧಾರಣೆ ಹಾಗೂ ಪ್ರಯಾಣಿಕ ಮತ್ತು ಸರಕು ರೈಲುಗಳ ವೇಗವಾದ ಸಂಚಾರಕ್ಕೆ ಮಹತ್ವದ ನೆರವು ದೊರೆಯಲಿದೆ.

ಈ ಅಭಿವೃದ್ಧಿಯಿಂದ ಸುರಕ್ಷಿತ ಹಾಗೂ ಸುಗಮ ರೈಲು ಕಾರ್ಯಾಚರಣೆ ಸಾಧ್ಯವಾಗುವುದರೊಂದಿಗೆ, ಪ್ರದೇಶದ ರೈಲು ಸಂಪರ್ಕ ಮತ್ತು ಸರಕು ಸಾಗಣೆ ವ್ಯವಸ್ಥೆಗೆ ಹೊಸ ಉತ್ತೇಜನ ಸಿಗಲಿದೆ.

## ನೇರ ಫೋನ್ ಇನ್ ಕಾರ್ಯಕ್ರಮ

ಬೆಂಗಳೂರು

ಬೆಂಗಳೂರು ಜಲಮಂಡಳಿಯ ವತಿಯಿಂದ ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ.ವಿ.ರಾಮ್ ಪ್ರಸಾತ್ ಮನೋಹರ್ ಅಧ್ಯಕ್ಷತೆಯಲ್ಲಿ ಮಾರ್ಚ್ 27 ರಂದು ಶುಕ್ರವಾರ ಬೆಳಿಗ್ಗೆ 09:30 ರಿಂದ 10:30 ರವರೆಗೆ ನೇರ ಫೋನ್–ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ.

ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು–ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು. ಸಾರ್ವಜನಿಕರು ಸಂಪರ್ಕಿಸ ಬಹುದಾದ ದೂರವಾಣಿ ಸಂಖ್ಯೆ; 080–22945119 ಮತ್ತು 080–22229639. ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ. ಸಾರ್ವಜನಿಕರು ಈ ನೇರ ಫೋನ್–ಇನ್ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ಪ್ರಕಟಣೆಯಲ್ಲಿ ಕೋರಿದೆ.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಬೀದರ್ ನಲ್ಲಿ ಏಪ್ರಿಲ್ 11&12 ರಂದು ಏರ್ಪಡಿಸಲಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಸಿದ್ದಗೊಳ್ಳುತ್ತಿರುವ ಪತ್ರಕರ್ತ ವಿಶೇಷ ಸಂಚಿಕೆಗೆ ಸಂದೇಶ, ವಿಶೇಷ ಲೇಖನ ಕೊಡುವಂತೆ ಸಿಎಂ ಸಿದ್ದರಾಮಯ್ಯ ಅವರನ್ನು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ವಿನಂತಿಸಿ ವಿಧಾನಸೌಧದಲ್ಲಿ ಮನವಿ ಸಲ್ಲಿಸಿದರು ಮತ್ತು ಸಮ್ಮೇಳನಕ್ಕೆ ಆಹ್ವಾನಿಸಿದರು.

## ಭಯೋತ್ಪಾದಕರ ನಂಟು: ಓರ್ವನ ಬಂಧನ

ಬಳ್ಳಾರಿ

ಮೂಲಭೂತವಾದದ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಪ್ರಚಾರ ಹಾಗೂ ಭಯೋತ್ಪಾದಕರ ನಂಟು ಶಂಕೆ ಹಿನ್ನೆಲೆ ಬಳ್ಳಾರಿ ಮೂಲದ ಓರ್ವ ಯುವಕ ಸೇರಿದಂತೆ ದೇಶದ ವಿವಿಧ ರಾಜ್ಯದ 12 ಮಂದಿಯನ್ನು ಆಂಧ್ರ ಪ್ರದೇಶದ ವಿಜಯವಾಡ ಪೊಲೀಸರು ಬಂಧಿಸಿದ್ದಾರೆ. ಬಳ್ಳಾರಿ ನಗರದ ಅಬ್ದುಲ್ ಸಲಾಮ್ (36) ರಾಜ್ಯದಲ್ಲಿ ಅರೆಸ್ಟ್ ಆಗಿರುವ ಆರೋಪಿ. ಕರ್ನಾಟಕ ಸೇರಿದಂತೆ ಆಂಧ್ರ, ಬಿಹಾರ, ಮಹಾರಾಷ್ಟ್ರ ಒಳಗೊಂಡು ವಿವಿಧ ರಾಜ್ಯಗಳಲ್ಲಿ ಪೊಲೀಸರು ಕಾರ್ಯಾಚರಣೆ ನಡೆಸಿದ್ದರು.



ದಶಕಗಳಿಂದ ಶ್ರೀ ಅಯ್ಯಪ್ಪ ಸೇವಾ ಸಂಘದಲ್ಲಿ ನಿಷ್ಠೆಯಿಂದ ಸೇವೆ ಸಲ್ಲಿಸುತ್ತಿರುವ ಶ್ರೀ ರಾಮದಾಸಜಿಯವರ ನಿವಾಸಕ್ಕೆ ಕೇಂದ್ರ ಸಚಿವೆ ಶೋಭಾಕರಂದ್ಲಾಜೆ ಅವರು ಭೇಟಿ ನೀಡಿ ಆತ್ಮೀಯವಾಗಿ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಪಕ್ಷದ ಅಭ್ಯರ್ಥಿಗಳಿಗೆ ತಮ್ಮ ಬೆಂಬಲವನ್ನು ನೀಡುವಂತೆ ಮನವಿ ಮಾಡಿದರು. ಸಮಾಜ ಸೇವೆಯ ಮೂಲಕ ಜನಮನ ಗೆದ್ದಿರುವ ರಾಮದಾಸಜಿಯವರಂತಹ ಹಿರಿಯರ ಆಶೀರ್ವಾದ ಮತ್ತು ಮಾರ್ಗದರ್ಶನ ನಮ್ಮ ಪಕ್ಷಕ್ಕೆ ಶಕ್ತಿ ನೀಡುತ್ತದೆ ಎಂಬ ಹರ್ಷ ವ್ಯಕ್ತಪಡಿಸಿದರು.

# ಆನೆ, ಕಾಡೆಮ್ಮೆ ಹಾವಳಿ ನಿಯಂತ್ರಣಕ್ಕೆ ಮನವಿ



ಬೆಂಗಳೂರು

ಭದ್ರಾ ಅಭಯಾರಣ್ಯದ ಪರಿಸರ ಸೂಕ್ಷ್ಮ ವಲಯ ಪ್ರದೇಶವನ್ನು ನಿಗದಿ ಪಡಿಸುವ ಕುರಿತಂತೆ ಚಿಕ್ಕಮಗಳೂರು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಲಾಗಿದ್ದು, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದರು.

ವಿಕಾಸಸೌಧದಲ್ಲಿಂದು ಚಿಕ್ಕಮಗಳೂರು ಜಿಲ್ಲೆ ಖಾಂಡ್ಯ ಹೋಬಳಿಯ ಗ್ರಾಮಸ್ಥರ ನಿಯೋಗವು ಕಾಡಾನೆ ಸೆರೆ, ಕಾಡುಕೋಣ ಮತ್ತು ಕಾಡುಹಂದಿಗಳ ಉಪಟಳ ನಿಯಂತ್ರಿಸುವಂತೆ ಕೋರಿ ಸಲ್ಲಿಸಿದ ಮನವಿ ಸ್ವೀಕರಿಸಿ ಮಾತನಾಡಿದ ಅವರು, 2011ರಲ್ಲಿ ಹಳ್ಳಿಗಳನ್ನೂ ಬಫರ್ ವಲಯದಲ್ಲಿ ಸೇರಿಸಲಾಗಿದೆ. ಅದೇ ರೀತಿ ಹಿಂದಿನ ಬಿಜೆಪಿ ಸರ್ಕಾರ ಡೀಮ್ಡ್ ಅರಣ್ಯ ವಿಚಾರದಲ್ಲೂ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸದೆ, ಸಲ್ಲಿಸಿರುವ ಪ್ರಮಾಣ ಪತ್ರದಿಂದ ಗೊಂದಲವಾಗಿದ್ದು, ಈಗ ಆ ಸಮಸ್ಯೆಯನ್ನೂ ಪರಿಹರಿಸಲು ತಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವುದಾಗಿ ತಿಳಿಸಿದರು.

2022ರಲ್ಲಿ ಹಿಂದಿನ ಬಿಜೆಪಿ ಸರ್ಕಾರದಲ್ಲಿ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡದೆ ಕುಳಿತಲ್ಲೇ ಮನೆ, ಪಟ್ಟಾ ಜಮೀನು, ಸರ್ಕಾರಿ ಕಚೇರಿ, ಶಾಲೆ, ಆಸ್ಪತ್ರೆ ಎಲ್ಲವನ್ನೂ ಡೀಮ್ಡ್ ಅರಣ್ಯದ ವ್ಯಾಪ್ತಿಗೆ ಸೇರಿಸಿದ್ದಾರೆ. ಈಗ ಎಲ್ಲೆಲ್ಲಿ ಇಂತಹ ಸಮಸ್ಯೆ ಇದೆಯೋ ಅದಕ್ಕೆ ಪರ್ಯಾಯವಾಗಿ ಬೇರೆ ಭೂಮಿ ಗುರುತಿಸಿ, ಡೀಮ್ಡ್ 2ರಲ್ಲಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿರುವ ಅರಣ್ಯ ಪ್ರದೇಶದ ಪ್ರಮಾಣ ಉಳಿಸಿಕೊಂಡು ಸುಪ್ರೀಂಕೋರ್ಟ್‌ಗೆ ಪ್ರಮಾಣ ಪತ್ರ ಸಲ್ಲಿಸಲಾಗುವುದು ಎಂದರು.

ಗ್ರಾಮಗಳಿಗೆ ನುಗ್ಗಿ ಬೆಳೆಹಾನಿ, ಜೀವಹಾನಿ ಮಾಡುತ್ತಿರುವ ಆನೆಗಳ ಸೆರೆಗೆ ಆದೇಶ ನೀಡಿದ್ದು, ಈಗಾಗಲೇ 2 ಆನೆ ಸೆರೆ ಹಿಡಿಯಲಾಗಿದೆ. ಇನ್ನೂ ಎರಡು ಆನೆಗಳನ್ನು ಸೆರೆ ಹಿಡಿಯಲು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಚಿಕ್ಕಮಗಳೂರು, ಕೊಡಗು ಮತ್ತು ಹಾಸನದ ಕೆಲವು ಭಾಗದಲ್ಲಿ ಕಾಡಿನ ಹೊರಗೆ 100ಕ್ಕೂ ಹೆಚ್ಚು ಆನೆಗಳಿದ್ದು, ಅವುಗಳಿಗೆ ಕಾಫಿ ತೋಟ ಯಾವುದು, ಅರಣ್ಯ ಯಾವುದು ಎಂದು ತಿಳಿಯುವುದಿಲ್ಲ. ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ಆನೆಧಾಮ ನಿರ್ಮಿಸಲು 53 ಕೋಟಿ ರೂ. ಮಂಜೂರು ಮಾಡಿಸಿದ್ದೇನೆ, ಆನೆ ಕಂದಕ ನಿರ್ವಹಣೆ, ಟೆಂಟಕಲ್ ಫೆನ್ಸಿಂಗ್, ಸೌರ ತಂತಿ ಬೇಲಿ ಅಳವಡಿಕೆ ಮಾಡಲಾಗಿದೆ, ಸಮಗ್ರ ಕಮಾಂಡ್ ಸೆಂಟರ್ ಮಾಡಿ ಸಾರ್ವಜನಿಕರಿಗೆ ವನ್ಯಜೀವಿ ಸಂಚಾರದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. 12 ಕೋಟಿ ರೂ.ವೆಚ್ಚದಲ್ಲಿ ನಿಮ್ಮ ಭಾಗದಲ್ಲಿ ರೈಲ್ವೆ ಹಳಿ ತಡೆಗೋಡೆ ನಿರ್ಮಿಸಲಾಗುತ್ತಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ಕಾಡುಕೋಣ, ಕಾಡೆಮ್ಮೆ ನಿಯಂತ್ರಣಕ್ಕೆ ಇಲಾಖೆಯ ಸಿಬ್ಬಂದಿ ತರಬೇತಿ ಪಡೆದು ಬಂದಿದ್ದು, ಕಾಡುಪ್ರಾಣಿಗಳಿಗಾಗಲೀ, ಕಾಡಿನಂಚಿನ ಗ್ರಾಮಸ್ಥರಿಗಾಗಲೀ ತೊಂದರೆ ಆಗದಂತೆ ಹಾಗೂ ಜೀವ, ಜೀವನೋಪಾಯ ಎರಡನ್ನೂ ಉಳಿಸಲು ಪ್ರಕೃತಿ ಪರಿಸರ ರಕ್ಷಣೆಯೊಂದಿಗೆ ಸುಸ್ಥಿರ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದರು.

ಕಾಡಿನಂಚಿನ ಗ್ರಾಮಗಳಲ್ಲಿ ಜನ ಸಂಪರ್ಕ ಸಭೆ ನಡೆಸುವ ಮೂಲಕ ಗ್ರಾಮಗಳ ಮೂಲಸೌಲಭ್ಯ ಮತ್ತು ಗ್ರಾಮೀಣ ಜನರ ಕೌಶಲ್ಯವರ್ಧನೆಯಂತಹ ಕಾರ್ಯಕ್ರಮಗಳನ್ನೂ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಶೃಂಗೇರಿ ಶಾಸಕ ರಾಜೇಗೌಡ, ಭದ್ರಾ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಅಂಶುಮಂತಗೌಡ, ಅರಣ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು.

# ಇರಾನ್‌ನಲ್ಲಿ ನಾಯಕರೇ ಇಲ್ಲ: ಟ್ರಂಪ್

ಮೊದಲ ಹಂತದ ನಾಯಕರ ಹೋದ ನಂತರ ಹೊಸ ನಾಯಕರನ್ನು ನೇಮಕ ಮಾಡಿದ್ದರು. ಅವರನ್ನು ನಾವು ಹೊಡೆದು ಹಾಕಿದ ನಂತರ ಈಗ ಇರಾನ್‌ನಲ್ಲಿ ನಾಯಕರೇ ಇಲ್ಲ. ಒಂದು ವೇಳೆ ನಾವು ಬಿ–2 ಬಾಂಬರ್ ಮೂಲಕ ಅವರ ಪರಮಾಣು ಸ್ಥಾವರನ್ನು ಹೊಡೆದು ಹಾಕದೇ ಇದ್ದರೆ ಅವರು ಅಣ್ವಸ್ತ್ರವನ್ನು ಹೊಂದುವ ಸಾಧ್ಯತೆ ಇತ್ತು ಮತ್ತು ಪ್ರಶ್ನಾತೀತವಾಗಿ ಬಳಸುತ್ತಿದ್ದರು ಎಂದು ಟ್ರಂಪ್ ತಿಳಿಸಿದರು.

ಸೋತಿರುವ ಇರಾನ್ ಈಗ ನಮ್ಮ ಜೊತೆ ಒಪ್ಪಂದ ಮಾಡುವಂತೆ ಭಿಕ್ಷೆ ಬೇಡಿಕೊಳ್ಳುತ್ತಿದೆ. ಆದರೆ ನಮಗೆ ಒಪ್ಪಂದ ಮಾಡಲು ಸಾಧ್ಯವಾಗುತ್ತದೆಯೋ ಇಲ್ಲವೋ ನನಗೆ ತಿಳಿದಿಲ್ಲ. ಅವರು ಅದನ್ನು ನಾಲ್ಕು ವಾರಗಳ ಹಿಂದೆ ಮಾಡಬೇಕಾಗಿತ್ತು. ಎರಡು ವರ್ಷಗಳ ಹಿಂದೆ ಅಥವಾ ನಾವು ಮೊದಲು ಅಧಿಕಾರಕ್ಕೆ ಬಂದಾಗ ಅವರು ಅದನ್ನು ಮಾಡಬೇಕಾಗಿತ್ತು ಎಂದು ಹೇಳಿದರು.

ಇರಾನಿನ ನೌಕಾಪಡೆಯನ್ನು ನಾವು ಮುಳುಗಿಸಿದ್ದೇವೆ. ಬಹುಷ: ಎರಡನೇ ಮಹಾಯುದ್ಧ ನಂತರ ವಿದೇಶ ನೌಕಾಪಡೆಯನ್ನು ಸಂಪೂರ್ಣವಾಗಿ ಧ್ವಂಸಗೊಳಿಸಿದ್ದು ಇದೇ ಇರಬೇಕು. ಅವರಲ್ಲಿ ವಾಯುಪಡೆ ಇಲ್ಲ. ವಿಮಾನ ವಿರೋಧಿ ಮತ್ತು ಸಂವಹನ ಸಾಮರ್ಥ್ಯಗಳು ಸಂಪೂರ್ಣವಾಗಿ ನಾಶವಾಗಿದೆ ಎಂದು ಹೇಳಿದರು.

# ಜಿಬಿಎ ಚುನಾವಣೆಯಲ್ಲಿ ಗೆಲುವಿಗೆ ಶ್ರಮ: ವಿಜಯೇಂದ್ರ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಪಂಚ ಪಾಲಿಕೆಗಳ ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಶ್ರಮಿಸೋಣ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಪಂಚ ಪಾಲಿಕೆಗಳ ಚುನಾವಣೆ ಕಾರ್ಯತಂತ್ರ ಸಂಬಂಧ ಇಂದು ಸಭೆ ನಡೆಯಿತು. ಕಾಂಗ್ರೆಸ್ಸಿನ ಅಸಮರ್ಥ ಆಡಳಿತವನ್ನು ಜನರಿಗೆ ಮನವರಿಕೆ ಮಾಡುವ ಮೂಲಕ ಬಿಜೆಪಿ ಗೆಲುವಿಗೆ ಶ್ರಮಿಸಲು ಸಲಹೆ ನೀಡಲಾಯಿತು.




ಜಿಬಿಎ ಚುನಾವಣಾ ಉಸ್ತುವಾರಿ ರಾಮ್ ಮಾಧವ್, ಸಹ ಉಸ್ತುವಾರಿಗಳಾದ ಸತೀಶ್ ಪೂನಿಯ, ಸಂಜಯ್ ಉಪಾಧ್ಯಾಯ, ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ್, ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ, ಮಾಜಿ ಸಚಿವರಾದ ಎಸ್.ಸುರೇಶ್‌ಕುಮಾರ್, ಕೆ.ಗೋಪಾಲಯ್ಯ, ಬೈರತಿ ಬಸವರಾಜ್, ಎನ್.ಮುನಿರತ್ನ, ರಾಜ್ಯ ಉಪಾಧ್ಯಕ್ಷೆ ಮಾಳವಿಕಾ ಅವಿನಾಶ್, ಶಾಸಕ ಮತ್ತು ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಸಿ.ಕೆ. ರಾಮಮೂರ್ತಿ, ಶಾಸಕರಾದ ಎಲ್.ಎ. ರವಿಸುಬ್ರಹ್ಮಣ್ಯ, ಸುರೇಶ್ ಗೌಡ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಸಭೆಯ ಅಪೇಕ್ಷಿತರು, ಪ್ರಮುಖರು ಭಾಗವಹಿಸಿದ್ದರು.

# ಅಕ್ರಮ ಗಣಿಗಾರಿಕೆ: ರಾಜ್ಯ ಸರ್ಕಾರಕ್ಕೆ ಎನ್‌ಜಿಟಿ ನೋಟಿಸ್

ಪ್ರಕರಣದಲ್ಲಿ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಕೋಲಾರ ಜಿಲ್ಲಾಡಳಿತದ ಅಧಿಕಾರಿಗಳು ಹಾಗೂ ಕ್ರಷರ್ ಮತ್ತು ಕ್ವಾರಿ ಮಾಲೀಕರನ್ನು ಪ್ರತಿವಾದಿಗಳನ್ನಾಗಿ ಸೇರಿಸಲಾಗಿದೆ.

ನವೀನ್ ಕುಮಾರ್ ಪರ ವಕೀಲರು ಎನ್‌ಜಿಟಿಗೆ 1042 ಪುಟಗಳ ದಾಖಲೆಗಳನ್ನು ಸಲ್ಲಿಸಿದ್ದು, ಪ್ರಕರಣದ ಗಂಭೀರತೆಯನ್ನು ಒತ್ತಿಹೇಳಿದ್ದಾರೆ. ಇದಕ್ಕೆ ಸಂಬಂಧಿಸಿ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಗೆ ಸ್ಥಳ ಪರಿಶೀಲನೆ ನಡೆಸಿ ಸಮಗ್ರ ವರದಿ ಸಲ್ಲಿಸಲು ನ್ಯಾಯಾಲಯ ಸೂಚಿಸಿದೆ. ಜೊತೆಗೆ, ಪ್ರತಿವಾದಿಗಳು ಎರಡು ತಿಂಗಳ ಒಳಗೆ ತಮ್ಮ ವಿವರಣೆ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಜೂನ್ 6ಕ್ಕೆ ಮುಂದೂಡಲಾಗಿದೆ.

ಮಾಲೂರು ತಾಲೂಕಿನಲ್ಲಿ ಅಕ್ರಮ ಗಣಿಗಾರಿಕೆ ನಡೆಸಿ ಸುಮಾರು 3000 ಕೋಟಿ ರೂ. ಮೌಲ್ಯದ ಪ್ರಾಕೃತಿಕ ಸಂಪತ್ತು ಹಾಗೂ ಸರ್ಕಾರದ ಹಣ ವಂಚಿಸಲಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ರಾಜ್ಯ ಸರ್ಕಾರ, ಜಿಲ್ಲಾಡಳಿತದ ಕೆಲ ಅಧಿಕಾರಿಗಳು ಹಾಗೂ ರಾಜಕೀಯ ಪ್ರಭಾವದ ಆಶ್ರಯದಲ್ಲಿ ಈ ಅಕ್ರಮ ನಡೆಯುತ್ತಿದೆ ಎಂದು ನವೀನ್ ಕುಮಾರ್ ಹೇಳಿದ್ದಾರೆ.

ಇದಲ್ಲದೆ, 100 ಎಕರೆಗೂ ಹೆಚ್ಚು ಬಫರ್ ಜೋನ್ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆದಿರುವುದಾಗಿ ಆರೋಪಿಸಲಾಗಿದ್ದು, ನೂರಾರು ಕಾರ್ಮಿಕರು ಮೃತಪಟ್ಟರೂ ಪೊಲೀಸ್ ಇಲಾಖೆ ಸಮರ್ಪಕ ತನಿಖೆ ನಡೆಸದೆ ಕಾರ್ಮಿಕರ ಮೇಲೆಯೇ ಪ್ರಕರಣ ದಾಖಲಿಸುತ್ತಿದೆ ಎಂಬ ಗಂಭೀರ ಆರೋಪವೂ ಮಾಡಲಾಗಿದೆ.

# ವಿದ್ಯಾರ್ಥಿಯಿಂದ ಖಾಸಗಿ ಕೆಲಸ: ಶಿಕ್ಷಕರ ವಿರುದ್ಧ ಆಕ್ರೋಶ

ಶ್ರೀನಿವಾಸಪುರ

ಪಟ್ಟಣದ ಸರ್ಕಾರಿ ಕನ್ನಡ ಬಾಲಕರ ಮಾದರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಶಿಕ್ಷಕನೊಬ್ಬ ಶಾಲಾ ಮಕ್ಕಳನ್ನು ತನ್ನ ಖಾಸಗಿ ಕೆಲಸಗಳಿಗೆ ಬಳಸಿಕೊಂಡಿರುವ ಘಟನೆಗೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಶಾಲಾ ಮಕ್ಕಳನ್ನು ಯಾವುದೇ ವೈಯಕ್ತಿಕ ಕೆಲಸಗಳಿಗೆ ಬಳಸಿಕೊಳ್ಳಬಾರದು ಎಂಬ ಸ್ಪಷ್ಟ ನಿಯಮಗಳಿದ್ದರೂ, ಅವನ್ನು ಲೆಕ್ಕಿಸದೆ ಈ ಶಾಲೆಯ ವೇಣುಗೋಪಾಲ್ ಎಂಬ ಶಿಕ್ಷಕ ಶ್ರೀರಾಮನವಮಿ ಹಬ್ಬದ ಹಿನ್ನೆಲೆಯಲ್ಲಿ ತನ್ನ ಮನೆಗೆ ಅಗತ್ಯವಾದ ಹಬ್ಬದ ಸಾಮಗ್ರಿಗಳನ್ನು ತರಲು 7ನೇ ತರಗತಿಯ ವಿದ್ಯಾರ್ಥಿಯನ್ನು ಕರೆದುಕೊಂಡು ಹೋಗಿದ್ದಾನೆ ಎಂಬ





ಆರೋಪ ಕೇಳಿಬಂದಿದೆ. ಪಟ್ಟಣದ ಹೊಸ ಟಿ.ಎಂ.ಸಿ ಮಾರುಕಟ್ಟೆಯಲ್ಲಿ ಶಿಕ್ಷಕನ ಹಿಂದೆ ವಿದ್ಯಾರ್ಥಿ ಸಾಮಗ್ರಿಗಳನ್ನು ಹೊತ್ತು ಓಡಾಡುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಈ ಘಟನೆ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಶಿಕ್ಷಕರು ಮಕ್ಕಳಿಗೆ ಪಾಠ ಬೋಧನೆ ಮಾಡುವ ಬದಲು, ತಮ್ಮ ವೈಯಕ್ತಿಕ ಕೆಲಸಗಳನ್ನು ಮಾಡಿಸುವುದು ನಾಚಿಕೆಗೇಡಿನ ಸಂಗತಿ ಎಂದು ಸಾರ್ವಜನಿಕರು ತೀವ್ರವಾಗಿ ಖಂಡಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲಾ ಶಿಕ್ಷಕರ ವರ್ತನೆಗಳ ಬಗ್ಗೆ ಅನುಮಾನಗಳು ವ್ಯಕ್ತವಾಗುತ್ತಿವೆ ಎಂದು ಕೂಡ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ಏ.1ರಂದು ಸಿದ್ದಗಂಗಾ ಮಠಕ್ಕೆ ರಾಷ್ಟ್ರಪತಿ ಭೇಟಿ; ಎಲ್ಲೆಡೆ ಬಂದೋಬಸ್ತ್

ತುಮಕೂರು

ಏಪ್ರಿಲ್ 1ರಂದು ಸಿದ್ದಗಂಗಾ ಮಠದ ಲಿಂಗೈಕ್ಯ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜಯಂತಿ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾಗವಹಿಸಲಿದ್ದು, ಸಂಬಂಧಿಸಿದಂತೆ ತುಮಕೂರು ನಗರದಾದ್ಯಂತ ಅಂದು ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಇರಲಿದೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ನಡೆದ ಅತಿಗಣ್ಯರ ಭದ್ರತೆಯ ಪೂರ್ವ ಭಾವಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಈಗಾಗಲೇ ತುಮಕೂರು ಜಿಲ್ಲೆಗೆ ಉಪರಾಷ್ಟ್ರಪತಿ, ಕೇಂದ್ರ ಗೃಹ ಸಚಿವರು, ರಾಜ್ಯಪಾಲರು ಸೇರಿದಂತೆ ಗಣ್ಯರು ಆಗಮಿಸಿದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸೂಕ್ತ ಭದ್ರತೆಯನ್ನು ಒದಗಿಸಿ ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ಜರುಗಿಸಲಾಗಿದೆ.

ಪ್ರಸ್ತುತ ರಾಷ್ಟ್ರಪತಿಯವರ ಕಾರ್ಯಕ್ರಮ ಅತಿಗಣ್ಯರ ಭದ್ರತೆ ಹೊಂದಿರುವುದರಿಂದ ಯಾವುದೇ ಲೋಪವಿಲ್ಲದಂತೆ ಭದ್ರತೆ ಒದಗಿಸುವ ಸಲುವಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ನಿಯೋಜನೆ ಮಾಡಲಾಗಿದೆ ಎಂದು



ಸಭೆಗೆ ಮಾಹಿತಿ ನೀಡಿದರು.

ಭದ್ರತೆ ಕುರಿತು ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್ ಅವರು, ದೇಶದ ಪ್ರಥಮ ಪ್ರಜೆ ರಾಷ್ಟ್ರಪತಿ ಅವರ ಆಗಮನದ ಹಿನ್ನೆಲೆಯಲ್ಲಿ ನಗರದಾದ್ಯಂತ ಪೊಲೀಸ್ ಬಂದೋಬಸ್ತ್ ಏರ್ಪಡಿಸಲು ವ್ಯವಸ್ಥೆ ಮಾಡಲಾಗಿದೆ ಎಂದರು.

ರಾಷ್ಟ್ರಪತಿ ಅವರ ಭದ್ರತೆಗೆ ಸುಮಾರು 15,000 ಪೊಲೀಸ್ ಸಿಬ್ಬಂದಿ ನಿಯೋಜಿಸಲು ಪೊಲೀಸ್ ಇಲಾಖೆ ಸಿದ್ಧತೆ ಮಾಡಿಕೊಂಡಿರುವ ಬಗ್ಗೆ ಮಾಹಿತಿ ನೀಡಿದ ಅವರು, ರಾಷ್ಟ್ರಪತಿ ಆಗಮಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮತ್ತೆ ನಿರ್ಗಮಿಸುವವರೆಗೆ ತುಮಕೂರು ನಗರದಾದ್ಯಂತ ಪೊಲೀಸ್ ಬಂದೋಬಸ್ತ್ ಮಾಡಲಾಗಿರುತ್ತದೆ. ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಹೆಲಿಪ್ಯಾಡ್, ವಾಹನ ಸಂಚರಿಸುವ ರಸ್ತೆ ಮಾರ್ಗಗಳು ಹಾಗೂ ಕಾರ್ಯಕ್ರಮ ನಡೆಯುವ ಜಾಗ ಸೇರಿದಂತೆ ಎಲ್ಲಾ ಪ್ರದೇಶಗಳಲ್ಲಿ ಪ್ರತ್ಯೇಕವಾದ ತಂಡಗಳನ್ನು ರಚಿಸಿ ಪೊಲೀಸ್ ಬಂದೋಬಸ್ತ್ ಮಾಡಲಾಗುತ್ತಿದೆ. ಅಲ್ಲದೆ, ಮಾರ್ಚ್ 31ರಂದೇ ತಾಲೀಮು ಪ್ರಕ್ರಿಯೆ ಹಾಗೂ ಪೊಲೀಸ್ ಸಿಬ್ಬಂದಿಗೆ ಮಾಹಿತಿ ಹಾಗೂ ಇನ್ನಿತರ ಚಟುವಟಿಕೆಗಳನ್ನು ಪೊಲೀಸ್ ಇಲಾಖೆ ಹಮ್ಮಿಕೊಂಡಿರುವುದಾಗಿ ಸಭೆಗೆ ಮಾಹಿತಿ ನೀಡಿದರು.

ನಗರದಾದ್ಯಂತ ಎಲ್ಲಾ ರಸ್ತೆಗಳನ್ನು ಪೊಲೀಸ್ ಬಂದೋಬಸ್ತ್‌ನಲ್ಲಿ ಇರಿಸಿರುವ ಹಿನ್ನೆಲೆಯಲ್ಲಿ ನಗರದಲ್ಲಿ ಸಂಚರಿಸುವ ಸಾರ್ವಜನಿಕರಿಗೆ ಪರ್ಯಾಯ ಮಾರ್ಗವನ್ನು ಸೂಚಿಸ ಲಾಗುವುದು. ಅಲ್ಲದೆ, ಕಾರ್ಯಕ್ರಮ ನಡೆಯುವ ಜಾಗಕ್ಕೆ ಸಾರ್ವಜನಿಕರು, ಭಕ್ತರು ತೆರಳಲು ಪ್ರತ್ಯೇಕ ಪ್ರವೇಶ ದ್ವಾರಗಳನ್ನು ನಿಗಧಿಗೊಳಿ ಸಲಾಗುವುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಕೇಂದ್ರ ಗುಪ್ತಚರ ಇಲಾಖೆಯ ಸುಹಾಸ್ ಸೂಡ ಅವರು, ರಾಷ್ಟ್ರಪತಿ ಕಾರ್ಯಕ್ರಮಕ್ಕೆ ಅತಿಗಣ್ಯರ ಭದ್ರತೆ ಇರುವುದರಿಂದ ಜಿಲ್ಲಾಡಳಿತದಿಂದ ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ಅನುಸರಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಜಿಲ್ಲಾಡಳಿತದಿಂದ ಅಧಿಕಾರಿಗಳನ್ನು ನಿಯೋಜಿಸಿ ಜವಾಬ್ದಾರಿ ವಹಿಸಿರುವುದು ಸ್ವಾಗತಾರ್ಹ. ಅಂತೆಯೇ, ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ನಿರ್ವಹಿಸಬೇಕಿದೆ ಎಂದರು.

ರಾಜ್ಯ ಗುಪ್ತಚರ ಇಲಾಖೆಯ ಪೊಲೀಸ್ ಅಧೀಕ್ಷಕ ಸುರೇಶ್, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಸಿದ್ಧಗಂಗಾ ಮಠದ ಪ್ರತಿನಿಧಿ ಮಲ್ಲಿಕಾರ್ಜುನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಸಭೆಯ ನಂತರ ತುಮಕೂರು ವಿಶ್ವವಿದ್ಯಾನಿಲಯದ ಹೆಲಿಪ್ಯಾಡ್ ಹಾಗೂ ಸಿದ್ದಗಂಗಾ ಮಠದ ಕಾರ್ಯಕ್ರಮ ನಡೆಯುವ ವೇದಿಕೆ ಇತ್ಯಾದಿ ಪ್ರದೇಶಗಳಿಗೆ ನಿಯೋಗ

# 'ನ್ಯಾಯಾಂಗದ ಒತ್ತಡ ತಗ್ಗಿಸಲು 'ಮಧ್ಯಸ್ಥಿಕೆ' ಅತ್ಯುತ್ತಮ ಮಾರ್ಗ'

ಬಳ್ಳಾರಿ

ನ್ಯಾಯಾಲಯಗಳಲ್ಲಿ ದಿನೇ ದಿನೇ ಹೆಚ್ಚುತ್ತಿರುವ ಪ್ರಕರಣಗಳ ಹೊರೆ ತಗ್ಗಿಸಲು ಮತ್ತು ಸಾರ್ವಜನಿಕರಿಗೆ ತ್ವರಿತ ನ್ಯಾಯ ಒದಗಿಸಲು ಮಧ್ಯಸ್ಥಿಕೆ' ಪ್ರಕ್ರಿಯೆಯು ಅತ್ಯಂತ ಪರಿಣಾಮಕಾರಿ ಮಾರ್ಗವಾಗಿದೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಜಿ. ಶಾಂತಿ ಹೇಳಿದರು.

ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳ ಮಧ್ಯಸ್ಥಿಕೆದಾರರಿಗೆ ಮಾ.25 ರಿಂದ 29 ರ ವರೆಗೆ ನಗರದ ತಾಳೂರು ರಸ್ತೆಯ ಹೊಸ ನ್ಯಾಯಾಲಯ ಸಭಾಂಗಣದಲ್ಲಿ ಏರ್ಪಡಿಸಿದ್ದ 40 ಗಂಟೆಗಳ ಮಧ್ಯಸ್ಥಿಕೆ ತರಬೇತಿ ಶಿಬಿರಕ್ಕೆ ಬುಧವಾರ ಚಾಲನೆ ನೀಡಿ ಅವರು ಮಾತನಾಡಿ, ಸಾಂಪ್ರದಾಯಿಕ ನ್ಯಾಯಾಲಯದ ಪ್ರಕ್ರಿಯೆಗಿಂತ ಮಧ್ಯಸ್ಥಿಕೆಯು ಭಿನ್ನವಾಗಿದೆ. ಇಲ್ಲಿ ಮಧ್ಯಸ್ಥಿಕೆದಾರರು ಕೇವಲ ಸಮಸ್ಯೆಯನ್ನು ಆಲಿಸದೆ, ಉಭಯ ಪಕ್ಷಗಳ ನಡುವೆ ಸೌಹಾರ್ದಯುತ ವಾತಾವರಣ ನಿರ್ಮಿಸಿ ಸಮಸ್ಯೆ ಇತ್ಯರ್ಥಕ್ಕೆ ಅನುವು ಮಾಡಿಕೊಡುತ್ತಾರೆ. ಈ 5 ದಿನಗಳ ತರಬೇತಿಯು ಕೇವಲ ಕಾನೂನು ತಿಳುವಳಿಕೆಯನ್ನಷ್ಟೇ ನೀಡದೆ, ಮಧ್ಯಸ್ಥಿಕೆದಾರರ ಶಾಂತಿಯುತ ಚಿಂತನೆಯನ್ನು ವೃದ್ಧಿಸಿ ಅವರ ವ್ಯಕ್ತಿತ್ವ ವಿಕಸನಕ್ಕೂ ಸಹಕಾರಿಯಾಗಲಿದೆ ಎಂದರು. ಮಧ್ಯಸ್ಥಿಕೆಯಿಂದ ಪ್ರಕರಣಗಳು ಶಾಶ್ವತವಾಗಿ ಇತ್ಯರ್ಥಗೊಳ್ಳುತ್ತವೆ ಮತ್ತು ಮೇಲ್ಮನವಿ ಸಲ್ಲಿಸುವ ಅಗತ್ಯವಿರುವುದಿಲ್ಲ. 'ನಾನು' ಎಂಬ ಅಹಂಕಾರದಿಂದಲೇ ಸಮಾಜದಲ್ಲಿ ಹೆಚ್ಚಿನ ವಿವಾದಗಳು ಹುಟ್ಟಿಕೊಳ್ಳುತ್ತವೆ. ಈ ಅಹಂಕಾರವನ್ನು ಬಿಟ್ಟು 'ನಾವು' ಎಂಬ ಭಾವನೆಯೊಂದಿಗೆ ಕೆಲಸ ಮಾಡಿದರೆ ನ್ಯಾಯಾಂಗ ವ್ಯವಸ್ಥೆಯ ಮೇಲಿನ ಒತ್ತಡ ಕಡಿಮೆಯಾಗಿ ಸಮಾಜದಲ್ಲಿ ನೆಮ್ಮದಿ ನೆಲೆಸಲು ಸಾಧ್ಯ ಎಂದು ನ್ಯಾಯಾಧೀಶರು ಕಿವಿಮಾತು ಹೇಳಿದರು.

ಹಿರಿಯ ತರಬೇತುದಾರರಾದ ಬೃಂದಾ ನಂದಕುಮಾರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಾಮ್ ಬ್ರಹ್ಮಂ ಮಾತನಾಡಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾ. ರಾಜೇಶ್ ಎನ್. ಹೊಸಮನೆ ಸೇರಿದಂತೆ ಬಳ್ಳಾರಿ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ನೂತನವಾಗಿ ಆಯ್ಕೆಯಾದ ಮಧ್ಯಸ್ಥಿಕೆದಾರರು, ವಕೀಲರು, ನ್ಯಾಯಾಂಗ ಅಧಿಕಾರಿಗಳು ಉಪಸ್ಥಿತರಿದ್ದರು. ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ತ್ರಿವೇಣಿ ಪತ್ತಾರ್ ನಿರೂಪಿಸಿ, ವಂದಿಸಿದರು.




# ಶ್ರೀರಾಮನವಮಿ ಸಡಗರ: ಗ್ರಾಮಸ್ಥರಿಂದ ಅನ್ನದಾನ ಸೇವೆ



ಬೇತಮಂಗಲ

ಶ್ರೀರಾಮನವಮಿ ಹಬ್ಬದ ಸಡಗರ ಮನೆಮಾಡಿದ್ದು, ಬೇತಮಂಗಲ–ಕ್ಯಾಸಂಬಳ್ಳಿ ಮುಖ್ಯ ರಸ್ತೆಯ ಹನುಮಂತನಗರ ಹಾಗೂ ಬ್ಯಾಟರಾಯನಹಳ್ಳಿ ಗ್ರಾಮಸ್ಥರು ಅತ್ಯಂತ ಶ್ರದ್ಧಾಭಕ್ತಿ ಹಾಗೂ ಅರ್ಥಪೂರ್ಣವಾಗಿ ಹಬ್ಬವನ್ನು ಆಚರಿಸಿದರು.ಹನುಮಂತನಗರದಲ್ಲಿ ಪ್ರತಿಷ್ಠಾಪಿಸಲಾಗಿರುವ ಶ್ರೀ ಆಂಜನೇಯ ಸ್ವಾಮಿ ದೇಗುಲದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು.

ಹಬ್ಬದ ಪ್ರಯುಕ್ತ ಗ್ರಾಮದ ಯುವಕರು ಮುಂಜಾನೆಯಿಂದಲೇ ದೇಗುಲದ ಆವರಣ ಹಾಗೂ ಮುಖ್ಯ ರಸ್ತೆಯುದ್ದಕ್ಕೂ ತಳಿರು–ತೋರಣಗಳಿಂದ ಅಲಂಕರಿಸಿದ್ದರು. ರಸ್ತೆಯ ಇಕ್ಕೆಲಗಳಲ್ಲಿ ಹಾರಾಡುತ್ತಿದ್ದ ಕೇಸರಿಮಯ ಬಾವುಟಗಳು ಭಕ್ತರಲ್ಲಿ ಧಾರ್ಮಿಕ ಚೈತನ್ಯ ಮೂಡಿಸಿದ್ದವು. ಹೂವು ಹಾಗೂ ದೀಪಾಲಂಕಾರದಿಂದ ಕಂಗೊಳಿಸುತ್ತಿದ್ದ ಆಂಜನೇಯ ಸ್ವಾಮಿಗೆ ಅಭಿಷೇಕ, ಅರ್ಚನೆ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು.

ಬಿಸಿಲಿನ ಧಗೆಯ ನಡುವೆಯೂ ಭಕ್ತಾದಿಗಳ ಅನುಕೂಲಕ್ಕಾಗಿ ಬೃಹತ್ ಪೆಂಡಲ್ ನಿರ್ಮಿಸಿ, ನಿರಂತರವಾಗಿ ತಂಪು ಪಾನೀಯಗಳ ವ್ಯವಸ್ಥೆ ಮಾಡಲಾಗಿತ್ತು. ಸಾವಿರಾರು ಭಕ್ತರಿಗೆ ಹಾಗೂ ರಸ್ತೆಯಲ್ಲಿ ಸಂಚರಿಸುತ್ತಿದ್ದ ಪ್ರಯಾಣಿಕರಿಗೆ ಹೆಸರುಬೇಳೆ ಪಾನಕ, ಮಜ್ಜಿಗೆ ಹಾಗೂ ಸಿಹಿ ತಿಂಡಿಗಳನ್ನು ವಿತರಿಸಲಾಯಿತು.

ಮಧ್ಯಾಹ್ನ ಭಕ್ತಾದಿಗಳಿಗೆ ಅನ್ನದಾನದ ವ್ಯವಸ್ಥೆ ಮಾಡಲಾಗಿದ್ದು, ನೂರಾರು ಜನರು ಸಾಲಾಗಿ ನಿಂತು ಪ್ರಸಾದ ಸ್ವೀಕರಿಸಿದರು. ತಾಲೂಕಿನಾದ್ಯಂತ ಮಳೆ–ಬೆಳೆ ಉತ್ತಮವಾಗಿ ಆಗಲಿ ಹಾಗೂ ಲೋಕಕಲ್ಯಾಣವಾಗಲಿ ಎಂದು ಸ್ವಾಮಿಯಲ್ಲಿ ಪ್ರಾರ್ಥಿಸಿದ್ದೇವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹನುಮಂತನಗರ ಹಾಗೂ ಬ್ಯಾಟರಾಯನಹಳ್ಳಿಯ ಯುವಕರಾದ ಕಾರ್ತಿಕ್, ಅಪ್ಪು, ಮಂಜುನಾಥ್, ಅಯ್ಯಪ್ಪ, ಚೆನ್ನಕೇಶವ, ರಾಜೇಶ್, ದಿನೇಶ್, ಮುರುಗೇಶ್, ಚೆಲುವರಾಜು, ಕುಪೇಂದ್ರ, ಬಾಲು, ರಾಮು, ಸುಬ್ರಮಣಿ, ಕೃಷ್ಣ, ಸ್ವಾಮಿನಾಥನ್, ವಾಟರ್ ಮ್ಯಾನ್ ಮುನಿರಾಜು, ಅಶೋಕ್ ಸೇರಿದಂತೆ ಮಹಿಳೆಯರು, ಹಿರಿಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



ದಾವಣಗೆರೆ ಉಪ ಚುನಾವಣೆಗೆ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿರುವ ಸಾದಿಕ್ ಪೈಲ್ವಾನ್ ಅವರು ಇಂದು ತಮ್ಮ ಬೆಂಬಲಿಗರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

# ಮಣ್ಣಿನ ಪರೀಕ್ಷೆಗೆ ಒತ್ತು ನೀಡಿ: ಡಾ. ಶಂಕರಪ್ಪ



ವಿಜಯಪುರ

ತಾಲ್ಲೂಕಿನ ವಿಜಯಪುರ ಹೋಬಳಿಯ ಬಿಜ್ಜವಾರ ಗ್ರಾಮದ ಮರವೆಯಲ್ಲಿ ಬೆಂಗಳೂರು ತೋಟಗಾರಿಕಾ ಮಹಾವಿದ್ಯಾಲಯದ ವಿದ್ಯಾರ್ಥಿಗಳು 'ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಶಿಬಿರ'ದ ಅಂಗವಾಗಿ ಇತ್ತೀಚೆಗೆ ಕ್ಷೇತ್ರ ಭೇಟಿ ನೀಡಿ ರೈತರೊಂದಿಗೆ ಸಂವಾದ ನಡೆಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಸಸ್ಯರೋಗ ಶಾಸ್ತ್ರ ವಿಭಾಗದ ತಜ್ಞ ಡಾ. ಶಂಕರಪ್ಪ ಅವರು, ಕೃಷಿಯಲ್ಲಿ ಮಣ್ಣಿನ ಪರೀಕ್ಷೆಯ ಮಹತ್ವ, ರಾಸಾಯನಿಕ ಔಷಧಿಗಳ ವೈಜ್ಞಾನಿಕ ಸಿಂಪಡಣೆ ಹಾಗೂ ರಸಗೊಬ್ಬರಗಳ ಮಿತಬಳಕೆಯ ಕುರಿತು ರೈತರಿಗೆ ಸವಿಸ್ತಾರವಾಗಿ ವಿವರಿಸಿದರು.

"ರೈತರು ಕಾಲಕಾಲಕ್ಕೆ ಮಣ್ಣಿನ ಪರೀಕ್ಷೆ ಮಾಡಿಸುವುದರಿಂದ ಭೂಮಿಯ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದು. ಸಾಧ್ಯವಾದಷ್ಟು ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಭೂಮಿಯ ಆರೋಗ್ಯದ ಜೊತೆಗೆ ವಿಷಮುಕ್ತ ಬೆಳೆಗಳನ್ನು ಬೆಳೆಯಲು ಸಾಧ್ಯವಾಗುತ್ತದೆ. ಕಡಿಮೆ ನೀರಿನಲ್ಲಿ ಅಧಿಕ ಇಳುವರಿ ನೀಡುವ ತಳಿಗಳನ್ನು ಆಯ್ಕೆ ಮಾಡಿಕೊಳ್ಳುವ ಮೂಲಕ ಕಡಿಮೆ ಬಂಡವಾಳದಲ್ಲಿ ಹೆಚ್ಚು ಲಾಭ ಪಡೆಯಲು ಮುಂದಾಗಬೇಕು," ಎಂದು ಅವರು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ಸಮಾಲೋಚನಾ ಸಭೆಯಲ್ಲಿ ಸ್ಥಳೀಯ ರೈತರು ತೋಟಗಾರಿಕಾ ಮಹಾವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ತಮ್ಮ ಪ್ರಾಯೋಗಿಕ ಕೃಷಿ ಅನುಭವಗಳನ್ನು ಹಂಚಿಕೊಂಡರು. ಬೆಳೆಗಳಿಗೆ ಇರುವ ಮಾರುಕಟ್ಟೆ ಸೌಲಭ್ಯಗಳು ಹಾಗೂ ಆಧುನಿಕ ತಂತ್ರಜ್ಞಾನದ ಬಳಕೆಯ ಬಗ್ಗೆಯೂ ವಿದ್ಯಾರ್ಥಿಗಳು ಮಾಹಿತಿ ಪಡೆದರು.

ಕ್ಷೇತ್ರ ಭೇಟಿಯ ಈ ಸಂದರ್ಭದಲ್ಲಿ ಬೆಂಗಳೂರು ತೋಟಗಾರಿಕಾ ವಿಶ್ವವಿದ್ಯಾನಿಲಯದ ಹಲವಾರು ವಿದ್ಯಾರ್ಥಿಗಳು ಹಾಗೂ ಪ್ರಗತಿಪರ ರೈತರು ಉಪಸ್ಥಿತರಿದ್ದರು.

# ಸರ್ಕಾರ ನಮ್ಮ ತಾಳ್ಮೆ ಪರೀಕ್ಷಿಸದಿರಲಿ; ಒಳ ಮೀಸಲಾತಿಗಾಗಿ ಪ್ರಾಣತ್ಯಾಗಕ್ಕೂ ಸಿದ್ಧ: ಪೂಜಪ್ಪ

ಬಾಗೇಪಲ್ಲಿ

ರಾಜ್ಯ ಸರ್ಕಾರವು ಇದೇ 27ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಒಳ ಮೀಸಲಾತಿಯನ್ನು ಜಾರಿಗೊಳಿಸದಿದ್ದರೆ ಮುಂಬರುವ ದಿನಗಳಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಮಾದಾರ ಮಹಾಸಭಾದ ಹಿರಿಯ ಮುಖಂಡ ಹಾಗೂ ಜಿ.ಪಂ. ಮಾಜಿ ಅಧ್ಯಕ್ಷ ಎ.ವಿ. ಪೂಜಪ್ಪ ಎಚ್ಚರಿಕೆ ನೀಡಿದ್ದಾರೆ.



ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಕಾಂಗ್ರೆಸ್ ಸರ್ಕಾರವು ಮಾದಿಗ ಸಮುದಾಯಕ್ಕೆ ನಿರಂತರವಾಗಿ ಅನ್ಯಾಯ ಮಾಡುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಇಟ್ಟಿದ್ದ ನಂಬಿಕೆಯನ್ನು ಸಮುದಾಯ ಕಳೆದುಕೊಂಡಿದೆ. ಸರ್ಕಾರವು ಒಬ್ಬ ಸಚಿವರ ಕೈಗೊಂಬೆಯಾಗಿ ಕೆಲಸ ಮಾಡುತ್ತಿದೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.

35 ವರ್ಷಗಳ ಹೋರಾಟಕ್ಕೆ ನ್ಯಾಯ ಸಿಗಲಿ: ದಸಂಸ ಸಂಘಟನಾ ಸಂಚಾಲಕ ಬಿ.ವಿ. ವೆಂಕಟರವಣ ಮಾತನಾಡಿ, "ಸುಪ್ರೀಂ ಕೋರ್ಟ್‌ನ ಏಳು ನ್ಯಾಯಾಧೀಶರ ಪೀಠದ ತೀರ್ಪಿನಂತೆ ಹಾಗೂ ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿಯ ವರದಿ ಆಧಾರಿಸಿ ಒಳ ಮೀಸಲಾತಿ ಘೋಷಿಸುವುದು ಸರ್ಕಾರದ ಜವಾಬ್ದಾರಿ. ನಾವು ಯಾರ ಪಾಲನ್ನೂ ಕಸಿದುಕೊಳ್ಳುತ್ತಿಲ್ಲ, ನಮ್ಮ ಪಾಲಿನ ಹಕ್ಕನ್ನು ಮಾತ್ರ ಕೇಳುತ್ತಿದ್ದೇವೆ. ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಜಾತಿಗಳಿಗೂ ಅನ್ಯಾಯವಾಗದಂತೆ ಸಾಮಾಜಿಕ ನ್ಯಾಯ ಕಲ್ಪಿಸಬೇಕು," ಎಂದು ಒತ್ತಾಯಿಸಿದರು.

56 ಸಾವಿರ ಹುದ್ದೆಗಳ ಭರ್ತಿಗೆ ಆಗ್ರಹ: ಪುರಸಭೆ ಸದಸ್ಯ ಅ.ನಾ. ಮೂರ್ತಿ ಮಾತನಾಡಿ, "ಒಳ ಮೀಸಲಾತಿ ಅನ್ವಯ ಬಾಕಿ ಇರುವ ಸುಮಾರು 56,432 ಹುದ್ದೆಗಳನ್ನು ತಕ್ಷಣವೇ ಭರ್ತಿ ಮಾಡಬೇಕು ಹಾಗೂ ಬಡ್ತಿ ಮೀಸಲಾತಿಯನ್ನು ನೀಡಬೇಕು. ಶೈಕ್ಷಣಿಕ ಮತ್ತು ಆರ್ಥಿಕವಾಗಿ ಹಿಂದುಳಿದಿರುವ ಈ ಸಮುದಾಯದ ಬದುಕು ಇಂದು ದಿವಾಳಿಯಾಗಿದೆ. ಸರ್ಕಾರ ಕಣ್ಣು ಮುಚ್ಚಿ ಕುಳಿತುಕೊಳ್ಳಬಾರದು. ಒಂದು ವೇಳೆ ಮಾ. 27ರ ಕ್ಯಾಬಿನೆಟ್‌ನಲ್ಲಿ ನಿರ್ಧಾರ ಹೊರಬೀಳದಿದ್ದರೆ ಸಮುದಾಯದ ಹಿತಕ್ಕಾಗಿ ಪ್ರಾಣತ್ಯಾಗಕ್ಕೂ ಸಿದ್ಧ," ಎಂದು ಗಂಭೀರ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಜಿ.ಎನ್. ಆಂಜಪ್ಪ, ಎಂ.ಜಿ. ಕಿರಣ್ ಕುಮಾರ್, ವಿ. ನರಸಿಂಹಪ್ಪ, ನಾಗಪ್ಪ, ಜೀವಿಕಾ ನಾರಾಯಣಸ್ವಾಮಿ, ಬಿ.ಎನ್. ಬಾನುಪ್ರಕಾಶ್, ಎಚ್.ಸಿ. ಚೌಡಯ್ಯ, ಚಿನ್ನಪೂಜಪ್ಪ ಉಪಸ್ಥಿತರಿದ್ದರು.

# 'ವಾರದ ಸಂತೆ ಹರಾಜು ಯಶಸ್ವಿ'



ಮಾಲೂರು

ತಾಲ್ಲೂಕಿನ ಐತಿಹಾಸಿಕ ಹಾಗೂ ಧಾರ್ಮಿಕ ಕೇಂದ್ರವಾದ ಚಿಕ್ಕತಿರುಪತಿಯ ವಾರದ ಸಂತೆಯ 2026– 27ನೇ ಸಾಲಿನ ಹರಾಜು ಪ್ರಕ್ರಿಯೆಯು ಸೋಮವಾರ ಯಶಸ್ವಿಯಾಗಿ ಜರುಗಿತು. ಒಟ್ಟು 26.60 ಲಕ್ಷ ರೂಪಾಯಿಗಳಿಗೆ ಚಿಕ್ಕತಿರುಪತಿ ಗ್ರಾಮದ ಆರ್. ಮಂಜುನಾಥ್ ಅವರು ಸಂತೆಯ ಹಕ್ಕನ್ನು ಪಡೆದುಕೊಂಡರು.

ಗ್ರಾಮ ಪಂಚಾಯಿತಿ ಆವರಣದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹರೀಂದ್ರ ಗೋಪಾಲ್ ಅವರ ನೇತೃತ್ವದಲ್ಲಿ ಹರಾಜು ಪ್ರಕ್ರಿಯೆ ನಡೆಯಿತು. ಸುಮಾರು 10ಕ್ಕೂ ಹೆಚ್ಚು ಆಸಕ್ತರು ನಿಗದಿಪಡಿಸಿದ ಠೇವಣಿ ಹಣವನ್ನು ಪಾವತಿಸಿ ಹರಾಜಿನಲ್ಲಿ ಉತ್ಸಾಹದಿಂದ ಭಾಗವಹಿಸಿದ್ದರು.

ಕುರಿ ಸಂತೆಗೆ ವಿಶೇಷ ಮಾನ್ಯತೆ: ಪ್ರತಿ ಶನಿವಾರ ನಡೆಯುವ ಚಿಕ್ಕತಿರುಪತಿ ವಾರದ ಸಂತೆಯು ಈ ಭಾಗದಲ್ಲಿ ಅತ್ಯಂತ ಪ್ರಸಿದ್ಧವಾಗಿದೆ. ಇಲ್ಲಿನ ಕುರಿ ಸಂತೆ ವಿಶೇಷ ಹೆಸರುವಾಸಿಯಾಗಿದ್ದು, ಬೆಂಗಳೂರು, ಹೊಸಕೋಟೆ, ದೇವನಹಳ್ಳಿ, ಆನೇಕಲ್, ಮಾಲೂರು ಹಾಗೂ ನೆರೆಯ ತಮಿಳುನಾಡಿನ ಹೊಸೂರು ಸೇರಿದಂತೆ ವಿವಿಧ ಭಾಗಗಳಿಂದ ಸುಮಾರು 250ಕ್ಕೂ ಹೆಚ್ಚು ವ್ಯಾಪಾರಸ್ಥರು ಆಗಮಿಸುತ್ತಾರೆ.

ಕಟ್ಟುನಿಟ್ಟಿನ ಸೂಚನೆ: ಹರಾಜು ಪಡೆದವರು ನಿಗದಿತ ಅವಧಿಯೊಳಗೆ ಪೂರ್ಣ ಹಣವನ್ನು ಪಾವತಿಸಬೇಕು. ಒಂದು ವೇಳೆ ಬಾಕಿ ಉಳಿಸಿಕೊಂಡಲ್ಲಿ ಠೇವಣಿ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳುವುದಲ್ಲದೆ, ಕಾನೂನುಬದ್ಧವಾಗಿ ಬಾಕಿ ವಸೂಲಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಪಿಡಿಒ ಹರೀಂದ್ರ ಗೋಪಾಲ್ ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಚಿಕ್ಕತಿರುಪತಿ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಗೋವಿಂದೇಗೌಡ, ಲೆಕ್ಕ ಸಹಾಯಕ ನಾಗರಾಜಪ್ಪ, ನಿಕಟಪೂರ್ವ ಸದಸ್ಯರಾದ ಜಿ.ವಿ. ಮಂಜುನಾಥ್, ರಾಜಶೇಖರ್, ವೆಂಕಟಪ್ಪ, ಬಾಬು, ಮುನಿರಾಜು (ಪ್ರೆಸ್), ಹರೀಶ್ (ಶೋಭಿ), ಸಂದೀಪ್, ಉಪೇಂದ್ರ ಹಾಗೂ ಪಂಚಾಯಿತಿ ಸಿಬ್ಬಂದಿಗಳಾದ ವೆಂಕಟೇಶ್, ಮಾದೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಶುಚಿತ್ವದಿಂದ ಪುಟಾಣಿಗಳ ಜೀವಕ್ಕೆ ಸಂಚಕಾರ!

ಬಂಗಾರಪೇಟೆ

ತಾಲ್ಲೂಕಿನ ಭೀಮಗಾನಹಳ್ಳಿ ಗ್ರಾಮದ ಸರ್ಕಾರಿ ಶಾಲೆಯು ಹಲವು ವರ್ಷಗಳಿಂದ ಅಸ್ವಚ್ಛತೆಯ ಕೂಪವಾಗಿ ಮಾರ್ಪಟ್ಟಿದ್ದು, ಶಾಲಾ ಆವರಣ ಹಾಗೂ ತರಗತಿ ಕೊಠಡಿಗಳೊಳಗೆ ಹಾವುಗಳು ನುಗ್ಗುತ್ತಿರುವುದು ಮಕ್ಕಳಲ್ಲಿ ತೀವ್ರ ಆತಂಕ ಮೂಡಿಸಿದೆ.

ಗ್ರಾಮಸ್ಥರು ತಮ್ಮ ಮನೆಗಳ ಕಸವನ್ನು ಶಾಲೆಯ ಸುತ್ತಮುತ್ತಲೇ ಸುರಿಯುತ್ತಿರುವುದರಿಂದ ಶಾಲಾ ಆವರಣದಾದ್ಯಂತ ದುರ್ವಾಸನೆ ಹರಡಿದೆ. ಕಸದ ರಾಶಿಯಲ್ಲಿ ವಿಷಜಂತುಗಳು ಆಶ್ರಯ ಪಡೆಯುತ್ತಿದ್ದು, ಇವು ನೇರವಾಗಿ ಶಾಲಾ ಕೊಠಡಿಗಳಿಗೆ ಪ್ರವೇಶಿಸುತ್ತಿವೆ. ಗುರುವಾರ ಅಂಗನವಾಡಿ ಕೇಂದ್ರದಲ್ಲಿ ಪುಟಾಣಿ ಮಕ್ಕಳು ಆಟವಾಡುತ್ತಿದ್ದ ವೇಳೆ ಹಾವೊಂದು ಒಳನುಗ್ಗಿದ್ದು, ಮಕ್ಕಳ ಚೀರಾಟ ಕೇಳಿ ಧಾವಿಸಿದ ಸ್ಥಳೀಯರು ಹಾವನ್ನು ಹಿಡಿದು ಕಾಡಿಗೆ ಬಿಡುವ ಮೂಲಕ ಸಂಭಾವ್ಯ ಅನಾಹುತವನ್ನು ತಪ್ಪಿಸಿದ್ದಾರೆ.





ಅಧಿಕಾರಿಗಳ ನಿರ್ಲಕ್ಷ್ಯ: ಶಾಲೆಯ ಈ ದುಸ್ಥಿತಿಯ ಕುರಿತು ಹಲವು ಬಾರಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಸಿಡಿಪಿಒ ಅವರ ಗಮನಕ್ಕೆ ತರಲಾಗಿದ್ದರೂ, ಇದುವರೆಗೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ. ಶಾಲಾ ಮುಖ್ಯದ್ವಾರದ ಬಳಿಯೇ ಕಸದ ರಾಶಿ ಬಿದ್ದಿದ್ದರೂ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದಾಖಲಾತಿ ಕುಸಿತದ ಭೀತಿ: ಸರ್ಕಾರಿ ಶಾಲೆಗಳಲ್ಲಿ ಈಗಾಗಲೇ ಮಕ್ಕಳ ದಾಖಲಾತಿ ಕುಸಿಯುತ್ತಿರುವ ಬೆನ್ನಲ್ಲೇ, ಇಂತಹ ಘಟನೆಗಳು ಪೋಷಕರಲ್ಲಿ ಭಯ ಹುಟ್ಟಿಸಿವೆ. ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡದಿದ್ದರೆ ಮುಂದಿನ ದಿನಗಳಲ್ಲಿ ಶಾಲೆಯನ್ನು ಮುಚ್ಚುವ ಪರಿಸ್ಥಿತಿ ಬರಬಹುದು ಎಂದು ಗ್ರಾಮಸ್ಥರು ಎಚ್ಚರಿಸಿದ್ದಾರೆ. ಕೂಡಲೇ ಮೇಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಶಾಲಾ ಆವರಣವನ್ನು ಸ್ವಚ್ಛಗೊಳಿಸಿ, ಮಕ್ಕಳಿಗೆ ಭಯಮುಕ್ತ ವಾತಾವರಣ ಕಲ್ಪಿಸಿಕೊಡಬೇಕೆಂದು ಗ್ರಾಮದ ಮುಖಂಡರು ಒತ್ತಾಯಿಸಿದ್ದಾರೆ.

# 28ಕ್ಕೆ 'ಶ್ರೀ ಅಗ್ನಿ ಬನ್ನಿರಾಯ ಸ್ವಾಮಿ ಜಯಂತಿ'

ಕೊರಟಗೆರೆ

ತಾಲ್ಲೂಕು ಆಡಳಿತದ ವತಿಯಿಂದ ಇದೇ 28ರ ಭಾನುವಾರ ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ 'ಶ್ರೀ ಅಗ್ನಿ ಬನ್ನಿರಾಯ ಸ್ವಾಮಿ ಜಯಂತಿ' ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ ಎಂದು ಪ್ರಭಾರಿ ತಹಶೀಲ್ದಾರ್ ಎ.ಜೆ. ರಾಜು ತಿಳಿಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಜಯಂತಿಯ ಅಂಗವಾಗಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ತಾಲ್ಲೂಕು ತಿಗಳರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಪಾಲ್ಗೊಂಡು ಜಯಂತಿಯ ಯಶಸ್ಸಿಗೆ ಸಲಹೆಗಳನ್ನು ನೀಡಿದರು.

ನಿವೇಶನಕ್ಕಾಗಿ ಮನವಿ: ಸಭೆಯ ನಂತರ ತಾಲ್ಲೂಕು ತಿಗಳರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಟಿ. ಮಂಜುನಾಥ್ ಅವರು ಪ್ರಭಾರಿ ತಹಶೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿದರು. "ತಾಲ್ಲೂಕಿನಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ತಿಗಳರ ಸಮುದಾಯದ ಸಂಘಟನೆಗೆ ಸಮುದಾಯ ಭವನ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಿದ್ಯಾರ್ಥಿನಿಲಯ ನಿರ್ಮಾಣದ ಅಗತ್ಯವಿದೆ. ಇದಕ್ಕಾಗಿ ಜಂಪೇನಹಳ್ಳಿ ಸರ್ವೇ ನಂ. 17ರಲ್ಲಿರುವ 20 ಗುಂಟೆ ಜಮೀನನ್ನು ಸರ್ಕಾರದಿಂದ ಮಂಜೂರು ಮಾಡಿಸಿಕೊಡಬೇಕು," ಎಂದು ಅವರು ಒತ್ತಾಯಿಸಿದರು.

ಸಮುದಾಯದ ಏಳಿಗೆಗಾಗಿ ವಿದ್ಯಾರ್ಥಿನಿಲಯದ ನಿರ್ಮಾಣವು ಅತ್ಯಂತ ಅಗತ್ಯವಾಗಿದ್ದು, ಶೈಕ್ಷಣಿಕವಾಗಿ ಹಿಂದುಳಿದಿರುವ ಮಕ್ಕಳಿಗೆ ಇದು ಆಸರೆಯಾಗಲಿದೆ ಎಂದು ಮಂಜುನಾಥ್ ಈ ಸಂದರ್ಭದಲ್ಲಿ ತಿಳಿಸಿದರು.

ಸಭೆಯಲ್ಲಿ ಚುನಾವಣಾ ಶಿರಸ್ತೇದಾರ್ ಮಂಜುನಾಥ್, ನಕುಲ್, ಸಮಾಜ ಕಲ್ಯಾಣಾಧಿಕಾರಿ ಯಮುನಾ, ತಿಗಳರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯದರ್ಶಿ ಜಿ.ಟಿ. ರಂಗಣ್ಣ, ನಿರ್ದೇಶಕರುಗಳಾದ ಶ್ರೀರಂಗಯ್ಯ, ಬಾಲರಾಜು, ಚಿಕ್ಕತಿಮ್ಮಯ್ಯ, ಎಸ್.ಡಿ. ವೆಂಕಟೇಶ್, ಜಿ. ರಾಮಯ್ಯ, ರಾಮಣ್ಣ, ಪ್ರಕಾಶ್ ಹಾಗೂ ಎಸ್.ಬಿ. ಲಿಂಗಪ್ಪ ಸೇರಿದಂತೆ ಸಮುದಾಯದ ಪ್ರಮುಖರು ಉಪಸ್ಥಿತರಿದ್ದರು.

# ಏಪ್ರಿಲ್ 1ರಿಂದ ಆನ್‌ಲೈನ್‌ನಲ್ಲಿ 'ಸ್ವಯಂ ಗಣತಿ'ಗೆ ಅವಕಾಶ

ದೊಡ್ಡಬಳ್ಳಾಪುರ

ಮುಂಬರುವ 'ಜನಗಣತಿ–2027'ರ ಅಂಗವಾಗಿ ಸಾರ್ವಜನಿಕರು ಸುರಕ್ಷಿತ ವೆಬ್ ಪೋರ್ಟಲ್ ಮೂಲಕ ತಮ್ಮ ಕುಟುಂಬದ ಮಾಹಿತಿಯನ್ನು ತಾವೇ ನಮೂದಿಸಲು (ಸ್ವಯಂ ಗಣತಿ) ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯ ಸಾರ್ವಜನಿಕರು ಈ ಡಿಜಿಟಲ್ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮನೆ ಪಟ್ಟಿ ಮತ್ತು ಮನೆಗಣತಿ ಕಾರ್ಯವು ಏ. 16 ರಿಂದ ಅಧಿಕೃತವಾಗಿ ಆರಂಭವಾಗಲಿದೆ. ಇದಕ್ಕೂ ಮುನ್ನ 15 ದಿನಗಳ ಕಾಲ, ಅಂದರೆ ಏ. 1 ರಿಂದ 15ರ ವರೆಗೆ ಸಾರ್ವಜನಿಕರು ಆನ್‌ಲೈನ್ ಮೂಲಕ ಸ್ವಯಂ ಗಣತಿ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬಹುದಾಗಿದೆ.



ಸ್ವಯಂ ಗಣತಿ ಮಾಡುವುದು ಹೇಗೆ?

ಸಾರ್ವಜನಿಕರು ತಮ್ಮ ಮೊಬೈಲ್, ಡೆಸ್ಕ್‌ಟಾಪ್ ಅಥವಾ ಲ್ಯಾಪ್‌ಟಾಪ್ ಬಳಸಿ, e.census.gov.in ವೆಬ್ ಪೋರ್ಟಲ್‌ಗೆ ಭೇಟಿ ನೀಡಿ ಕುಟುಂಬದ ಸಾಮಾನ್ಯ ಮಾಹಿತಿಯನ್ನು ಭರ್ತಿ ಮಾಡಬಹುದು. ಮಾಹಿತಿ ಭರ್ತಿ ಮಾಡುವಾಗ ರಾಜ್ಯ, ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಅಥವಾ ಪಟ್ಟಣದ ವಿವರಗಳನ್ನು ನಿಖರವಾಗಿ ನಮೂದಿಸಬೇಕು. ಸ್ಥಳವನ್ನು ಗುರುತಿಸಲು ಪಿನ್ ಕೋಡ್ ಮತ್ತು ಡಿಜಿಟಲ್ ಮ್ಯಾಪ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ವಿಶಿಷ್ಟ ಐಡಿ (ID) ಲಭ್ಯ: ಮಾಹಿತಿಯನ್ನು ಯಶಸ್ವಿಯಾಗಿ ಸಲ್ಲಿಸಿದ ನಂತರ, ಕುಟುಂಬಕ್ಕೆ ಒಂದು ವಿಶಿಷ್ಟ 'ಸ್ವಯಂ ಗಣತಿ ಐಡಿ' (Self-Enumeration ID) ದೊರೆಯಲಿದ್ದು, ಇದನ್ನು ಎಸ್‌ಎಂಎಸ್ ಅಥವಾ ಇಮೇಲ್ ಮೂಲಕ ಕಳುಹಿಸಲಾಗುತ್ತದೆ. ಏಪ್ರಿಲ್ 16ರ ನಂತರ ನಿಮ್ಮ ಮನೆಗೆ ಭೇಟಿ ನೀಡುವ ಗಣತಿದಾರರಿಗೆ ಈ ಐಡಿಯನ್ನು ತೋರಿಸಿದರೆ ಸಾಕು, ಇದರಿಂದ ಸಮಯ ಉಳಿತಾಯವಾಗುವುದಲ್ಲದೆ ನಿಖರ ಮಾಹಿತಿ ಸಂಗ್ರಹಿಸಲು ಸಹಕಾರಿಯಾಗಲಿದೆ.

ಜನಗಣತಿಯ ಸಂದರ್ಭದಲ್ಲಿ ಸಾರ್ವಜನಿಕರು ನೀಡುವ ವೈಯಕ್ತಿಕ ಮಾಹಿತಿಯನ್ನು ಸಂಪೂರ್ಣ ಗೌಪ್ಯವಾಗಿ ಇಡಲಾಗುವುದು. ಯಾವುದೇ ಆತಂಕವಿಲ್ಲದೆ ಸಾರ್ವ ಜನಿಕರು ಈ ರಾಷ್ಟ್ರೀಯ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದ್ದಾರೆ.

# ಭದ್ರತೆ ಹೆಚ್ಚಿಸಲು ಆಗ್ರಹ

ಬಳ್ಳಾರಿ

ನಗರದಲ್ಲಿ ಹೆಚ್ಚುತ್ತಿರುವ ಕಳ್ಳತನ, ದರೋಡೆ ಹಾಗೂ ಅಪರಾಧ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಬಳ್ಳಾರಿ ನಗರ ಜನಜಾಗೃತಿ ಸಂಘದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಪತ್ರ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷ ಹುಂಡೇಕರ ರಾಜೇಶ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಇತ್ತೀಚಿನ ದಿನಗಳಲ್ಲಿ ಚೈನ್ ಸ್ನ್ಯಾಚಿಂಗ್, ದ್ವಿಚಕ್ರ ವಾಹನ ಕಳ್ಳತನ, ದರೋಡೆ ಪ್ರಕರಣಗಳು ಹೆಚ್ಚಾಗುತ್ತಿವೆ. ಇದರಿಂದ ನಾಗರಿಕರು ಭಯಭೀತರಾಗಿದ್ದಾರೆ. ಆತಂಕದ ವಾತಾವರಣದಲ್ಲಿ ಜೀವನ ನಡೆಸುವಂತಾಗಿದೆ ಎಂದು ಆರೋಪಿಸಿದರು.

ನಗರದ ಎಲ್ಲಾ ಪ್ರಮುಖ ಸರ್ಕಲ್‌ಗಳು, ಸ್ಲಂ ಪ್ರದೇಶಗಳು ಮತ್ತು ಪ್ರಮುಖ ರಸ್ತೆಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ರಾತ್ರಿ ಸಮಯದಲ್ಲಿ ಪೊಲೀಸ್ ಸಿಬ್ಬಂದಿಯಿಂದ ಕಡ್ಡಾಯ ನಗರ ರೌಂಡ್ಸ್ ನಡೆಸಿ, ರೈಲ್ವೇ ನಿಲ್ದಾಣ ಮತ್ತು ಬಸ್ ನಿಲ್ದಾಣಗಳಲ್ಲಿ ವಿಶೇಷ ಪೊಲೀಸ್ ಪೇದೆಗಳನ್ನು ನಿಯೋಜಿಸಿ ಸಾರ್ವಜನಿಕರ ಭದ್ರತೆ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು. ಇದೇ ವೇಳೆ ಹೊಸದಾಗಿ ನಿರ್ಮಾಣವಾಗುತ್ತಿರುವ ಲೇಔಟ್ ಪ್ರದೇಶಗಳಲ್ಲಿ ಯುವಕರು ಮದ್ಯಪಾನ ಸೇವನೆ, ದುಶ್ಚಟಗಳಿಗೆ ದಾಸರಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಸಂಘದ ಪದಾಧಿಕಾರಿಗಳು, ಡ್ರಗ್ಸ್ ಹಾಗೂ ಮದ್ಯಪಾನದಂತಹ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಬಳಿಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ ನಗರದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ತ್ವರಿತ ಕ್ರಮ ಕೈಗೊಳ್ಳುವಂತೆ ಕೋರಿದರು.

ಈ ಸಂದರ್ಭದಲ್ಲಿ ಸ್ವಾಮಿ ನಾಯ್ಕ್, ಭಾಷಾ, ಗಾದಿಲಿಂಗ, ನಾಗರಾಜ್, ಗಂಗಾಧರ,ವೀರೇಶ್, ಪವನ್, ರಾಮರೆಡ್ಡಿ, ಚಂದ್ರ, ಶಂಕರ್, ಮಾಸ್ತನ್, ಪ್ರವೀಣ್, ಶ್ರೀನಿವಾಸ್, ದೇವರಾಜ್, ಬಸವರಾಜ್, ರಾಮಲಿ ನಾಯ್ಕ್, ಯಲ್ಲಪ್ಪ, ಹುಸೇನ್, ಅನಿಲ್, ಅನ್ವರ್, ದುರುಗಪ್ಪ, ನಾಗೇಂದ್ರ, ದೇವೇಂದ್ರ, ಸೀನ, ಮಹೇಶ್ ಸೇರಿದಂತೆ ಜನಜಾಗೃತಿಯ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಕೊರಟಗೆರೆಯಲ್ಲಿ ನಿವೃತ್ತ ನೌಕರರ ಪ್ರತಿಭಟನೆ: ಕಪ್ಪು ಪಟ್ಟಿ ಧರಿಸಿ ಸರ್ಕಾರದ ವಿರುದ್ಧ ಆಕ್ರೋಶ

ಕೊರಟಗೆರೆ

ಕೇಂದ್ರ ಸರ್ಕಾರದ 2025ರ ಆರ್ಥಿಕ ಕಾಯ್ದೆಯನ್ನು ಹಿಂಪಡೆಯಬೇಕು ಹಾಗೂ ರಾಜ್ಯ ಸರ್ಕಾರದ 7ನೇ ವೇತನ ಆಯೋಗದ ಶಿಫಾರಸುಗಳನ್ನು ತಕ್ಷಣವೇ ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ತಾಲ್ಲೂಕು ಸರ್ಕಾರಿ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಗುರುವಾರ ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಮುಂದೆ ಸಾಂಕೇತಿಕವಾಗಿ ಪ್ರತಿಭಟನೆ ನಡೆಸಿದ ನಿವೃತ್ತ ನೌಕರರು, ನಂತರ ಪ್ರಭಾರಿ ತಹಶೀಲ್ದಾರ್ ಎ.ಜೆ. ರಾಜು ಅವರಿಗೆ ತಮ್ಮ ಬೇಡಿಕೆಗಳ ಮನವಿ ಪತ್ರವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಹನುಮಂತರಾಯಪ್ಪ, "ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಮುಂದಿನ ದಿನಗಳಲ್ಲಿ ನಿವೃತ್ತ ವೇತನ ಮತ್ತು ಕುಟುಂಬ ಪಿಂಚಣಿ ಪರಿಷ್ಕರಣೆ ಹಾಗೂ ವಾರ್ಷಿಕವಾಗಿ ನೀಡುತ್ತಿದ್ದ ಎರಡು ತುಟ್ಟಿಭತ್ಯೆಗಳನ್ನು (DA) ರದ್ದುಗೊಳಿಸುವ ಕುರಿತು ಚರ್ಚಿಸುತ್ತಿರುವುದು ಖಂಡನೀಯ. ಕೇಂದ್ರ ಸರ್ಕಾರವು 2025ರ ಆರ್ಥಿಕ ಕಾಯ್ದೆಯ ಹೆಸರಿನಲ್ಲಿ ನಿವೃತ್ತ ನೌಕರರ ಸವಲತ್ತುಗಳಿಗೆ ಕೈ ಹಾಕಬಾರದು," ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರವು 7ನೇ ವೇತನ ಆಯೋಗದ ಶಿಫಾರಸುಗಳನ್ನು ನಿವೃತ್ತ ನೌಕರರಿಗೂ ಅನ್ವಯವಾಗುವಂತೆ ಕೂಡಲೇ ಜಾರಿಗೊಳಿಸಬೇಕು.

ಸರ್ಕಾರವು ನಮ್ಮ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸಂಘದ ಉಪಾಧ್ಯಕ್ಷರಾದ ಪಿ.ವಿ. ರುದ್ರಯ್ಯ, ಪ್ರಧಾನ ಕಾರ್ಯದರ್ಶಿಗಳಾದ ವಿ. ಮಲ್ಲೇಶಯ್ಯ, ಖಜಾಂಚಿ ಎಂ.ಆರ್. ಬೊಮ್ಮಣ್ಣ, ಸದಸ್ಯರಾದ ನಾರಾಯಣಪ್ಪ, ಚನ್ನಬಸವರಾಧ್ಯ, ನಂದೀಶ್, ಕ್ಯಾತಯ್ಯ, ಪಿ.ಎಸ್. ಗಂಗಮ್ಮ, ಟಿ.ಕೆ. ರಂಗಮ್ಮ ಹಾಗೂ ವಿವಿಧ ಹೋಬಳಿ ಸಂಘಗಳ ಪದಾಧಿಕಾರಿಗಳು, ಸಿಬ್ಬಂದಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

28/03/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ತಂಬಾಕಿನ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಎಡಿಸಿ ಚಂದ್ರಯ್ಯ ಕಟ್ಟುನಿಟ್ಟಿನ ಸೂಚನೆ

ರಾಮನಗರ

ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಶಾಲಾ ಕಾಲೇಜುಗಳಲ್ಲಿ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸುವ ಮೂಲಕ ವಿದ್ಯಾರ್ಥಿಗಳು, ಯುವ ಜನರಲ್ಲಿ ವ್ಯಾಪಕವಾಗಿ ಜಾಗೃತಿ ಮೂಡಿಸುವಂತೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಆಯೋಜಿಸಲಾಗಿದ್ದ ತ್ರೈಮಾಸಿಕ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಕರಪತ್ರ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯರುಗಳು ಪ್ರತೀ ತಿಂಗಳಿಗೊಮ್ಮೆ ತಮ್ಮ ವ್ಯಾಪ್ತಿಯಲ್ಲಿರುವ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಬೇಕು ಹಾಗೂ ಗ್ರಾಮ ಪಂಚಾಯ್ತಿ ವ್ಯಾಪ್ತಿಗಳಲ್ಲಿ ಹೆಚ್ಚು ಐ.ಇ.ಸಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಈ ಮೂಲಕ ಜಿಲ್ಲೆಯನ್ನು ತಂಬಾಕು ಮುಕ್ತವನ್ನಾಗಿಸಲು ಸಂಬಂಧಿಸಿದ ಇಲಾಖೆಗಳು ಪರಸ್ಪರ ಸಮನ್ವಯತೆಯೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ 2025–26ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಇದೂವರೆಗೂ 54 ಕಾರ್ಯಾಚರಣೆಗಳನ್ನು ನಡೆಸಿ, 680 ಕೋಟ್ಪಾ ಕಾಯ್ದೆ ಉಲ್ಲಂಘನೆಯ ಪ್ರಕರಣಗಳನ್ನು ದಾಖಲು ಮಾಡಿ, ಒಟ್ಟು 76,150 ರೂ.ಗಳ ದಂಡ ವಿಧಿಸಲಾಗಿದೆ. ಆರಕ್ಷಕ ಇಲಾಖೆ ಪ್ರತ್ಯೇಕವಾಗಿ 24 ಕೋಟ್ಪಾ ಕಾರ್ಯಾಚರಣೆ ನಡೆಸಿ 17,300 ರೂ.ಗಳ ದಂಡ ವಿಧಿಸಿದೆ. ಅದೇ ರೀತಿಯಲ್ಲಿ ಪ್ರತೀ ತಾಲ್ಲೂಕುಗಳು, ನಗರ ಸ್ಥಳೀಯ ಸಂಸ್ಥೆಗಳು ಕಾರ್ಯಾಚರಣೆಗಳನ್ನು ನಡೆಸಿ, ಪ್ರಕರಣ ದಾಖಲು ಮಾಡಿ ದಂಡ ವಿಧಿಸುವಂತೆ ಅವರು ಸೂಚಿಸಿದರು. ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ತಂಬಾಕು ಉತ್ಪನ್ನಗಳನ್ನು ಅಧಿಕೃತವಾಗಿ ಮಾರಾಟ ಮಾಡಲು ಟೊಬ್ಯಾಕೊ ವೆಂಡರ್ ಲೈಸೆನ್ಸ್ ಪಡೆದುಕೊಳ್ಳುವುದು ಕಡ್ಡಾಯವಾಗಿದೆ. ಪರವಾನಗಿ ಇಲ್ಲದೇ ತಂಬಾಕು ಉತ್ಪನ್ನ ಮಾರಾಟ ಮಾಡಿದರೆ ದಂಡ ವಿಧಿಸಲಾಗುವುದು. ಕೋಟ್ಪಾ ಕಾರ್ಯಾಚರಣೆ ಕೈಗೊಂಡು ಟೊಬ್ಯಾಕೊ ವೆಂಡರ್ ಲೈಸೆನ್ಸ್ ಪಡೆಯದೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವ ಅಂಗಡಿ–ಮಳಿಗೆಗಳ ಮೇಲೆ ಕಾರ್ಯಾಚರಣೆ ನಡೆಸಿ ದಂಡ ವಿಧಿಸಿ ಸಂಬಂಧಿಸಿದ ಮಳಿಗೆಯ ವ್ಯಾಪಾರ ಪರವಾನಿಗೆ ರದ್ದು ಮಾಡಲು ಕ್ರಮ ವಹಿಸಬೇಕೆಂದು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಶಾಲೆಗಳ ಆವರಣದಲ್ಲಿ ಧೂಮಪಾನ ನಿಷೇಧಿಸಿದೆ ಹಾಗೂ ತಂಬಾಕು ಮುಕ್ತ ವಲಯ ಎಂಬ ಗೋಡೆ ಬರಹ ನಿಯಮಾನುಸಾರ ಬರೆಸಲಾಗಿರುತ್ತದೆ. ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿದ 2025–2026ನೇ ಸಾಲಿನಲ್ಲಿ 117 ಶಾಲಾ ಹಾಗೂ ಕಾಲೇಜುಗಳಲ್ಲಿ ತಂಬಾಕು ಉತ್ಪನ್ನಗಳಿಂದಾಗುವ ದುಷ್ಪರಿಣಾಮಗಳು ಮತ್ತು ಕೋಟ್ಪಾ ಕಾಯ್ದೆ–2003 ರ ಕುರಿತು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಗರ ಪ್ರದೇಶದಲ್ಲಿರುವ ಶಾಲಾ ಕಾಲೇಜುಗಳ ಆವರಣದಲ್ಲಿ ಸೆಕ್ಷನ್ 6(ಬಿ) ರಂತೆ 100 ಗಜ/ ಯಾರ್ಡ್ಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳನ್ನು 3X2 ಅಡಿ ಅಳತೆಯ ನಾಮಫಲಕವನ್ನು ಕಡ್ಡಾಯವಾಗಿ ಸಂಸ್ಥೆ ಪ್ರವೇಶ ದ್ವಾರದಲ್ಲಿ ಪ್ರದರ್ಶನ ಮಾಡಲಾಗಿದೆಯೇ ಎಂಬುದನ್ನು ಪರಿಶೀಲಿಸಬೇಕು. ಶಾಲಾ–ಕಾಲೇಜಿನ ನೂರು ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಪದಾರ್ಥ ಮಾರುವುದು ಕಂಡು ಬಂದರೆ ಕಾನೂನು ರೀತಿಯ ಕಠಿಣ ಕ್ರಮ ವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯ ರೆಸಾರ್ಟ್ ಹಾಗೂ ಹೋಂಸ್ಟೇಗಳಲ್ಲಿಯೂ ತಂಬಾಕು ಉತ್ಪನ್ನ ಮಾರಾಟವಾಗುವ ಬಗ್ಗೆ ಎಚ್ಚರ ವಹಿಸಬೇಕು ಹಾಗೂ ಅಲ್ಲಿಯೂ ದಾಳಿಯಂತಹ ಕಾರ್ಯಾಚರಣೆಗಳನ್ನು ಹಮ್ಮಿಕೊಳ್ಳಬೇಕು ಹಾಗೂ ಈ ಬಗ್ಗೆ ಜನಜಾಗೃತಿ ಅಗತ್ಯವಾಗಿದೆ. ಆ ಕಾರಣಗಳಿಂದಾಗಿ ಹೆಚ್ಚು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕಿರಣ್ ಶಂಕರ್, ತಾಲ್ಲೂಕು ಆರೋಗ್ಯಾಧಿಕಾರಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕೆ.ಎಸ್.ಆರ್.ಟಿ.ಸಿ ಸಿಬ್ಬಂದಿ, ತಂಬಾಕು ಘಟಕದ ಜಿಲ್ಲಾ ಸಮಾಜ ಕಾರ್ಯಕರ್ತರಾದ ಚಂದ್ರಶೇಖರ್, ಫೈಯಾಜ್ ಅಹಮ್ಮದ್, ಟಿವಿಎಲ್ ಕನ್ಸಲ್ಟಂಟ್ ತೀರ್ಥೇಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತಾ ಸೇರಿದಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಕೆಜಿಎಫ್‌ನಲ್ಲಿ ಪೊಲೀಸ್ ಸಿಬ್ಬಂದಿಗೆ ಪ್ರಥಮ ಚಿಕಿತ್ಸೆ ಅರಿವು ಕಾರ್ಯಾಗಾರ

ಕೆಜಿಎಫ್

ತುರ್ತು ಪರಿಸ್ಥಿತಿಗಳಲ್ಲಿ ಸಾರ್ವಜನಿಕರ ಜೀವ ರಕ್ಷಣೆ ಮಾಡುವ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯವರಿಗೆ ಪ್ರಥಮ ಚಿಕಿತ್ಸೆ ಹಾಗೂ ಸಿಪಿಆರ್ ಮಾಡುವ ವಿಧಾನದ ಬಗ್ಗೆ ಕೆಜಿಎಫ್ ಪೊಲೀಸ್ ಜಿಲ್ಲಾ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ ವಿಶೇಷ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ತಜ್ಞ ವೈದ್ಯರ ತಂಡವು ಪೊಲೀಸ್ ಸಿಬ್ಬಂದಿಗೆ ಪ್ರಾಯೋಗಿಕ ತರಬೇತಿ ನೀಡಿತು.

ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸುರೇಶ್ ಕುಮಾರ್, ಶಸ್ತ್ರಚಿಕಿತ್ಸಕರಾದ ಡಾ. ಗೌತಮ್ ಮತ್ತು ಡಾ. ಗಣೇಶ್ ಅವರು ತುರ್ತು ಸಂದರ್ಭಗಳನ್ನು ಹೇಗೆ ನಿರ್ವಹಿಸಬೇಕು ಎಂಬುದನ್ನು ವಿವರಿಸಿದರು. ರಸ್ತೆ ಅಪಘಾತಗಳು, ತಲೆಗೆ ಗಾಯವಾದಾಗ, ಹೃದಯಾಘಾತ ಸಂಭವಿಸಿದಾಗ, ಹಾವು ಅಥವಾ ನಾಯಿ ಕಚ್ಚಿದಾಗ, ಬೆಂಕಿ ಅವಘಡ ಹಾಗೂ ನೀರಿನಲ್ಲಿ ಮುಳುಗಿದಂತಹ ಸಂದರ್ಭಗಳಲ್ಲಿ ಜೀವ ಉಳಿಸಲು ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ವಿಶೇಷವಾಗಿ ಹೃದಯಾಘಾತಕ್ಕೊಳಗಾದವರಿಗೆ ಸಿಪಿಆರ್ ಮಾಡುವ ಸರಿಯಾದ ವಿಧಾನವನ್ನು ಪ್ರಾಯೋಗಿಕವಾಗಿ ತೋರಿಸಿಕೊಡಲಾಯಿತು.

ಪೊಲೀಸ್ ಇಲಾಖೆಯು ಸಾರ್ವಜನಿಕರೊಂದಿಗೆ ನಿರಂತರ ಸಂಪರ್ಕದಲ್ಲಿರುವುದರಿಂದ ಇಂತಹ ತರಬೇತಿಗಳು ಅತ್ಯಗತ್ಯ ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ವಿ. ಲಕ್ಷ್ಮಯ್ಯ, ಆರ್.ಪಿ.ಐ ವಿ. ಸೋಮಶೇಖರ್, ಪಿ.ಎಸ್.ಐ ನಾಗಪ್ಪ, ಆರ್.ಎಸ್.ಐ ಯಮನಪ್ಪ ಪಾತ್ರೋಟ್, ಜಗದೀಶ್ ಸೇರಿದಂತೆ ವಿವಿಧ ಠಾಣೆಗಳ ಒಟ್ಟು 105 ಪೊಲೀಸ್ ಸಿಬ್ಬಂದಿ ಪಾಲ್ಗೊಂಡಿದ್ದರು.

# ‘ಕ್ಷಯ ಮುಕ್ತ ಭಾರತ’ ಅಭಿಯಾನಕ್ಕೆ ಚಾಲನೆ

ತುಮಕೂರು

ರಾಷ್ಟ್ರಾದ್ಯಂತ ಹಮ್ಮಿಕೊಳ್ಳಲಾಗಿರುವ ‘ಕ್ಷಯ ಮುಕ್ತ ಭಾರತ’ ಅಭಿಯಾನದ ಅಂಗವಾಗಿ ಜಿಲ್ಲೆಯಲ್ಲಿ 100 ದಿನಗಳ ಕಾಲ ಸಕ್ರಿಯವಾಗಿ ಕ್ಷಯರೋಗ ಪತ್ತೆ ಹಚ್ಚುವ ಕಾರ್ಯಕ್ರಮಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಅಧಿಕೃತವಾಗಿ ಚಾಲನೆ ನೀಡಿದರು.

ಕಾರ್ಯಕ್ರಮದ ನಂತರ ಮಾತನಾಡಿದ ಅವರು, “ಜಿಲ್ಲೆಯಲ್ಲಿ ಕ್ಷಯರೋಗದ ಹೆಚ್ಚಿನ ಅಪಾಯವಿರುವ 682 ಗ್ರಾಮಗಳನ್ನು ಗುರುತಿಸಲಾಗಿದೆ. ಈ ಗ್ರಾಮಗಳಲ್ಲಿ ಸುಮಾರು 9,73,471 ಜನಸಂಖ್ಯೆ ಇದ್ದು, ಪ್ರತಿಯೊಬ್ಬರನ್ನೂ ತಪಾಸಣೆಗೆ ಒಳಪಡಿಸಿ ರೋಗ ಪತ್ತೆ ಹಚ್ಚುವ ಗುರಿ ಹೊಂದಲಾಗಿದೆ,” ಎಂದು ತಿಳಿಸಿದರು.

ಅಭಿಯಾನದ ಅವಧಿಯಲ್ಲಿ ಮಧುಮೇಹ (ಡಯಾಬಿಟಿಸ್), ರಕ್ತದೊತ್ತಡ ಹಾಗೂ ಹಳೆಯ ಕ್ಷಯರೋಗಿಗಳನ್ನು ವಿಶೇಷವಾಗಿ ತಪಾಸಣೆ ಮಾಡಲಾಗುವುದು. ದೀರ್ಘಕಾಲದ ಕಾಯಿಲೆಗಳಿಂದ ಬಳಲುತ್ತಿರುವವರ ಮೇಲೆ ಹೆಚ್ಚಿನ ನಿಗಾ ವಹಿಸಿ, ಅವರಿಗೆ ಅಗತ್ಯ ಚಿಕಿತ್ಸೆ ಒದಗಿಸುವ ಬಗ್ಗೆ ಜಿಲ್ಲೆಯಾದ್ಯಂತ ಅರಿವು ಮೂಡಿಸಲಾಗುವುದು ಎಂದು ಡಿಎಚ್‌ಒ ಮಾಹಿತಿ ನೀಡಿದರು.

ವಿಶ್ವ ಕ್ಷಯರೋಗ ದಿನದ ನಿಮಿತ್ತ ತುಮಕೂರಿನ ಸರ್ಕಾರಿ ಮತ್ತು ಖಾಸಗಿ ಬಸ್ ನಿಲ್ದಾಣಗಳು ಹಾಗೂ ಮಾರುಕಟ್ಟೆ ಪ್ರದೇಶಗಳಲ್ಲಿ ಕರಪತ್ರಗಳನ್ನು ಹಂಚುವ ಮೂಲಕ ಸಾರ್ವಜನಿಕರಲ್ಲಿ ರೋಗದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ಏಕಕಾಲಕ್ಕೆ ಈ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿಗಳು ಬಡ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಪೊಟ್ಟಣಗಳನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ‘ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್’ ಸೇರಿದ ಆದ್ಯ ಕುಂದಾಪುರ




ಕೋಲಾರ

ಕೇವಲ ಒಂದೂವರೆ ವರ್ಷದ ಪ್ರಾಯದಲ್ಲೇ ಅಸಾಧಾರಣ ಸ್ಮರಣಶಕ್ತಿ ಪ್ರದರ್ಶಿಸಿರುವ ಆದ್ಯ ಕುಂದಾಪುರ ಎಂಬ ಬಾಲಕಿ, ಪ್ರಾಣಿ–ಪಕ್ಷಿ ಸೇರಿದಂತೆ ನೂರಾರು ವಸ್ತುಗಳನ್ನು ತ್ವರಿತವಾಗಿ ಗುರುತಿಸುವ ಮೂಲಕ ‘ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್’ನ ‘ಐಬಿಆರ್ ಅಚೀವರ್’ ಗೌರವಕ್ಕೆ ಪಾತ್ರಳಾಗಿದ್ದಾಳೆ.

ಬೆಂಗಳೂರಿನ ಸಾಫ್ಟ್‌ವೇರ್ ಎಂಜಿನಿಯರ್‌ಗಳಾದ ದೀಪಕ್ ಕುಂದಾಪುರ ಮತ್ತು ವೈಶಾಲಿ ದಂಪತಿಯ ಪುತ್ರಿಯಾಗಿರುವ ಆದ್ಯ, ತನ್ನ ಅಪ್ರತಿಮ ಜಾಣ್ಮೆಯಿಂದ ಈ ಸಾಧನೆ ಮಾಡಿದ್ದಾಳೆ. ಆದ್ಯಳ ಈ ಸಾಧನೆಯನ್ನು ಗುರುತಿಸಿರುವ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆಯು ಪದಕ ಮತ್ತು ಪ್ರಮಾಣಪತ್ರ ನೀಡಿ ಗೌರವಿಸಿದೆ.

ಕೇವಲ 18 ತಿಂಗಳ ಪ್ರಾಯದ ಆದ್ಯ 30 ಪ್ರಾಣಿಗಳು, 31 ತರಕಾರಿಗಳು, 17 ಹಕ್ಕಿಗಳು, 11 ಹಣ್ಣುಗಳು, 18 ವಾಹನಗಳು ಹಾಗೂ 15 ವಿವಿಧ ಆಕಾರಗಳನ್ನು ನಿರಾಯಾಸವಾಗಿ ಗುರುತಿಸುತ್ತಾಳೆ. ಇಷ್ಟೇ ಅಲ್ಲದೆ 12 ಅಡುಗೆ ಸಾಮಗ್ರಿಗಳು, ದೇಹದ 12 ಅಂಗಾಂಗಗಳು, 16 ಎಲೆಕ್ಟ್ರಾನಿಕ್ ಸಾಧನಗಳು ಹಾಗೂ ಇತರ 33 ವಸ್ತುಗಳನ್ನು ಗುರುತಿಸಿ ಹೆಸರಿಸುವ ಮೂಲಕ ತಪಾಸಣಾ ಸಮಿತಿಯನ್ನು ಬೆರಗುಗೊಳಿಸಿದ್ದಾಳೆ.

ವಿಶೇಷವಾಗಿ 11 ಪ್ರಾಣಿಗಳ ಧ್ವನಿಯನ್ನು ಅಚ್ಚುಕಟ್ಟಾಗಿ ಅನುಕರಣೆ ಮಾಡುವ ಈಕೆಯ ಪ್ರತಿಭೆಯನ್ನು ಐಬಿಆರ್ ಸಂಸ್ಥೆ ಮುಕ್ತಕಂಠದಿಂದ ಶ್ಲಾಘಿಸಿದೆ.

ಆದ್ಯ ಕುಂದಾಪುರ ಅವರು ಹಿರಿಯ ಪತ್ರಕರ್ತ ವಿಶ್ವ ಕುಂದಾಪುರ ಹಾಗೂ ಶಿಕ್ಷಕಿ ಮಮತಾ ಕುಂದಾಪುರ ದಂಪತಿಯ ಮೊಮ್ಮಗಳಾಗಿದ್ದು, ಪುಟ್ಟ ಬಾಲಕಿಯ ಈ ರಾಷ್ಟ್ರಮಟ್ಟದ ಸಾಧನೆಗೆ ಕುಟುಂಬದವರು ಹಾಗೂ ಜಿಲ್ಲೆಯ ಗಣ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

# ಜೆಡಿಎಸ್ ಸಂಘಟನೆಗೆ ಚಾಲನೆ: ನೂತನ ಪದಾಧಿಕಾರಿಗಳ ನೇಮಕ

ದೇವನಹಳ್ಳಿ

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಜೆಡಿಎಸ್ ಪಕ್ಷವನ್ನು ತಳಮಟ್ಟದಿಂದ ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ತಾಲ್ಲೂಕಿನಾದ್ಯಂತ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ವಿ. ಮಂಜುನಾಥ್ ತಿಳಿಸಿದರು.



ಪಟ್ಟಣದ ಸರ್ಕ್ಯೂಟ್ ಹೌಸ್‌ನಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ನೂತನ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರ ವಿತರಿಸಿ ಅವರು ಮಾತನಾಡಿದರು. “ಮುಂಬರುವ ದಿನಗಳಲ್ಲಿ ಗ್ರಾಮ ಪಂಚಾಯಿತಿ, ಹೋಬಳಿ ಹಾಗೂ ಬೂತ್ ಮಟ್ಟದಲ್ಲಿ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಳ್ಳುವ ಬಗ್ಗೆ ವರಿಷ್ಠರಿಂದ ಇನ್ನೂ ಯಾವುದೇ ಸೂಚನೆ ಬಂದಿಲ್ಲ. ಸದ್ಯಕ್ಕೆ ನಮಗೆ ಕಾಂಗ್ರೆಸ್ ಪಕ್ಷವೇ ಪ್ರಬಲ ವಿರೋಧಿಯಾಗಿದ್ದು, ಆ ಪಕ್ಷವನ್ನು ಸೋಲಿಸಲು ಬೇಕಾದ ಎಲ್ಲಾ ಪೂರ್ವ ತಯಾರಿಗಳನ್ನು ಮಾಡಿಕೊಳ್ಳುತ್ತಿದ್ದೇವೆ,” ಎಂದು ಸ್ಪಷ್ಟಪಡಿಸಿದರು. ಮಾಜಿ ಶಾಸಕ ಡಾ. ನಿಸರ್ಗ ನಾರಾಯಣಸ್ವಾಮಿ ಮಾತನಾಡಿ, “ರಾಷ್ಟ್ರೀಯ ಅಧ್ಯಕ್ಷರಾಗಿ ಎಚ್.ಡಿ. ದೇವೇಗೌಡರು ಹಾಗೂ ರಾಜ್ಯಾಧ್ಯಕ್ಷರಾಗಿ ಎಚ್.ಡಿ. ಕುಮಾರಸ್ವಾಮಿ ಅವರು ನೇಮಕಗೊಂಡ ನಂತರ ರಾಜ್ಯದ 33 ಜಿಲ್ಲೆಗಳಲ್ಲಿ ಹೊಸ ಚೈತನ್ಯ ಬಂದಿದೆ. ದೇವನಹಳ್ಳಿಯಲ್ಲಿಯೂ ಪಕ್ಷಕ್ಕಾಗಿ ನಿಷ್ಠೆಯಿಂದ ದುಡಿಯುವ ಕಾರ್ಯಕರ್ತರನ್ನು ಗುರುತಿಸಿ ಜವಾಬ್ದಾರಿ ನೀಡಲಾಗಿದೆ. ನೂತನ ಪದಾಧಿಕಾರಿಗಳು ಎಲ್ಲರನ್ನು ಒಗ್ಗೂಡಿಸಿಕೊಂಡು ಸಾಮಾಜಿಕ ನ್ಯಾಯದಡಿ ಪಕ್ಷವನ್ನು ಮುನ್ನಡೆಸಬೇಕು,” ಎಂದು ಕರೆ ನೀಡಿದರು.

ನೂತನ ಪದಾಧಿಕಾರಿಗಳ ಪಟ್ಟಿ:
ಗೌರವಾಧ್ಯಕ್ಷರು: ಸಂಪಂಗಪ್ಪ (ಚೌಡಪ್ಪನಹಳ್ಳಿ)
ಅಧ್ಯಕ್ಷರು: ಎಸ್. ಮಹೇಶ್
ಕಾರ್ಯಾಧ್ಯಕ್ಷರು: ಜಿ.ಎ. ರವೀಂದ್ರ
ಪ್ರಧಾನ ಕಾರ್ಯದರ್ಶಿ: ಜಿ.ಎಂ. ಮನೋಹರ್
ಉಪಾಧ್ಯಕ್ಷರು: ವೆಂಕಟೇಶ್, ಶಿವಣ್ಣ ಕೆ., ಎಸ್. ನಾಗೇಶ್, ಕೆ.ವಿ. ಮುನಿರಾಜು, ಇ. ಮಂಜುನಾಥ್
ಕಾರ್ಯದರ್ಶಿಗಳು: ಯಲ್ಲಪ್ಪ, ರಾಮಾಂಜನೇಯದಾಸ್
ವಕ್ತಾರರು: ಗಂಗಾಧರ್

ಕಾರ್ಯಕ್ರಮದಲ್ಲಿ ಜೆಡಿಎಸ್ ಯುವ ಘಟಕದ ಅಧ್ಯಕ್ಷ ಟಿ. ರವಿ ಹೊಸಳ್ಳಿ, ಟೌನ್ ಅಧ್ಯಕ್ಷ ಮುನಿನಂಜಪ್ಪ, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಮಂಡಿಬೆಲೆ ರಾಜಣ್ಣ ಸೇರಿದಂತೆ ತಾಲ್ಲೂಕಿನ ನೂರಾರು ಮುಖಂಡರು ಮತ್ತು ಕಾರ್ಯಕರ್ತರು ಪಾಲ್ಗೊಂಡಿದ್ದರು.

# 28ರಿಂದ ರಾಮಕೋಟಿ ಜಪಯಜ್ಞ ಸಪ್ತಾಹ

ಚಿಕ್ಕಬಳ್ಳಾಪುರ

ಲೋಕಕಲ್ಯಾಣಾರ್ಥವಾಗಿ ಹಮ್ಮಿಕೊಳ್ಳಲಾಗಿರುವ 10ನೇ ವರ್ಷದ ‘ಶ್ರೀ ರಾಮಕೋಟಿ ಜಪಯಜ್ಞ ಸಪ್ತಾಹ’ ಕಾರ್ಯಕ್ರಮವು ಇದೇ 28 ರಿಂದ ಏಪ್ರಿಲ್ 4 ರವರೆಗೆ ತಾಲ್ಲೂಕಿನ ಅಂಕಣಗೊಂಡಿ ಶ್ರೀ ಬಯಲು ವೀರಾಂಜನೇಯ ಸ್ವಾಮಿ ದೇವಾಲಯದ ಪ್ರಾಂಗಣದಲ್ಲಿ ಜರುಗಲಿದೆ ಎಂದು ಟ್ರಸ್ಟ್ ಅಧ್ಯಕ್ಷ ಪುರದಗಡ್ಡೆ ಪಿ.ಎನ್. ಕೃಷ್ಣಪ್ಪ ತಿಳಿಸಿದ್ದಾರೆ.ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಇದೇ 28ರ ಶನಿವಾರ ಬೆಳಿಗ್ಗೆ 8:30ಕ್ಕೆ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಮಂಗಳಾನಂದ ಸ್ವಾಮೀಜಿ ಅವರು ಜ್ಯೋತಿ ಬೆಳಗಿಸುವ ಮೂಲಕ ಸಪ್ತಾಹವನ್ನು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೈವಾರ ಕ್ಷೇತ್ರದ ಧರ್ಮಾಧಿಕಾರಿಗಳಾದ ಡಾ. ಎಂ.ಆರ್. ಜಯರಾಮ್ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು. ಏಳು ದಿನಗಳ ಕಾಲ ನಿರಂತರವಾಗಿ ನಡೆಯಲಿರುವ ಈ ಜಪಯಜ್ಞದಲ್ಲಿ ಜಿಲ್ಲೆಯ ಸುಮಾರು 200ಕ್ಕೂ ಹೆಚ್ಚು ಗ್ರಾಮಗಳಿಂದ 500ಕ್ಕೂ ಅಧಿಕ ಭಜನಾ ತಂಡಗಳು ಭಾಗವಹಿಸಲಿವೆ. ಮೊದಲ ದಿನ ದಿಬ್ಬೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗರೆ ಕಾಲುವೆ ವೀರಾಂಜನೇಯ ಸ್ವಾಮಿ ಭಜನಾ ಮಂಡಳಿ, ದಿಬ್ಬೂರು ಶ್ರೀ ಯೋಗಿನಾರಾಯಣ ಭಜನಾ ಮಂಡಳಿ ಹಾಗೂ ಪುರದಗಡ್ಡೆ ವೀರಾಂಜನೇಯ ಸ್ವಾಮಿ ಭಜನಾ ಮಂಡಳಿ ಸೇರಿದಂತೆ ವಿವಿಧ ತಂಡಗಳು ಜಪಯಜ್ಞ ನಡೆಸಿಕೊಡಲಿವೆ. ಸಮಾಜದ ಒಳಿತಿಗಾಗಿ ನಡೆಯುವ ಈ ಪುಣ್ಯ ಕಾರ್ಯಕ್ರಮಕ್ಕೆ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಆಯೋಜಕ ತಂಡದ ಮುಖಂಡ ಗೋಪಾಲಾಚಾರಿ, ನಾರಾಯಣಸ್ವಾಮಿ ಹಾಗೂ ಪುರದಗಡ್ಡೆ ಕೃಷ್ಣಪ್ಪ ಮನವಿ ಮಾಡಿದ್ದಾರೆ.

# ಏಕಶಿಲಾ ಬೆಟ್ಟದ ಕಾವಲುಗಾರರಿಗೆ ಆತ್ಮೀಯ ಬೀಳ್ಕೊಡುಗೆ



ಮಧುಗಿರಿ

ಮಧುಗಿರಿಯ ಐತಿಹಾಸಿಕ ಏಕಶಿಲಾ ಬೆಟ್ಟದ ರಕ್ಷಣೆ ಹಾಗೂ ನಿರ್ವಹಣೆಯಲ್ಲಿ ಸತತ 17 ವರ್ಷಗಳ ಕಾಲ ಪ್ರಾಮಾಣಿಕ ಸೇವೆ ಸಲ್ಲಿಸಿದ ರಾಜ್ಯ ಪುರಾತತ್ವ ಇಲಾಖೆಯ ಸಿಬ್ಬಂದಿ ಹಾಗೂ ಮಾಜಿ ಸೈನಿಕ ಕೃಷ್ಣ ಕೆ. ಅವರಿಗೆ ಮಧುಗಿರಿ ಗೆಳೆಯರ ಬಳಗದ ವತಿಯಿಂದ ಆತ್ಮೀಯವಾಗಿ ಬೀಳ್ಕೊಡಲಾಯಿತು.

ಪಟ್ಟಣದ ಏಕಶಿಲಾ ಬೆಟ್ಟದ ಆವರಣದಲ್ಲಿ ನಡೆದ ಸರಳ ಸಮಾರಂಭದಲ್ಲಿ, ಕೃಷ್ಣ ಅವರ ಸುದೀರ್ಘ ಸೇವೆಯನ್ನು ಸ್ಮರಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಕೃಷ್ಣ ಅವರು ಬೆಟ್ಟದ ರಕ್ಷಣೆಯಲ್ಲಿ ತೋರಿದ ಬದ್ಧತೆ ಮತ್ತು ನಿಷ್ಠೆ ಮಾದರಿಯಾದುದು ಎಂದು ಶ್ಲಾಘಿಸಿದರು. ಮೂಲತಃ ಕುಣಿಗಲ್ ತಾಲ್ಲೂಕಿನವರಾದ ಕೃಷ್ಣ ಕೆ. ಅವರು ಈ ಹಿಂದೆ ಭಾರತೀಯ ಭದ್ರತಾ ಪಡೆಯಲ್ಲಿ 18 ವರ್ಷಗಳ ಕಾಲ ದೇಶ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು. ತದನಂತರ ಪುರಾತತ್ವ ಇಲಾಖೆಯಲ್ಲಿ ಮರು ನೇಮಕಗೊಂಡು ಬಾದಾಮಿ ಮತ್ತು ಹಾವೇರಿಯಲ್ಲಿ ತಲಾ 2 ವರ್ಷ ಸೇವೆ ಸಲ್ಲಿಸಿದ್ದರು. ಮಧುಗಿರಿಯ ಏಕಶಿಲಾ ಬೆಟ್ಟದಲ್ಲಿ ಸತತ 17 ವರ್ಷ 10 ತಿಂಗಳುಗಳ ಕಾಲ ಸ್ಮಾರಕಗಳ ರಕ್ಷಣೆ ಮತ್ತು ಪ್ರವಾಸಿಗರ ಮಾರ್ಗದರ್ಶನದಲ್ಲಿ ತೊಡಗಿಸಿಕೊಂಡು ಇದೀಗ ನಿವೃತ್ತರಾಗಿದ್ದಾರೆ. ಕಾರ್ಯಕ್ರಮದಲ್ಲಿ ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ರಾಜೇಂದ್ರ ಬಾಬು, ಉಪಾಧ್ಯಕ್ಷ ಸತೀಶ್, ಪತ್ರಕರ್ತರಾದ ಬಾಲು ಪಣೀಂದ್ರ, ನಂದೀಶ್, ನಾಗೇಶ್, ಗೌತಮ್, ಗಣೇಶ್ ಹಾಗೂ ಮೋಹನ್ ಸೇರಿದಂತೆ ಗೆಳೆಯರ ಬಳಗದ ಸದಸ್ಯರು ಉಪಸ್ಥಿತರಿದ್ದರು.

# ಜೇನುಹುಳು ದಾಳಿ ತಡೆ ಕ್ರಮಕ್ಕೆ ಜಿಲ್ಲಾಧಿಕಾರಿಗೆ ಮನವಿ

ತುಮಕೂರು

ಸಾರ್ವಜನಿಕರ ಮೇಲೆ ಜೇನು ಹುಳುಗಳು ದಾಳಿ ಮಾಡುತ್ತಿರುವ ಪ್ರಕರಣ ಜಿಲ್ಲೆಯಲ್ಲಿ ಹೆಚ್ಚುತ್ತಿದ್ದು, ತಡೆಗೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಯುವ ಘಟಕದ ಮುಖಂಡರು ಗುರುವಾರ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.



ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಅವರಿಗೆ ಮನವಿಪತ್ರ ಸಲ್ಲಿಸಿದ ಮಹಾಸಭಾ ಯುವ ಘಟಕ ಜಿಲ್ಲಾಧ್ಯಕ್ಷ ಡಾ. ದರ್ಶನ್ ಕೆ.ಎಲ್ ಮಾತನಾಡಿ, ಜಿಲ್ಲೆಯಲ್ಲಿ ಜೇನುಹುಳುಗಳ ದಾಳಿ ಮಾಡಿದ ಪ್ರಕರಣಗಳು ಹೆಚ್ಚಾಗುತ್ತಿವೆ. ಜೇನುಹುಳುಗಳ ಕಡಿತದಿಂದ ಗಾಯಗೊಂಡ ಅನೇಕರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇತ್ತೀಚೆಗೆ ಜೇನು ಕಡಿತದಿಂದ ತುಮಕೂರಿನ ವಿಜಯಕುಮಾರ್ ಎಂಬುವವರು ಮೃತಪಟ್ಟರು. ಇದರಿಂದ ಸಾರ್ವಜನಿಕರಲ್ಲಿ ಆತಂಕ ಹೆಚ್ಚಾಗಿದೆ ಎಂದು ಹೇಳಿದರು.

ಮರಗಳಲ್ಲಿ ಕಟ್ಟಿರುವ ಜೇನುಗೂಡಿಗೆ ಕಿಡಿಗೇಡಿಗಳು ಕಲ್ಲು ಹೊಡೆದಾಗ, ಪಕ್ಷಿ, ಪ್ರಾಣಿಗಳು ಜೇನುಗೂಡನ್ನು ಕೆಣಕಿದಾಗ ಗೂಡಿನ ಲಕ್ಷಾಂತರ ಸಂಖ್ಯೆಯ ಜೇನು ಹುಳುಗಳು ಎದ್ದು ಸಾರ್ವಜನಿಕರ ಮೇಲೆ ದಾಳಿ ಮಾಡುತ್ತವೆ. ವಾಹನ ಸಂಚಾರ ಮಾಡುವವರನ್ನೂ ಜೇನು ಹುಳುಗಳು ಕಚ್ಚಿ ಗಾಬರಿ ಮಾಡುತ್ತವೆ. ಇದರಿಂದ ವಾಹನ ಸಂಚಾರವೂ ಅಸ್ತವ್ಯಸ್ತವಾಗುತ್ತದೆ. ಜೇನುಹುಳುಗಳ ಹಾವಳಿಯಿಂದ ಸಾರ್ವಜನಿಕರಲ್ಲಿ ಭಯದ ವಾತಾವರಣ ಉಂಟಾಗಿದೆ. ಜೇನು ಹುಳುಗಳು ದಾಳಿ ಮಾಡಿ ಕಚ್ಚಿದ ಪರಿಣಾವ ಸಾವುನೋವಿನ ಪ್ರಕರಣಗಳು ನಡೆದಿದೆ. ಮಕ್ಕಳು, ವಯೋವೃದ್ಧರು ಜೇನುಹುಳುಗಳ ದಾಳಿಯಿಂದ ತಪ್ಪಿಸಿಕೊಳ್ಳಲಾಗದೆ ಅಪಾಯ ಅನುಭವಿಸುವಂತಾಗಿದೆ. ಈ ಕಾರಣದಿಂದ ತುಮಕೂರು ನಗರ ಸೇರಿದಂತೆ ಜಿಲ್ಲೆಯ ಎಲ್ಲಾ ಪಟ್ಟಣಗಳು, ಗ್ರಾಮಗಳಲ್ಲಿ ಜೇನು ಹುಳುಗಳ ದಾಳಿ ತಡೆಗೆ ಸೂಕ್ತ ಕ್ರಮ ತೆಗೆದುಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಮನವಿ ಮಾಡಿದರು.

ಇತ್ತೀಚೆಗೆ ನಗರದ ವಿಜಯಕುಮಾರ್ ಎಂಬುವವರು ಜೇನು ಹುಳುಗಳ ಕಡಿತದಿಂದ ಮೃತಪಟ್ಟಿದ್ದಾರೆ. ಈ ಸಂಬಂಧ ನಗರದ ಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತರ ಕುಟುಂಬಕ್ಕೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಡಾ. ದರ್ಶನ್ ವಿನಂತಿಸಿಕೊಂಡರು. ಈ ಸಂಬಂಧ ಉಪ ಅರಣ್ಯಸಂರಕ್ಷಣಾಧಿಕಾರಿಗಳು, ತುಮಕೂರು ನಗರಪಾಲಿಕೆ ಆಯುಕ್ತರಿಗೂ ಮನವಿಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಘಟಕದ ಜಿಲ್ಲಾ ಖಜಾಂಚಿ ಭಾನುಪ್ರಕಾಶ್ ಆರಾಧ್ಯ, ನಿರ್ದೇಶಕ ಬಸಯ್ಯ, ನಗರಪಾಲಿಕೆ ಘಟಕ ಅಧ್ಯಕ್ಷ ಎಂ.ಎಸ್. ಗುರುಪ್ರಸಾದ್, ಉಪಾಧ್ಯಕ್ಷ ರವಿಕುಮಾರ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಎಚ್.ಎಂ. ಲೋಕೇಶ್, ಬಸವ ಸೇನೆ ಅಧ್ಯಕ್ಷ ಕನ್ನಡ ಪ್ರಕಾಶ್ ಮೊದಲಾದವರು ಹಾಜರಿದ್ದರು.

# ಪರೀಕ್ಷಾ ಶುಲ್ಕ ಪಾವತಿಗೆ ದಿನಾಂಕ ನಿಗದಿ

ರಾಮನಗರ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ (ಕರಾಮುವಿ) ವಿವಿಧ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿಗಳ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ ನಿಗದಿಪಡಿಸಲಾಗಿದ್ದು, ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕಿ ಧನಲಕ್ಷ್ಮೀ ಎನ್. ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8690544544 ಅನ್ನು ಸಂಪರ್ಕಿಸಬಹುದು.

# ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ: ಗಂಗಾಧರ್

ಬಂಗಾರಪೇಟೆ

ಮಾನವನ ದುರಾಸೆಯಿಂದ ಸಮಾಜದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿ ಹರಡುತ್ತಿದ್ದು, ಇದು ದೇಶದ ಸುಸ್ಥಿರ ಅಭಿವೃದ್ಧಿಗೆ ಮಾರಕವಾಗಿದೆ. ಭ್ರಷ್ಟಾಚಾರ ಮುಕ್ತ ಸಮಾಜವನ್ನು ನಿರ್ಮಿಸುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯ ಎಂದು ಜನ ನಿರ್ಣಯ ವೇದಿಕೆಯ (ಜನಿವೇ) ರಾಜ್ಯಾಧ್ಯಕ್ಷ ಗಂಗಾಧರ್ ತಿಳಿಸಿದರು.



ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಯ ಬಳಿ ಆಯೋಜಿಸಲಾಗಿದ್ದ ಸಂಘಟನೆಯ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಗೆ ಚಾಲನೆ ನೀಡಿ ಅವರು ಮಾತನಾಡಿದರು. “ನೈತಿಕತೆ ಮತ್ತು ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳುವ ಮೂಲಕ ಭ್ರಷ್ಟಾಚಾರ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ಇದೇ ಉದ್ದೇಶದಿಂದ ರಾಜ್ಯಾದ್ಯಂತ ಸಂಘಟನೆಯನ್ನು ಬಲಪಡಿಸಲಾಗುತ್ತಿದೆ,” ಎಂದರು.

ನೂತನ ಪದಾಧಿಕಾರಿಗಳ ನೇಮಕ: ಇದೇ ಸಂದರ್ಭದಲ್ಲಿ ವೇದಿಕೆಯ ಪ್ರಮುಖ ಜವಾಬ್ದಾರಿಗಳನ್ನು ಘೋಷಿಸಲಾಯಿತು. ರಾಜ್ಯ ಪ್ರಚಾರ ಸಮಿತಿಯ ರಾಜ್ಯಾಧ್ಯಕ್ಷರಾಗಿ ವಿ. ಶಿವಾರೆಡ್ಡಿ, ಸಲಹಾ ಸಮಿತಿಯ ರಾಜ್ಯಾಧ್ಯಕ್ಷರಾಗಿ ಪಟ್ಟಂದೂರು ಬಿ. ಕೃಷ್ಣಪ್ಪ ಹಾಗೂ ರಾಜ್ಯ ಕಾರ್ಯದರ್ಶಿಯಾಗಿ ಶಿವಕುಮಾರ ಸ್ವಾಮಿ ಅವರನ್ನು ಆಯ್ಕೆ ಮಾಡಲಾಯಿತು.

ಒಗ್ಗಟ್ಟಿನ ಹೋರಾಟಕ್ಕೆ ಕರೆ: ನೂತನ ರಾಜ್ಯ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ, “ಅನ್ಯಾಯದ ವಿರುದ್ಧ ಹೋರಾಡಿ ಹಕ್ಕುಗಳನ್ನು ಪಡೆಯಲು ಸಂಘಟಿತ ಶಕ್ತಿ ಅಗತ್ಯ. ಪದಾಧಿಕಾರಿಗಳು ವೈಯಕ್ತಿಕ ನಿರ್ಧಾರಗಳಿಗಿಂತ ಎಲ್ಲರನ್ನು ಒಗ್ಗೂಡಿಸಿ, ಕಾನೂನುಬದ್ಧವಾಗಿ ಹೋರಾಟ ರೂಪಿಸಬೇಕು. ಸಂಘಟನೆಯು ಕೇವಲ ತಾಲ್ಲೂಕು ಅಥವಾ ಜಿಲ್ಲೆಗೆ ಸೀಮಿತವಾಗದೆ ರಾಜ್ಯದಾದ್ಯಂತ ವಿಸ್ತರಿಸಬೇಕು,” ಎಂದು ಸಲಹೆ ನೀಡಿದರು.

ಸಲಹಾ ಸಮಿತಿಯ ರಾಜ್ಯಾಧ್ಯಕ್ಷ ಕೃಷ್ಣಪ್ಪ ಮಾತನಾಡಿ, “ಸಂವಿಧಾನವು ನಮಗೆ ಹೋರಾಟ ಮಾಡುವ ಹಕ್ಕನ್ನು ನೀಡಿದೆ. ಯಾವುದೇ ಭಯವಿಲ್ಲದೆ ಸಂಘಟನೆಯನ್ನು ಬಲಪಡಿಸುವ ಮೂಲಕ ನಮ್ಮ ಹಕ್ಕುಗಳನ್ನು ಸಾಧಿಸೋಣ,” ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಉಪಾಧ್ಯಕ್ಷ ಜೀವನ್ ರೆಡ್ಡಿ, ತಾಲೂಕು ಅಧ್ಯಕ್ಷ ಶ್ರೀಧರ್, ಪ್ರಧಾನ ಕಾರ್ಯದರ್ಶಿ ಚೌಡಪ್ಪ, ಗೌರವ ಅಧ್ಯಕ್ಷ ಮಂಜುನಾಥ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# 2026–27ರ ತೆರಿಗೆ ಪಾವತಿ ರಿಯಾಯಿತಿ

ಹಾಸನ: 2026–27 ನೇ ಸಾಲಿನ ಆಸ್ತಿ ತೆರಿಗೆಯನ್ನು ಏಪ್ರಿಲ್ ಮಾಹೆಯ ಅಂತ್ಯದೊಳಗೆ ಪಾವತಿಸಿದ್ದಲ್ಲಿ ಶೇಕಡ 5 ರಷ್ಟು ರಿಯಾಯಿತಿ ನೀಡಲಾಗುವುದು, ನೀರಿನ ಶುಲ್ಕ ಪರಿಷ್ಕರಣೆಯಾಗಿದ್ದು, ಪ್ರತಿ ಮಾಹೆಗೆ ಗೃಹ ಬಳಕೆ ರೂ.200. ಗೃಹಯೇತರ ಬಳಕೆ ರೂ.400 ವಾಣಿಜ್ಯ / ಕೈಗಾರಿಕೆ ರೂ.800 ಗಳು ಹೆಚ್ಚಾಗಿದ್ದು, ಸಕಾಲದಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ತೆರಿಗೆ ಪಾವತಿಸಿ ಅರಸೀಕೆರೆ ನಗರದ ಅಭಿವೃದ್ಧಿಗೆ ನಗರಸಭೆಯೊಂದಿಗೆ ಸಹಕರಿಸುವಂತೆ ಅರಸೀಕೆರೆ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy